ಸಂಪುಟ: 05 ಸಂಚಿಕೆ: 23 ಪುಟಗಳು: 08 ಸೋಮವಾರ 07 ಏಪ್ರಿಲ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

ಮುಂಜಾನೆ ಮಾತು

ಜೀವನ ಎಂಬುದು ಕಠಿಣ ಸತ್ಯ, ಅದನ್ನು ಎದುರಿಸಿ. ನಿಮ್ಮ ಮಾರ್ಗದಲ್ಲಿ ಮುಂದುವರೆಯಿರಿ. ಅದು ಅಭೇದ್ಯವಾಗಿರಬಹುದು. ಆದರೆ ಆತ್ಮ ಅದಕ್ಕಿಂತ ಬಲಯುತವಾದುದು.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಜನರಲ್ ಮ್ಯಾನೇಜರ್ ನಾಗರಾಜಪ್ಪ 14 ದಿನ ಇಡಿ ಕಸ್ಟಡಿಗೆ

• ಉದಯವಾಹಿನಿ, ಬೆಂಗಳೂರು

ಭೋವಿ ನಿಗಮ ಹಗರಣ ಪ್ರಕರಣದಲ್ಲಿ ಇಡಿ ಅಧಿಕಾರಿಗಳು ನಿಗಮದ ಜನರಲ್ ಮ್ಯಾನೇಜರ್ ನಾಗರಾಜಪ್ಪ ಅವರನ್ನು ಬಂಧಿಸಲಾಗಿದ್ದು, ನ್ಯಾಯಾಲಯ ಅವರನ್ನು 14 ದಿನಗಳ ಕಾಲ ಇಡಿ ಕಸ್ಟಡಿಗೆ ಒಪ್ಪಿಸಿದೆ. ಪ್ರಕರಣ ಸಂಬಂಧ ಪಿ.4 ರಂದು ಇಡಿ ಅಧಿಕಾರಿಗಳು ಭೋವಿ ನಿಗಮ ಸೇರಿದಂತೆ 10 ಕಡೆಗಳಲ್ಲಿ ದಾಳಿ ನಡೆಸಿದ್ದರು. ಈ ವೇಳೆ ದಾಖಲೆಗಳು ಹಾಗೂ, ಆಸ್ತಿಗಳ ಡಿಜಿಟಲ್ ದಾಖಲೆಗಳನ್ನು ಜಪ್ತಿ ಮಾಡಿದ್ದರು. ಅಲ್ಲದೇ ನಿಗಮದ ಜನರಲ್ ಮ್ಯಾನೇಜರ್ ನಾಗರಾಜಪ್ಪ ಅವರನ್ನು ಬಂಧಿಸಲಾಗಿತ್ತು. ಭೋವಿ ನಿಗಮದಲ್ಲಿ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಆತ್ಮಹತ್ಯೆಗೆ ಶರಣಾದ ಜೀವಾ ಅವರ ಪಾತ್ರ ಇತ್ತಾ ಎಂಬ ಅನುಮಾನ ಇದೆ. ಇದರ ಬಗ್ಗೆ ಸಿಐಡಿ ಅಧಿಕಾರಿಗಳು ವಿಚಾರಣೆ ನಡೆಸಿದ್ದಾರೆ. ಜೀವಾ ಅವರ ಅನ್ನಿಕಾ ಎಂಟರ್ ಪ್ರೈಸಸ್‌ಗೆ ಕೋಟಿ ಕೋಟಿ ಹಣ ವರ್ಗಾವಣೆ ಆಗಿದೆ. ಅನ್ನಿಕಾ ಎಂಟರ್ ಪ್ರೈಸಸ್‌ಗೆ 7.16 ಕೋಟಿ ರೂ., ಸೋದರಿ ಹೆಸರಿನಲ್ಲಿರುವ ಹರ್ನಿತಾ ಕ್ರಿಯೇಷನ್ಸ್‌ಗೆ ಒಟ್ಟು 10.9 ಕೋಟಿ ರೂ. ವರ್ಗವಾಗಿದೆ. ಇನ್ನುಳಿದ ಮೂರು ಕಂಪನಿಗಳಲ್ಲಿ ನಿಗಮದ ಮಾಜಿ ಪ್ರಧಾನ ವ್ಯವಸ್ಥಾಪಕ ಬಿ.ಕೆ.ನಾಗರಾಜಪ್ಪರವರ ಆಪ್ತರ ಪಾಲುದಾರಿಕೆ ಇದೆ.

ಪೋಸ್ಟ್‌ಮಾರ್ಟಂಗೂ ದರ ವಿಧಿಸಿಬಿಟ್ರೆ ಸಾಯೋದಕ್ಕೂ ಜನ ಹಿಂಜರೀತಾರೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ಗ್ಯಾರಂಟಿಗಳಿಗೆ ಹಣ ಹೊಂದಿಸಲು ದಿನಕ್ಕೊಂದು ವಸ್ತುಗಳ ಬೆಲೆ ಏರಿಕೆ ಮಾಡುತ್ತಿದೆ. ಇನ್ನೂ ಪೋಸ್ಟ್‌ಮಾರ್ಟಂಗೂ ದರ ವಿಧಿಸಿಬಿಟ್ರೆ ಜನ ಸಾಯೋದಕ್ಕೂ ಹಿಂಜರಿಯುತ್ತಾರೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ರಾಜ್ಯ ಕಾಂಗ್ರೇಸ್ ಸರ್ಕಾರದ ವಿರುದ್ಧ ಕಿಡಿ ಕಾರಿದರು. ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಸದ ಟೆಂಡರ್‌ಗಳಲ್ಲಿ ಅಕ್ರಮ ಆರೋಪಕ್ಕೆ ಪ್ರತಿಕ್ರಿಯಿಸಿದರು. ಸ್ಮಾರ್ಟ್ ಮೀಟರ್‌ಗಳನ್ನೇ ಬಿಟ್ಟಿಲ್ಲ, ಇನ್ನೂ ಕಸವನ್ನ ಬಿಡ್ತಾರಾ ಇವ್ರು ಬರ್ತ್, ಡೆತ್ ಸರ್ಟಿಫಿಕೇಟ್, ನೋಂದಣಿ ಶುಲ್ಕ ಎಲ್ಲವನ್ನೂ ಏರಿಸಿದ್ದಾರೆ. ಇನ್ನೂ ಪೋಸ್ಟ್‌ಮಾರ್ಟಂಗೂ ಧರ ವಿಧಿಸಬೇಕು ಅಷ್ಟೇ, ಇದಾದರೆ ಜನ ಸಾಯೋದಕ್ಕೂ ಹಿಂಜರೀತಾರೆ ಅಂತ ವ್ಯಂಗ್ಯವಾಡಿದರು.

ಬಿಜೆಪಿ ಮಾಜಿ ರಾಜ್ಯಾಧ್ಯಕ್ಷರ ಪರವಾಗಿ ಹಾಲಿ ಕಾಂಗ್ರೇಸ್ ಅಧ್ಯಕ್ಷ ಪ್ರಾರ್ಥನೆ!

• ಉದಯವಾಹಿನಿ, ಮಂಗಳೂರು

ನಳಿನ್ ಕುಮಾರ್ ಕಟೀಲ್‌ಗೆ ಮತ್ತೆ ರಾಜಕೀಯ ಸ್ಥಾನಮಾನ ಸಿಗಲಿ ಎಂದು ನಾನು ಪ್ರಾರ್ಥಿಸುತ್ತೇನೆ ಎಂದು ಮಧೂರು ದೇವಸ್ಥಾನದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಪ್ರಾರ್ಥಿಸಿದ್ದಾರೆ. ಕೇರಳ ರಾಜ್ಯದ ಕಾಸರಗೋಡಿನ ಮಧೂರು ಶ್ರೀ ಮದನಂತೇಶ್ವರ ಸಿದ್ಧಿವಿನಾಯಕ ದೇವಸ್ಥಾನದ ಬ್ರಹ್ಮಕಲಶೋತ್ಸವದ ಹಿನ್ನೆಲೆ ಡಿಕೆಶಿ ದೇವಸ್ಥಾನಕ್ಕೆ ಭೇಟಿ ನೀಡಿದ್ದರು. ನಂತರ ನಡೆದ ಸಭಾ ಕಾರ್ಯಕ್ರಮದಲ್ಲಿ ನಳಿನ್ ಕುಮಾರ್ ಕಟೀಲ್ ಹಾಗೂ ಡಿಕೆ ಶಿವಕುಮಾರ್ ಒಂದೇ ವೇದಿಕೆಯಲ್ಲಿ ಜೊತೆಯಾಗಿದ್ದರು. ಈ ವೇಳೆ ನಳಿನ್ ಕುಮಾರ್ ಪರ ಡಿಕೆಶಿ ಬ್ಯಾಟಿಂಗ್ ಮಾಡಿದ್ದಾರೆ. ಧಾರ್ಮಿಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಡಿಕೆಶಿ, ನನ್ನ ಮಿತ್ರ, ಮಾಜಿ ಲೋಕಸಭಾ ಸದಸ್ಯ ನಳಿನ್ ಕುಮಾರ್ ಕಟೀಲ್ ಇದ್ದಾರೆ. ಅವರು ಮಾಜಿ ಅಂದುಕೊಳ್ಳೋದು ಬೇಡ, ರಾಜಕಾರಣದಲ್ಲಿ ಯಾವುದೂ ಶಾಶ್ವತ ಅಲ್ಲ. ಹೀರೋ ಝೀರೋ ಆಗುತ್ತಾನೆ, ಝೀರೋ ಹೀರೋ ಆಗುತ್ತಾನೆ. ನಾನು ಮತ್ತು ನೀವು ಒಂದೇ ವೇದಿಕೆಯಲ್ಲಿ ದೇವರನ್ನ ಪ್ರಾರ್ಥನೆ ಮಾಡಿದ್ದೇವೆ. ಭಗವಂತ ನಿಮ್ಮ ಎಲ್ಲಾ ವಿಘ್ನ ನಿವಾರಣೆ ಮಾಡಿ ಮತ್ತೆ ಈ ರಾಜ್ಯದಲ್ಲಿ ಸೇವೆ ಮಾಡುವ ಅವಕಾಶ ಕೊಡಲಿ. ಮತ್ತೆ ನಿಮಗೆ ಅವಕಾಶ ಸಿಗಲಿ ಅಂತ ನಾನೂ ಕೂಡ ಪ್ರಾರ್ಥನೆ ಮಾಡುತ್ತೇನೆ ಎಂದು ಹೇಳಿದರು.

ಬಂಡೀಪುರದಲ್ಲಿ ರಾತ್ರಿ ಸಂಚಾರ ನಿಷೇಧಕ್ಕೆ ಹೆಚ್ಚಿದ ಆಗ್ರಹ

• ಉದಯವಾಹಿನಿ, ಚಾಮರಾಜನಗರ

ಬಂಡೀಪುರದಲ್ಲಿ ರಾತ್ರಿ ವಾಹನ ಸಂಚಾರ ನಿಷೇಧ ತೆರವುಗೊಳಿಸುವ ಪ್ರಯತ್ನಕ್ಕೆ ತೀವ್ರ ವಿರೋಧ ವ್ಯಕ್ತವಾಗಿದೆ. ಬಂಡೀಪುರ ಉಳಿಸಿ ಅಭಿಯಾನಕ್ಕೆ ಭಾರೀ ಬೆಂಬಲ ವ್ಯಕ್ತವಾಗಿದ್ದು, ಭಾನುವಾರ ನಡೆದ ನಮ್ಮ ನಡಿಗೆ ಬಂಡೀಪುರದ ಕಡೆಗೆ ಪಾದಯಾತ್ರೆ ಸಾಕ್ಷಿಯಾಯಿತು.

ಬಂಡೀಪುರ ಅಭಯಾರಣ್ಯದ ಮೂಲಕ ತಮಿಳುನಾಡು ಕೇರಳ ರಾಜ್ಯಗಳಿಗೆ 2 ರಾಷ್ಟ್ರೀಯ ಹೆದ್ದಾರಿಗಳು ಹಾದು ಹೋಗಿವೆ. ಇಲ್ಲಿ ವಾಹನಗಳಿಗೆ ಸಿಲುಕಿ ವನ್ಯಜೀವಿಗಳು ಸಾವನ್ನಪ್ಪುತ್ತಿದ್ದ ಹಿನ್ನೆಲೆಯಲ್ಲಿ 2009ರಲ್ಲಿ ರಾತ್ರಿ ವಾಹನ ಸಂಚಾರ ನಿಷೇಧಿಸಲಾಗಿದೆ. ಕೆಲವು ಮಾಫಿಯಾಗಳಿಗೆ ಇದರಿಂದ ಭಾರೀ ಹೊಡೆತ ಬಿದ್ದಿದೆ. ಕೇರಳ ಸರ್ಕಾರವಂತೂ ಇಲ್ಲಿ ವಾಹನ ಸಂಚಾರ ನಿಷೇಧ ತೆರವುಗೊಳಿಸಲು ರಾಜ್ಯ ಸರ್ಕಾರದ ಮೇಲೆ ನಿರಂತರ ಒತ್ತಡ ಹೇರುತ್ತಲೇ ಬಂದಿದೆ.

- ಟ್ರಂಪ್ ಗೆ ಪ್ರತಿಭಟನೆಯ ಬಿಸಿ ಇದು ಆರ್ಥಿಕ ಹುಚ್ಚುತನ
- ಅಮೆರಿಕ ವಿನಾಶದ ನೀತಿ': ಆಡಳಿತ ವಿರುದ್ಧ ತಿರುಗಿಬಿದ್ದ ಜನ, ಬೀದಿಗಿಳಿದು ಹೋರಾಟ
- ಡೊನಾಲ್ಡ್ ಟ್ರಂಪ್ ಒಬ್ಬ ಹುಚ್ಚ; ಅಮೆರಿಕ ಅಧ್ಯಕ್ಷನ ವಿರುದ್ಧ ಸಿಡಿದೆದ್ದ ಲಕ್ಷಾಂತರ ಜನರು

ಟ್ರಂಪ್ ಹುಚ್ಚುತನ ತಿರುಗಿಬಿದ್ದ ಜನ

1. ಟ್ರಂಪ್ ಆರ್ಥಿಕ ನೀತಿ ವಿರುದ್ಧ ಸಿಡಿದೆದ್ದ ಅಮೆರಿಕ ಜನ
2. 50 ರಾಜ್ಯಗಳ ಲಕ್ಷಾಂತರ ಜನರು ಬೀದಿಗಳಿದು ಹೋರಾಟ
3. ಅಮೆರಿಕಗೆ ರಾಜ ಬೇಡ, ಟ್ರಂಪ್ ಹುಚ್ಚ ಎಂದು ಪೋಸ್ಟರ್

• ಉದಯವಾಹಿನಿ, ದೆಹಲಿ

ಎರಡನೇ ಬಾರಿಗೆ ಅಮೆರಿಕ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಡೊನಾಲ್ಡ್ ಟ್ರಂಪ್ ದೇಶದೊಳಗೆ ವಿರೋಧ ಎದುರಿಸಿದ್ದು, ಒಡೆದು ಆಳುವ ನೀತಿ ಹೊಂದಿದ್ದಾರೆ ಎಂದು ಆರೋಪಿಸಿ ಅಮೆರಿಕದ ಪ್ರಮುಖ ನಗರಗಳ ಬೀದಿಗಳಲ್ಲಿ ಹತ್ತಾರು ಸಾವಿರ ಜನರು ಪ್ರತಿಭಟನೆ ನಡೆಸಿದರು. ಸರ್ಕಾರದ ಹಲವು ಇಲಾಖೆಗಳಲ್ಲಿ ಸಿಬ್ಬಂದಿ ಕಡಿತದಿಂದ ಹಿಡಿದು ವ್ಯಾಪಾರ ಸುಂಕಗಳು ಮತ್ತು ನಾಗರಿಕ ಸ್ವಾತಂತ್ರ್ಯಗಳನ್ನು ನಾಶಪಡಿಸುವವರೆಗೆ ರಿಪಬ್ಲಿಕನ್ ಪಕ್ಷದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನೀತಿಗಳ ವಿರೋಧಿಗಳು ವಾಷಿಂಗ್ಟನ್, ನ್ಯೂಯಾರ್ಕ್, ಹೂಸ್ಟನ್, ಫ್ಲೋರಿಡಾ, ಕೊಲೊರಾಡೋ, ಲಾಸ್ ಏಂಜಲೀಸ್, ಇತರ ಸ್ಥಳಗಳಲ್ಲಿ ಪ್ರತಿಭಟನಾ ರ‍್ಯಾಲಿ ನಡೆಸಿದರು.

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನೀತಿಗಳು ನಮಗೆ ಸಿಟ್ಟು ತರಿಸುತ್ತಿವೆ. ಸರ್ಕಾರದ ಸವಲತ್ತುಗಳನ್ನು ಪಡೆದು ಬಿಳಿಯ ಅತ್ಯಾಚಾರಿಗಳ ಗುಂಪೊಂದು ನಮ್ಮ ದೇಶವನ್ನು ನಿಯಂತ್ರಿಸುತ್ತಿದೆ.

ವಾಷಿಂಗ್ಟನ್‌ನಲ್ಲಿ ಸಾವಿರಾರು ಪ್ರತಿಭಟನಾಕಾರರು ರಾಷ್ಟ್ರೀಯ ಮಾಲ್‌ನಲ್ಲಿ ಜಮಾಯಿಸಿ ಟ್ರಂಪ್ ವಿರುದ್ಧ ಪ್ರತಿಭಟನೆ ನಡೆಸಿದರು. ಡೊನಾಲ್ಡ್ ಟ್ರಂಪ್ ನೀತಿಯಿಂದಾಗಿ ನಾವು ನಮ್ಮ ಮಿತ್ರ ರಾಷ್ಟ್ರಗಳನ್ನು ಕಳೆದುಕೊಳ್ಳುವಂತೆ ಮಾಡುತ್ತಿದೆ. ವಲಸಿಗರನ್ನು ಗಡಿಪಾರು ಮಾಡುತ್ತಿದ್ದಾರೆ ಮತ್ತು ಇನ್ನೂ ಪ್ರಯತ್ನಿಸುತ್ತಿದೆ. ಲಿಂಗತ್ವ ಅಲ್ಪಸಂಖ್ಯಾತರ ಸಮುದಾಯಕ್ಕೆ ನೀಡುತ್ತಿದ್ದ ರಕ್ಷಣೆಯನ್ನು ಕಡಿಮೆ ಮಾಡುತ್ತಿದೆ. ಆಡಳಿತವನ್ನು ಹಾಳು ಮಾಡುತ್ತಿದ್ದಾರೆ ಎಂದು ಬೈಕ್ ಪ್ರವಾಸದ ಮಾರ್ಗದರ್ಶಕರಾದ ಡಯಾನ್ ಕೊಲಿಫ್ರಾತ್ ಹೇಳಿದರು.

ಲಿಂಗತ್ವ ಅಲ್ಪ ಸಂಖ್ಯಾತರ ರಕ್ಷಣೆಗೆ ಕಡಿವಾಣ

ಇದು ಸರಿಯಲ್ಲ ಎಂದು ನ್ಯೂಯಾರ್ಕ್ ವರ್ಣಚಿತ್ರಕಾರ ಶೈನಾ ಕೆಸ್ನರ್ ಮ್ಯಾನ್‌ಹ್ಯಾಟನ್‌ನ ಹೃದಯಭಾಗದಲ್ಲಿ ಮೆರವಣಿಗೆ ನಡೆಸುತ್ತಿದ್ದ ಜನಸಮೂಹವನ್ನು ಉದ್ದೇಶಿಸಿ ಹೇಳಿದ್ದಾರೆ. ವಾಷಿಂಗ್ಟನ್‌ನಲ್ಲಿ, ಸಾವಿರಾರು ಪ್ರತಿಭಟನಾಕಾರರು ನ್ಯಾಷನಲ್ ಮಾಲ್‌ನಲ್ಲಿ ಜಮಾಯಿಸಿದರು, ಅಲ್ಲಿ ಡಜನ್ ಗಟ್ಟಲೆ ಭಾಷಣಕಾರರು ಟ್ರಂಪ್‌ಗೆ ವಿರೋಧ ವ್ಯಕ್ತಪಡಿಸಿದರು. ನ್ಯೂ ಹ್ಯಾಂಪ್‌ಶೈರ್‌ನಿಂದ ಬಸ್ ಮತ್ತು ವ್ಯಾನ್‌ನಲ್ಲಿ ಸುಮಾರು 100 ಜನರು ಬಂದಿದ್ದರು, ಡೊನಾಲ್ಡ್ ಟ್ರಂಪ್ ಅವರ ಅತಿರೇಕದ ಆಡಳಿತ ಜನರನ್ನು ವಿನಾಶಕ್ಕೆ ತರುತ್ತಿದೆ ಎಂದು ಬೈಕ್ ಪ್ರವಾಸ ಮಾರ್ಗದರ್ಶಿ 64 ವರ್ಷದ ಡಯೇನ್ ಕೋಲಿಫ್ರಾತ್ ಹೇಳಿದರು.

ಸರ್ಕಾರವನ್ನು ನಾಶಮಾಡುತ್ತಿದ್ದಾರೆ: ಲಾಸ್ ಏಂಜಲೀಸ್‌ನಲ್ಲಿ, ಡಿಸ್ಟೋಪಿಯನ್ ಕಾದಂಬರಿ ದಿ ಹ್ಯಾಂಡ್‌ಮೇಡ್ಸ್ ಟೇಲ್ ನ ಪಾತ್ರಧಾರಿಯ ವೇಷ ಧರಿಸಿಕೊಂಡು ಪ್ರತಿಭಟನಾ ರ‍್ಯಾಲಿಗೆ ಬಂದ ಮಹಿಳೆಯೊಬ್ಬರು, ನನ್ನ ಗರ್ಭಾಶಯದಿಂದ ಹೊರಬನ್ನಿ ಎಂಬ ಸಂದೇಶದೊಂದಿಗೆ ದೊಡ್ಡ ಧ್ವಜವನ್ನು ಬೀಸಿದರು, ಇದು ಟ್ರಂಪ್ ಅವರ ಗರ್ಭಪಾತ ವಿರೋಧಿ ನೀತಿಗಳನ್ನು ಉಲ್ಲೇಖಿಸುತ್ತದೆ.

ಕೊಲೊರಾಡೋದ ಡೆನ್ವರ್‌ನಲ್ಲಿ ಪ್ರತಿಭಟನಾಕಾರರ ದೊಡ್ಡ ಗುಂಪಿನಲ್ಲಿ ಒಬ್ಬ ವ್ಯಕ್ತಿ ಯುಎಸ್‌ಎಗೆ ರಾಜ ಇಲ್ಲ ಎಂದು ಓದುವ ಫಲಕವನ್ನು ಹಿಡಿದಿದ್ದರು. ರ‍್ಯಾಲಿಗಳು ಕೆಲವು ಯುರೋಪಿಯನ್ ರಾಜಧಾನಿಗಳಿಗೂ ವಿಸ್ತರಿಸಿದವು, ಅಲ್ಲಿ ಪ್ರತಿಭಟನಾಕಾರರು ಟ್ರಂಪ್ ಮತ್ತು ಅವರ ಆಕ್ರಮಣಕಾರಿ ವ್ಯಾಪಾರ ನೀತಿಗಳಿಗೆ ವಿರೋಧ ವ್ಯಕ್ತಪಡಿಸಿದರು.

ಅಮೆರಿಕದಲ್ಲಿ ಏನಾಗುತ್ತಿದೆ ಎಂಬುದು ಎಲ್ಲರ ಸಮಸ್ಯೆ ಎಂದು ಉಭಯ ಯುಎಸ್-ಬ್ರಿಟಿಷ್ ನಾಗರಿಕ ಲಿಜ್ ಚೇಂಬರ್ಲಿನ್ ಲಂಡನ್ ರ‍್ಯಾಲಿಯಲ್ಲಿ ಎಎಫ್‌ಪಿಗೆ ತಿಳಿಸಿದರು. ಇದು ಆರ್ಥಿಕ ಹುಚ್ಚುತನ, ಜಾಗತಿಕ ಹಿಂಜರಿತಕ್ಕೆ ತಳ್ಳಲಿದ್ದಾರೆ ಎಂದು ಕೂಗುತ್ತಿದ್ದರು.

ಬರ್ಲಿನ್‌ನಲ್ಲಿ, 70 ವರ್ಷದ ನಿವೃತ್ತ ಸುಸೇನ್ ಫೆಸ್ಟ್ ಎಂಬುವವರು ಟ್ರಂಪ್ ಸಾಂವಿಧಾನಿಕ ಬಿಕ್ಕಟ್ಟನ್ನು ಸೃಷ್ಟಿಸಿದ್ದಾರೆ ಆ ವ್ಯಕ್ತಿ ಒಬ್ಬ ಹುಚ್ಚ ಎಂದು ಆಕ್ರೋಶ ಹೊರಹಾಕಿದರು. ಅಮೆರಿಕದಲ್ಲಿ, ಮೂವ್‌ಆನ್ ಮತ್ತು ವುಮೆನ್ಸ್ ಮಾರ್ಚ್‌ನಂತಹ ಎಡಪಂಥೀಯ ಗುಂಪುಗಳ ಒಕ್ಕೂಟವು 1,000 ಕ್ಕೂ ಹೆಚ್ಚು ನಗರಗಳಲ್ಲಿ ಮತ್ತು ಪ್ರತಿ ಕಾಂಗ್ರೇಸ್ ಜಿಲ್ಲೆಯಲ್ಲಿ ಹ್ಯಾಂಡ್ಸ್ ಆಫ್ ಕಾರ್ಯಕ್ರಮಗಳನ್ನು ಆಯೋಜಿಸಿದೆ.

ಬಿಳಿಯರ ಗುಂಪು ನಮ್ಮನ್ನು ನಿಯಂತ್ರಿಸುತ್ತಿದೆ: ಡೊನಾಲ್ಡ್ ಟ್ರಂಪ್ ನೀತಿಗಳು ನಮಗೆ ಸಿಟ್ಟು ತರಿಸುತ್ತಿದೆ.

ಆತನ ಯಾವ ನಿಯಮವೂ ಅರ್ಥವೇ ಆಗುತ್ತಿಲ್ಲ, ಬಿಳಿಯರ ಅತ್ಯಾಚಾರಿಗಳ ಗುಂಪೊಂದು ನಮ್ಮನ್ನು ನಿಯಂತ್ರಿಸುತ್ತಿದೆ. ದೇಶವನ್ನು ಆಳ್ವಿಕೆ ಮಾಡುತ್ತಿದೆ. ಇದು ಒಳ್ಳೆಯದಲ್ಲ ಎಂದು ನ್ಯೂಯಾರ್ಕ್‌ನ ವ್ಯಂಗ್ಯ ಚಿತ್ರಕಾರ ಶೈನಾ ಕೆಸ್ನರ್ ಹೇಳಿದರು.

ಟ್ರಂಪ್ ಒಬ್ಬ ಹುಚ್ಚ

ಬರ್ಲಿನ್‌ನಲ್ಲಿ 70 ವರ್ಷದ ನಿವೃತ್ತ ಉದ್ಯೋಗಿ ಸುಸಾನೆ ಫೆಸ್ಟ್, ಟ್ರಂಪ್ ಸಾಂವಿಧಾನಿಕ ಬಿಕ್ಕಟ್ಟನ್ನು ಸೃಷ್ಟಿಸಿದ್ದಾರೆ. ಆತ ಒಬ್ಬ ಹುಚ್ಚ ಎಂದು ಹೇಳಿದರು.?ನನ್ನ ನೀತಿಗಳು ಎಂದಿಗೂ ಬದಲಾಗುವುದಿಲ್ಲ? ಎಂದು ಒಂದೆಡೆ ಟ್ರಂಪ್ ಹೇಳಿಕೆ ನೀಡಿದ್ದಾರೆ. ಮತ್ತೊಂದೆಡೆ ಜನರು ಬೀದಿಗಿಳಿದು ಆಕ್ರೋಶ ಹೊರ ಹಾಕುತ್ತಿದ್ದಾರೆ ಮುಂದಿನ ದಿನಗಳಲ್ಲಿ ಈ ಹೋರಾಟ ಇನ್ನೆಷ್ಟರ ಮಟ್ಟಿಗೆ ಕೊಂಡೊಯ್ಯುತ್ತದೆ ಎಂದು ಕಾದು ನೋಡಬೇಕಾಗಿದೆ.

ಟ್ರಂಪ್ ಅವರ ಗರ್ಭಪಾತ ವಿರೋಧಿ ನೀತಿ

ಲಾಸ್ ಏಂಜಲೀಸ್‌ನಲ್ಲಿ, ಡಿಸ್ಟೋಪಿಯನ್ ಕಾದಂಬರಿ ದಿ ಹ್ಯಾಂಡ್‌ಮೇಡ್ಸ್ ಟೇಲ್‌ನ ಪಾತ್ರಧಾರಿಯ ವೇಷ ಧರಿಸಿಕೊಂಡು ಪ್ರತಿಭಟನಾ ರ‍್ಯಾಲಿಗೆ ಬಂದ ಮಹಿಳೆಯೊಬ್ಬರು, ನನ್ನ ಗರ್ಭಾಶಯದಿಂದ ಹೊರಬನ್ನಿ ಎಂಬ ಸಂದೇಶದೊಂದಿಗೆ ದೊಡ್ಡ ಧ್ವಜವನ್ನು ಬೀಸಿದರು, ಇದು ಟ್ರಂಪ್ ಅವರ ಗರ್ಭಪಾತ ವಿರೋಧಿ ನೀತಿಗಳನ್ನು ಉಲ್ಲೇಖಿಸುತ್ತದೆ. ಅಮೆರಿಕದಲ್ಲಿ, ಮೂವ್‌ಆನ್ ಮತ್ತು ವುಮೆನ್ಸ್ ಮಾರ್ಚ್ ನಂತಹ ಎಡ-ಒಲವುಳ್ಳ ಗುಂಪುಗಳು 1,000 ಕ್ಕೂ ಹೆಚ್ಚು ನಗರಗಳಲ್ಲಿ ಮತ್ತು ಪ್ರತಿ ಕಾಂಗ್ರೇಸ್ ಜಿಲ್ಲೆಯಲ್ಲಿ ಹ್ಯಾಂಡ್ಸ್ ಆಫ್ ಕಾರ್ಯಕ್ರಮಗಳನ್ನು ಆಯೋಜಿಸಿದ್ದವು.

ಮೆಟ್ರೋ ದರ ಏರಿಕೆಗೂ ಆರ್‌ಟಿಐನಲ್ಲಿ ಬಹಿರಂಗವಾದ ಮಾಹಿತಿಗೂ ಏನು ಸಂಬಂಧ?

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಟಿಕೆಟ್ ದರದಲ್ಲಿ ಗಣನೀಯವಾಗಿ ಏರಿಕೆಯನ್ನು ಮಾಡಿ, ಕಣ್ಣೊರೆಸುವಂತೆ ಸ್ವಲ್ಪ ಕಮ್ಮಿ ಮಾಡಿತ್ತು.

ಬೆಲೆ ಏರಿಕೆಗೆ ವ್ಯಾಪಕ ವಿರೋಧದ ನಡುವೆ, ಬೆಂಗಳೂರು ಸೆಂಟ್ರಲ್ ಲೋಕಸಭಾ ಕ್ಷೇತ್ರದ ಸಂಸದ ಪಿ.ಸಿ.ಮೋಹನ್, ದರ ಏರಿಕೆಯನ್ನು ಪ್ರಶ್ನಿಸಿದ್ದಾರೆ.

ದರ ಏರಿಸಿ ಇಷ್ಟು ದಿನವಾದ ನಂತರ ಯಾಕೆ ಪಿ.ಸಿ.ಮೋಹನ್ ಪ್ರತಿಕ್ರಿಯೆ ನೀಡುತ್ತಿದ್ದಾರೆ ಅಂದರೆ, ಅದಕ್ಕೆ ಕಾರಣ ಮಾಹಿತಿ ಹಕ್ಕು ಕಾಯ್ದೆಯಡಿ ಬಂದ ಮಾಹಿತಿ. ಇದರ ಪ್ರಕಾರ, ದರ ಏರಿಕೆಯ ಮೊದಲು ವಿದೇಶ ಪ್ರವಾಸಕ್ಕೆಂದು 26 ಲಕ್ಷ ರೂಪಾಯಿಗಳನ್ನು ನಮ್ಮ ಮೆಟ್ರೋ ಖರ್ಚು ಮಾಡಿತ್ತು.

ಹಾಂಗ್ ಕಾಂಗ್ ಮತ್ತು ಸಿಂಗಾಪುರದಲ್ಲಿ ಅಧ್ಯಯನ ನಡೆಸುವ ಕಾರಣವನ್ನು ಇಟ್ಟುಕೊಂಡು ವಿದೇಶ ಪ್ರವಾಸಕ್ಕೆ ಹೋಗಲಾಗಿತ್ತು ಮತ್ತು ಇದಕ್ಕೆ ಭಾರೀ ಪ್ರಮಾಣದಲ್ಲಿ ಹಣವನ್ನು ವ್ಯಯಿಸಲಾಗಿತ್ತು. ಇದನ್ನು ಸಂಸದರು ಖಾರವಾಗಿ ಪ್ರಶ್ನಿಸಿದ್ದಾರೆ.

ಬೆಂಗಳೂರು ಮೆಟ್ರೋ ಕಾರ್ಪೊರೇಶನ್ ಲಿಮಿಟೆಡ್ ಸಂಸ್ಥೆಯ ದರ ನಿಗದಿ ಸಮಿತಿಯ ಸದಸ್ಯರು ವಿದೇಶ ಪ್ರವಾಸಕ್ಕೆ ಅಧ್ಯಯನಕ್ಕೆಂದು ಹೋಗಿದ್ದರು. ಈ ಹಣವನ್ನು ಅದಕ್ಕಾಗಿ ಬಳಸಿಕೊಳ್ಳಲಾಗಿದೆ ಎಂದು ಮಾಹಿತಿ ಹಕ್ಕು ಕಾಯ್ದೆಯಡಿಯಲ್ಲಿ ಮಾಹಿತಿ ಲಭ್ಯವಾಗಿದೆ. ಹಾಂಕ್ ಕಾಂಗ್ ಮತ್ತು ಸಿಂಗಾಪುರದ ಮೆಟ್ರೋ ವ್ಯವಸ್ಥೆ ಹೇಗಿದೆ, ಅಲ್ಲಿನ ದರ ಪಟ್ಟಿಗಳು ಯಾವ ರೀತಿ ಇದೆ ಎನ್ನುವುದನ್ನು ಅಧ್ಯಯನ ಮಾಡಲು ಬಿಎಂಆರ್ ಸಿಎಲ್ ಈ ವಿದೇಶ ಪ್ರವಾಸವನ್ನು ಆಯೋಜಿಸಿತ್ತು. ಒಟ್ಟಾರೆಯಾಗಿ ಈ ಪ್ರವಾಸಕ್ಕೆ 25.85 ಲಕ್ಷ ರೂಪಾಯಿ ಖರ್ಚಾಗಿದೆ.

ದರ ನಿಗದಿ ಸಮಿತಿಯ ಸದಸ್ಯರಿಗೆ 12.97 ಲಕ್ಷ ಮತ್ತು ಬಿಎಂಆರ್ ಸಿಎಲ್ ಅಧಿಕಾರಿಗಳಿಗೆ 12.88 ಲಕ್ಷ ರೂಪಾಯಿ ಖರ್ಚಾಗಿರುವ ಮಾಹಿತಿ ಆರ್‌ಟಿಐ ಮೂಲಕ ಲಭ್ಯವಾಗಿದೆ. ನಮ್ಮ ಮೆಟ್ರೋ ಮಾಡಿರುವ ಬೆಲೆ ಏರಿಕೆಯಿಂದ, ಪ್ರಯಾಣಿಕರು ಹೈರಾಣರಾಗಿದ್ದಾರೆ. ಕೆಲವೊಂದು ಕಡೆ, ಶೇ. 71ರಷ್ಟು ದರ ಹೆಚ್ಚಾಗಿದೆ. ಸಂಸದ ಪಿ.ಸಿ.ಮೋಹನ್ ಅವರು ತನ್ನ ಸಾಮಾಜಿಕ ಜಾಲತಾಣಾ ಅಕೌಂಟ್ ಮೂಲಕ ಮೆ

ಹರಿನಾಮ ಸಂಕೀರ್ತನೆ

• ಉದಯವಾಹಿನಿ, ಬೆಂಗಳೂರು

ಶ್ರೀರಾಮ ನವಮಿ ಸಂಗೀತೋತ್ಸವದ ಪ್ರಯುಕ್ತ ಏಪ್ರಿಲ್ 9, ಬುಧವಾರ ಸಂಜೆ 6-30ಕ್ಕೆ ಕು|| ವಾಣಿಶ್ರೀ ರಾಮಕೃಷ್ಣ ಮತ್ತು ಶ್ರೀಮತಿ ಮೈತ್ರಿ ಇವರಿಂದ ಹರಿನಾಮ ಸಂಕೀರ್ತನೆ. ವಾದ್ಯ ಸಹಕಾರ : ಶ್ರೀ ಟಿ.ಎಸ್. ರಮೇಶ್ (ಕೀ-ಬೋರ್ಡ್), ಶ್ರೀ ಸರ್ವೋತ್ತಮ (ತಬಲಾ). ಸ್ಥಳ : ಶ್ರೀ ರಾಮ ಮಂದಿರ, ಈಸ್ಟ್ ಪಾರ್ಕ್ ರಸ್ತೆ, ಅಂಚೆ ಕಚೇರಿ ಹತ್ತಿರ, ಮಲ್ಲೇಶ್ವರಂ, ಬೆಂಗಳೂರು-560003

ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಮಾಜಿ ಪ್ರಧಾನ ವ್ಯವಸ್ಥಾಪಕನ ಬಂಧನ

• ಉದಯವಾಹಿನಿ, ಬೆಂಗಳೂರು

ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಮಾಜಿ ಪ್ರಧಾನ ವ್ಯವಸ್ಥಾಪಕನನ್ನು ಬಂಧಿಸಲಾಗಿದೆ ಎಂದು ಜಾರಿ ನಿರ್ದೇಶನಾಲಯ ಭಾನುವಾರ ತಿಳಿಸಿದೆ. ಏಪ್ರಿಲ್ 5ರಂದು ನಾಗರಾಜಪ್ಪ ಅವರನ್ನು ಬಂಧಿಸಲಾಗಿದ್ದು, ಪಿಎಂಎಲ್ ವಿಶೇಷ ನ್ಯಾಯಾಲಯ 14 ದಿನಗಳ ಕಾಲ ಕಸ್ಟಡಿಗೆ ನೀಡಿದೆ ಎಂದು ಇಡಿ ಪ್ರಕಟಣೆಯಲ್ಲಿ ತಿಳಿಸಿದೆ. ಕರ್ನಾಟಕದ ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿ ಸೇರ್ಪಡೆಗೊಂಡಿರುವ ಭೋವಿ ಸಮುದಾಯದ ಕಲ್ಯಾಣಕ್ಕಾಗಿ ಕೆಬಿಡಿಸಿಯಿಂದ 97 ಕೋಟಿ ರೂಪಾಯಿ ದುರುಪಯೋಗ ಮತ್ತು ವರ್ಗಾವಣೆ ಆರೋಪದ ಮೇಲೆ ಪೊಲೀಸರು ಅನೇಕ ಎಫ್ಐಆರ್ ದಾಖಲಿಸಿದ್ದರು. ಪ್ರಕರಣದ ವಿವಿಧ ಆರೋಪಿಗಳ ವಿರುದ್ಧ ಇಡಿ ಏಪ್ರಿಲ್ 4 ರಂದು ಮತ್ತು ಬೆಂಗಳೂರಿನ ವಿವಿ ಟವರ್‌ನಲ್ಲಿರುವ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಕಚೇರಿಯಲ್ಲಿ ಶೋಧ ಕಾರ್ಯಾಚರಣೆ ನಡೆಸಿತ್ತು. ಭೋವಿ ಸಮುದಾಯದ ಏಜೆಂಟರು ಒದಗಿಸಿದ ನಕಲಿ ಫಲಾನುಭವಿಗಳ ಬ್ಯಾಂಕ್ ಖಾತೆಗಳನ್ನು ಬಳಸಿಕೊಂಡು ಕೆಬಿಡಿಸಿಯಿಂದ ಹಣವನ್ನು ಬೇರೆಡೆಗೆ ವರ್ಗಾಯಿಸುವಲ್ಲಿ ನಾಗರಾಜಪ್ಪ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ಆರೋಪಿಸಲಾಗಿದೆ. ಇತರ ಶಂಕಿತ, ಆರೋಪಿಗಳೊಂದಿಗೆ ಶಾಮೀಲಾಗಿ ಅವರ ಸಹಚರರ ಹೆಸರಿನಲ್ಲಿ ಸಂಸ್ಥೆ ಮೂಲಕ ಹಣವನ್ನು ವರ್ಗಾವಣೆ ಮಾಡಲಾಗಿದೆ ಎಂದು ಇಡಿ ಹೇಳಿದೆ.

ಕಳೆದ ಆರ್ಥಿಕ ಸಾಲಿನಲ್ಲಿ ರಾಜ್ಯದಲ್ಲಿ 1,02,585 ಕೋಟಿ ರೂ. ವಾಣಿಜ್ಯ ತೆರಿಗೆ ಸಂಗ್ರಹ

• ಉದಯವಾಹಿನಿ, ಬೆಂಗಳೂರು

ಕಳೆದ ಆರ್ಥಿಕ ಸಾಲಿನಲ್ಲಿ ರಾಜ್ಯದ ವಾಣಿಜ್ಯ ತೆರಿಗೆಗಳ ಸಂಗ್ರಹ 1,02,585.52 ಕೋಟಿ ರೂ. ಸಂಗ್ರಹವಾಗಿದೆ. ಇದರಿಂದ 2023-24ನೇ ಸಾಲಿನ ಆರ್ಥಿಕ ವರ್ಷಕ್ಕಿಂತ 8,822.25 ಕೋಟಿ ರೂ. ಹೆಚ್ಚು ಸಂಗ್ರಹವಾದಂತಾಗಿದೆ. ವಾಣಿಜ್ಯ ತೆರಿಗೆ ಇಲಾಖೆಯ ಮಾಹಿತಿ ಪ್ರಕಾರ, ಮಾರ್ಚ್ ತಿಂಗಳಿನಲ್ಲಿ 7,111.97 ಕೋಟಿ ರೂ. ಸರಕು ಸೇವಾ ತೆರಿಗೆ, 2,232.57 ಕೋಟಿ ರೂ. ಕರ್ನಾಟಕ ಮಾರಾಟ ತೆರಿಗೆ ಹಾಗೂ 107.34 ಕೋಟಿ ರೂ. ಸೇರಿದಂತೆ ಒಟ್ಟು 9,451.88 ಕೋಟಿ ರೂ. ಸಂಗ್ರಹಿಸಲಾಗಿದೆ. ಇದು ಫೆಬ್ರವರಿ ತಿಂಗಳಿಗಿಂತ ಸುಮಾರು 10 ಸಾವಿರ ಕೋಟಿ ರೂ. ಹೆಚ್ಚು ಸಂಗ್ರಹವಾದಂತಾಗಿದೆ. 2023-24ನೇ ಆರ್ಥಿಕ ಸಾಲಿನಲ್ಲಿ ಒಟ್ಟು 94,363.27 ಕೋಟಿ ರೂ. ಮಾತ್ರ ಸಂಗ್ರಹವಾಗಿತ್ತು. 2024-25ನೇ ಸಾಲಿನಲ್ಲಿ 77,321.80 ಕೋಟಿ ರೂ. ಸರಕು ಸೇವಾ ತೆರಿಗೆ, 23,904.33 ಕೋಟಿ ರೂ. ಮಾರಾಟ ತೆರಿಗೆ ಹಾಗೂ 1351.39 ಕೋಟಿ ರೂ. ವೃತ್ತಿ ತೆರಿಗೆ ಸೇರಿದಂತೆ ಒಟ್ಟು 1,02,585.52 ಕೋಟಿ ರೂ. ಸಂಗ್ರಹಿಸಲಾಗಿದೆ. ಕಳೆದ 2023-24ನೇ ಸಾಲಿಗೆ ಹೋಲಿಸಿದರೆ 2024-25ನೇ ಆರ್ಥಿಕ ಸಾಲಿನಲ್ಲಿ ಪ್ರತೀ ತಿಂಗಳು ವಾಣಿಜ್ಯ ತೆರಿಗೆಗಳ ಸಂಗ್ರಹದಲ್ಲಿ ಏರಿಕೆಯಾಗಿರುವುದು ಕಂಡುಬಂದಿದೆ.

ರೋಹಿತ್ ವೇಮುಲ ಕಾಯ್ದೆ ಜಾರಿಗೆ ಆಗ್ರಹಿಸಿ ಧರಣಿ

• ಉದಯವಾಹಿನಿ, ಬೆಂಗಳೂರು

ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ದಲಿತ, ಬಹುಜನ ವಿದ್ಯಾರ್ಥಿಗಳ ಮೇಲೆ ಆಗುತ್ತಿರುವ ಜಾತಿ ದೌರ್ಜನ್ಯ ಮತ್ತು ತಾರತಮ್ಯವನ್ನು ತಡೆಗಟ್ಟಲು ರೋಹಿತ್ ವೇಮುಲ ಕಾಯ್ದೆ ಜಾರಿಗೊಳಿಸುವಂತೆ ಆಗ್ರಹಿಸಿ, ರೋಹಿತ್ ಕಾಯ್ದೆಗಾಗಿ ಜನಾಂದೋಲನ ವತಿಯಿಂದ ನಗರದ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಲಾಯಿತು.

ಈ ವೇಳೆ ಮಾತನಾಡಿದ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ವಿಶೇಷ ಪ್ರತಿನಿಧಿ ಕೆ.ಪಿ.ಅಶ್ವಿನಿ, ರೋಹಿತ್ ವೇಮುಲ ಅವರ ಸಾಂಸ್ಥಿಕ ಹತ್ಯೆಯನ್ನು ತುಂಬಾ ಗಟ್ಟಿ ಧ್ವನಿಯಲ್ಲಿ ಖಂಡಿಸಬೇಕು. ಹತ್ತು ವರ್ಷದಲ್ಲಿ ವಿಶ್ವ ವಿದ್ಯಾಲಯಗಳಲ್ಲಿ ನಡೆದ ಆತ್ಮಹತ್ಯೆಗಳಲ್ಲಿ ಶೇ.60ರಷ್ಟು ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಇದ್ದಾರೆ. ಶಿಕ್ಷಣ ಸಂಸ್ಥೆಗಳಲ್ಲಿ ಜಾತಿ ತಾರತಮ್ಯದ ಬಗ್ಗೆ ಮಾತನಾಡಲು ವೇದಿಕೆಯೇ ಇಲ್ಲ ಎಂದು ಹೇಳಿದರು. ಶಿಕ್ಷಣತಜ್ಞ ಶ್ರೀಪಾದ್ ಭಟ್ ಮಾತನಾಡಿ, ಖಾಸಗಿ ಶಿಕ್ಷಣ ಸಂಸ್ಥೆಯಲ್ಲಿ ಆಗುತ್ತಿರುವ ದೌರ್ಜನ್ಯಗಳನ್ನು ಹೇಳಿಕೊಳ್ಳಲು ಎಸ್ಸಿ ಆಯೋಗಕ್ಕೆ ಅಧ್ಯಕ್ಷರು, ಸದಸ್ಯರು ಇಲ್ಲ. ಅದರ ಬಗ್ಗೆಯೂ ಹೋರಾಟ ಮಾಡಬೇಕು. ಯುಜಿಸಿ ಜಾರಿಗೆ ತರಲಾಗುತ್ತಿರುವ ಎಸ್ಸಿ, ಎಸ್‌ಟಿ ಜಾತಿ ತಾರತಮ್ಯ ಕಾಯ್ದೆಯನ್ನು ನಾವು ಅರಿತುಕೊಳ್ಳಬೇಕು. ಅದರಲ್ಲಿನ ದೋಷ ಏನೆಂದರೆ ದಲಿತ ಸಮುದಾಯಗಳಿಂದ ಯಾರನ್ನೂ ಒಳಗೊಳ್ಳುತ್ತಿಲ್ಲ. ಅದರಿಂದ ಯಾವುದೇ ಕೆಲಸಕ್ಕೆ ಬಾರದ ಕಾಯ್ದೆಯಾಗುತ್ತದೆ ಎಂದು ತಿಳಿಸಿದರು. ಧರಣಿಯಲ್ಲಿ ಅಂಕಣಕಾರ ಶಿವಸುಂದರ್, ವಕೀಲ ವಿನಯ್ ಶ್ರೀನಿವಾಸ್, ಹೋರಾಟಗಾರ ಡಾ.ಹುಲಿಕುಂಟೆ ಮೂರ್ತಿ, ಚಿಂತಕ ವಿ.ಎಲ್.ನರಸಿಂಹಮೂರ್ತಿ, ಬಸವರಾಜ ಕೌತಾಳ್, ಚಂದ್ರು ತರಹುಣಸೆ, ಅಶ್ವಿನಿ ಬೋನ್, ಸರೋವರ ಬೆಂಕಿಕೆರೆ ಮತ್ತಿತರರು ಹಾಜರಿದ್ದರು.

ಯಕ್ಷಗಾನ ಅಕಾಡೆಮಿ ಸ್ಥಳಾಂತರ ಪ್ರಯತ್ನ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಯಕ್ಷಗಾನ ಅಕಾಡೆಮಿಯ ಕೇಂದ್ರ ಕಚೇರಿ ಸ್ಥಳಾಂತರದ ಪ್ರಸ್ತಾವ ಮತ್ತೆ ಮುನ್ನೆಲೆಗೆ ಬಂದಿದ್ದು, ಇದಕ್ಕೆ ವ್ಯಾಪಕ ವಿರೋಧ ವ್ಯಕ್ತವಾಗಿದೆ. ಇನ್ನೊಂದೆಡೆ, ಸ್ಥಳಾಂತರ ಅನಿವಾರ್ಯವಾದಲ್ಲಿ ಮೂಡಲಪಾಯ ಪ್ರಕಾರಕ್ಕೆ ಪ್ರತ್ಯೇಕ ಅಕಾಡೆಮಿ ರಚಿಸಬೇಕೆಂಬ ಕೂಗು ಎದ್ದಿದೆ. ಕನ್ನಡ ಭವನದ ಎರಡನೇ ಮಹಡಿಯಲ್ಲಿ ಅಕಾಡೆಮಿಯ ಕಚೇರಿ ಕಾರ್ಯನಿರ್ವಹಿಸುತ್ತಿದೆ. ಇದನ್ನು ಉಡುಪಿ ಅಥವಾ ಮಂಗಳೂರಿಗೆ ಸ್ಥಳಾಂತರಿಸಬೇಕೆಂಬ ಪ್ರಯತ್ನ ನಡೆಯುತ್ತಿದೆ. ಅಕಾಡೆಮಿಯ ಹಾಲಿ ಅಧ್ಯಕ್ಷರಾದ ತಲ್ಲೂರು ಶಿವರಾಮಶೆಟ್ಟಿ ಅವರು ಉಡುಪಿ ಜಿಲ್ಲೆಯವರಾಗಿದ್ದು, 13 ಮಂದಿ ಸದಸ್ಯರಲ್ಲಿ 9 ಮಂದಿ ದಕ್ಷಿಣ ಕನ್ನಡ ಜಿಲ್ಲೆಯವರಾಗಿದ್ದಾರೆ. ಇದರಿಂದಾಗಿ ಅಕಾಡೆಮಿಯ ವಾರ್ಷಿಕ ಪ್ರಶಸ್ತಿ ಆಯ್ಕೆಗೆ ಸಂಬಂಧಿಸಿದ ಸರ್ವಸದಸ್ಯರ ಸಭೆ ಕೂಡ ಮಂಗಳೂರಿನ ತುಳು ಭವನದಲ್ಲಿ ನಡೆದಿತ್ತು. ಉಡುಪಿಯಲ್ಲಿಯೇ ಪ್ರಶಸ್ತಿಗಳ ಘೋಷಣೆ, ಪ್ರಶಸ್ತಿ ಪ್ರದಾನ ಸಮಾರಂಭ ಮಾಡಲಾಗಿತ್ತು.

ಇದು ಸಹ ಅಕಾಡೆಮಿ ಸ್ಥಳಾಂತರದ ಚರ್ಚೆಗೆ ಇಂಬು ನೀಡಿದಂತಾಗಿದೆ. ಯಕ್ಷಗಾನ ಅಕಾಡೆಮಿ ಕಚೇರಿ ಬೆಂಗಳೂರಿನಲ್ಲಿಯೇ ಇರಬೇಕೆಂದು ಆಗ್ರಹಿಸಿ ಅಕಾಡೆಮಿ ಅಧ್ಯಕ್ಷರಿಗೆ ಪತ್ರ ಬರೆದಿರುವ ಮೂಡಲಪಾಯ ಯಕ್ಷಗಾನ ಕಲಾವಿದರು, ಕಚೇರಿ ಸ್ಥಳಾಂತರಿಸುವುದಾದರೆ ಮೂಡಲಪಾಯವನ್ನು ಪ್ರತ್ಯೇಕಿಸಬೇಕು ಎಂದು ಆಗ್ರಹಿಸಿದ್ದಾರೆ.

ಮೂಡಲಪಾಯ ಕಲಾವಿದರ ಪರವಾಗಿ, ಸಚಿವರಾದ ಕೃಷ್ಣ ಬೈರೇಗೌಡ, ಕೆ.ಎಚ್. ಮುನಿಯಪ್ಪ, ಶಾಸಕರಾದ ಎಸ್.ಆರ್. ವಿಶ್ವನಾಥ್, ಧೀರಜ್ ಮುನಿರಾಜ್ ಸಹ ಪತ್ರ ಬರೆದಿದ್ದು, ಅಕಾಡೆಮಿ ಕಚೇರಿ ಸ್ಥಳಾಂತರ ಮಾಡದಂತೆ ಮನವಿ ಮಾಡಿದ್ದಾರೆ.

ನಿರಂತರ ಪ್ರಯತ್ನ: ಈ ಹಿಂದೆ ಉಮಾಶ್ರೀ ಅವರು ಇಲಾಖೆ ಸಚಿವರಾಗಿದ್ದಾಗ ಅಕಾಡೆಮಿಯ ಕೇಂದ್ರ ಕಚೇರಿಯನ್ನು ಮಂಗಳೂರಿಗೆ ಸ್ಥಳಾಂತರಿಸುವಂತೆ ಆದೇಶ ಹೊರಡಿಸಿದ್ದರು. ದಕ್ಷಿಣ ಕನ್ನಡ, ಕರಾವಳಿ ಪ್ರದೇಶದಲ್ಲಿ ಯಕ್ಷಗಾನದ ಕಲಾವಿದರು ಹೆಚ್ಚಿದ್ದಾರೆ ಎಂಬ ಕಾರಣಕ್ಕೆ ಈ ಆದೇಶ ಹೊರಡಿಸಲಾಗಿತ್ತು. ಆದರೆ, ಸರ್ಕಾರದ ಈ ಕ್ರಮಕ್ಕೆ ಕಲಾವಿದರ ವಲಯದಲ್ಲಿ ವ್ಯಾಪಕ ವಿರೋಧ ವ್ಯಕ್ತವಾಗಿತ್ತು. ಅಕಾಡೆಮಿಯ ಅಂದಿನ ಅಧ್ಯಕ್ಷ ಎಂ.ಎ. ಹೆಗಡೆ ಹಾಗೂ ಸದಸ್ಯರು ಕೂಡ ಆಕ್ಷೇಪಿಸಿದ್ದರು. ಆದ್ದರಿಂದ ನಂತರ ಅಧಿಕಾರಕ್ಕೆ ಬಂದ ಸಮ್ಮಿಶ್ರ ಸರ್ಕಾರ, ಸ್ಥಳಾಂತರದ ಆದೇಶವನ್ನು ಹಿಂಪಡೆದಿತ್ತು. ಹಿಂದಿನ ಬಿಜೆಪಿ ನೇತೃತ್ವದ ಸರ್ಕಾರದ ಅವಧಿಯಲ್ಲಿಯೂ ಉಡುಪಿಗೆ ಸ್ಥಳಾಂತರಿಸುವ ಪ್ರಯತ್ನ ನಡೆದಿತ್ತು.

ಖರ್ಗೆ, ಸಚಿವ ಡಾ.ಜಿ. ಪರಮೇಶ್ವರ್ ಚರ್ಚೆ ಕುತೂಹಲ

ರಾಜಕೀಯ ಬೆಳವಣಿಗೆಗಳ ಬಗ್ಗೆ ಎಐಸಿಸಿ ಅಧ್ಯಕ್ಷರಿಗೆ ಮಾಹಿತಿ ನೀಡಿದ್ದೀರಾ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ

• ಉದಯವಾಹಿನಿ, ಬೆಂಗಳೂರು

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರು ಇಂದು ಬೆಂಗಳೂರಿನಲ್ಲಿ ಭೇಟಿ ಮಾಡಿ ಚರ್ಚೆ ನಡೆಸಿದರು.

ನಾಲ್ಕು ದಿನಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಹಲವು ಸಚಿವರು ದೆಹಲಿಗೆ ತೆರಳಿ, ವರಿಷ್ಠರೊಂದಿಗೆ ಚರ್ಚೆ ನಡೆಸಿದ್ದರೂ ಗೃಹ ಸಚಿವ ಡಾ.ಜಿ. ಪರಮೇಶ್ವರ್ ದೆಹಲಿಗೆ ತೆರಳದೆ ಬೆಂಗಳೂರಿನಲ್ಲೇ ಉಳಿದಿದ್ದರು.

ದೆಹಲಿಯಿಂದ ಬೆಂಗಳೂರಿಗೆ ಆಗಮಿಸಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ಡಾ.ಜಿ. ಪರಮೇಶ್ವರ್ ಅವರು ಖರ್ಗೆ ಅವರ ನಿವಾಸದಲ್ಲಿ ಅವರನ್ನು ಭೇಟಿ ಮಾಡಿ ಸುಮಾರು ಹೊತ್ತು ಚರ್ಚೆ ನಡೆಸಿರುವುದು ಕುತೂಹಲ ಮೂಡಿಸಿ ದೆ. ನಾನು ಖರ್ಗೆ ಮನೆ ಒಳಗೆ ಹೋದ ಮೇಲೆ ಮಕ್ಕಳು, ಮರಿ ಎಲ್ಲರನ್ನು ಮಾತನಾಡಿಸುತ್ತಾ ಕೂರುತ್ತೇನೆ.

ಉದಯವಾಹಿನಿ ಚಿತ್ರ

ಪ್ರಿಯಾಂಕ ಖರ್ಗೆ ಅವರನ್ನು ಸಣ್ಣವರಿದ್ದಾಗಿನಿಂದಲೇ ನೋಡುತ್ತಾ ಬಂದಿದ್ದೇನೆ.

ರಾಜಕೀಯ ಚರ್ಚೆ ಮಾಡಿಲ್ಲ: ಡಾ.ಜಿ. ಪರಮೇಶ್ವರ್

ಎಐಸಿಸಿ ಅಧ್ಯಕ್ಷ ಖರ್ಗೆ ಅವರ ಭೇಟಿ ನಂತರ ಖರ್ಗೆ ಅವರ ನಿವಾಸದ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಡಾ.ಜಿ. ಪರಮೇಶ್ವರ್, ನಾವು ಖರ್ಗೆ ಅವರು, ಒಂದೇ ಕುಟುಂಬವಿದ್ದಂತೆ. ಅವರು ಬೆಂಗಳೂರಿಗೆ ಬಂದಾಗಲೆಲ್ಲಾ ನಾನು ಭೇಟಿ ಮಾಡುತ್ತೇನೆ. ಅವರು ನನ್ನ ಹಿರಿಯಣ್ಣ ಇದ್ದಂತೆ. ಅವರ ಆರೋಗ್ಯ ವಿಚಾರಿಸಿದ್ದೇನೆ ಅಷ್ಟೇ ಎಂದರು. ಈ ಭೇಟಿಯಲ್ಲಿ ನಾನು ಯಾವುದೇ ರಾಜಕೀಯ ಚರ್ಚೆ ಮಾತನಾಡಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಖರ್ಗೆ ಅವರ ಆಳಿಯ ರಾಧಾಕೃಷ್ಣ ಅವರದು ನನ್ನದು 45 ವರ್ಷಗಳ ಗೆಳೆತನ. ಹಾಗಾಗಿ ನಾನು ಹೆಚ್ಚು ಹೊತ್ತು ಅವರ ಮನೆಯಲ್ಲಿರುತ್ತೇನೆ. ಏನೆ ಇರಲಿ ನಾನು ರಾಜಕೀಯ ವಿಚಾರವನ್ನಂತೂ ಚರ್ಚೆ ಮಾಡಿಲ್ಲ ಎಂದು ಪುನರುಚ್ಚರಿಸಿದರು.

ರಾಜಕೀಯ ಬೆಳವಣಿಗೆಗಳ ಬಗ್ಗೆ ಎಐಸಿಸಿ ಅಧ್ಯಕ್ಷರಿಗೆ ಮಾಹಿತಿ ನೀಡಿದ್ದೀರಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಅವರು ಮಾಹಿತಿ ಕೇಳಿಲ್ಲ, ನಾನು ಕೊಟ್ಟಿಲ್ಲ. ಎಐಸಿಸಿ ಅಧ್ಯಕ್ಷ ಆದವರಿಗೆ ಅವರದೇ ಆದ ಮಾಹಿತಿ ಪಡೆಯಲು ಚಾನಲ್‌ಗಳು ಇರುತ್ತವೆ.

ನಾನು ಮಾಹಿತಿ ಕೊಡುವ ಅವಶ್ಯಕತೆ ಇಲ್ಲ ಎಂದರು.

ನಿಮ್ಮ ಬೆಂಬಲಿಗರು ನಾಯಕತ್ವ ಬದಲಾವಣೆ ಆದಾಗ ನಮ್ಮ ಸಾಹೇಬರು ಹೆಸರೇ ಇರುತ್ತದೆ ಎಂದೆಲ್ಲಾ ಹೇಳುತ್ತಿದ್ದಾರಲ್ಲಾ ಎಂದಾಗ ಯಾವುದೇ ಪ್ರತಿಕ್ರಿಯೆ ಕೊಡದೆ ನಾನು ಬರುತ್ತೇನೆ ಎಂದು ಮುಗಳ್ನಕ್ಕರು.

ಸಮಾನ ನಾಗರಿಕ ಸಂಹಿತೆಯನ್ನು ಜಾರಿಗೊಳಿಸಿ: ಹೈಕೋರ್ಟ್ ಒತ್ತಾಯ

• ಉದಯವಾಹಿನಿ, ಬೆಂಗಳೂರು

ಏಕರೂಪ ನಾಗರಿಕ ಸಂಹಿತೆಯನ್ನು ಜಾರಿಗೆ ತರಬೇಕೆಂದು ಹೈಕೋರ್ಟ್, ಸಂಸತ್ತು ಮತ್ತು ರಾಜ್ಯ ಸರ್ಕಾರಗಳಿಗೆ ಒತ್ತಾಯಿಸಿದೆ. ಏಕರೂಪ ನಾಗರಿಕ ಸಂಹಿತೆ ನ್ಯಾಯ, ಸಮಾನತೆ, ಜಾತ್ಯತೀತತೆ ಮತ್ತು ರಾಷ್ಟ್ರೀಯ ಏಕತೆಯ ಸಾಂವಿಧಾನಿಕ ಆದರ್ಶಗಳನ್ನು ಸಾಕಾರಗೊಳಿಸುವತ್ತ ಒಂದು ನಿರ್ಣಾಯಕ ಹೆಜ್ಜೆಯಾಗಿದೆ ಎಂದು ಹೈಕೋರ್ಟ್ ಹೇಳಿದೆ.

ಆಸ್ತಿ ವಿವಾದಕ್ಕೆ ಸಂಬಂಧಿಸಿದ ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ನ್ಯಾಯಮೂರ್ತಿ ಸಂಜೀವ್ ಕುಮಾರ್ ಅವರ ಏಕ ಪೀಠವು ಈ ಹೇಳಿಕೆ ನೀಡಿದೆ. ಮುಸ್ಲಿಂ ಮಹಿಳೆ ಶಹನಾಜ್ ಬೇಗಂ ಅವರ ಮರಣದ ನಂತರ ಅವರ ಆಸ್ತಿಯ ವಿಭಜನೆಗೆ ಸಂಬಂಧಿಸಿದಂತೆ ವಿಚಾರಣೆ ನಡೆಸುವ ವೇಳೆ ನ್ಯಾಯಮೂರ್ತಿಗಳು ಈ ಅಭಿಪ್ರಾಯ ವ್ಯಕ್ತಪಡಿಸಿದರು. ಇದರಲ್ಲಿ ಮಹಿಳೆಯ ಪತಿ ಮತ್ತು ಅವರ ಒಡಹುಟ್ಟಿದವರಿಗೆ ಸಂಬಂಧಿಸಿದ ಪ್ರಕರಣವಾಗಿದೆ.

ವಿವಿಧ ಧಾರ್ಮಿಕ ಕಾನೂನುಗಳ ಅಡಿಯಲ್ಲಿ ಮಹಿಳೆಯರ ಹಕ್ಕುಗಳಲ್ಲಿ ಭಾರಿ ವ್ಯತ್ಯಾಸವಿದ್ದು, ಇದು ಸಮಾನತೆಯ ಸಾಂವಿಧಾನಿಕ ತತ್ವಕ್ಕೆ ಧಕ್ಕೆ ತರುತ್ತದೆ ಎಂದು ನ್ಯಾಯಾಲಯವು ಕಂಡುಕೊಂಡಿತು. ಏಕರೂಪ ನಾಗರಿಕ ಸಂಹಿತೆಯನ್ನು ಸಂವಿಧಾನದ 44ನೇ ವಿಧಿಯಲ್ಲಿ ಉಲ್ಲೇಖಿಸಲಾಗಿದೆ. ಅದನ್ನು ಜಾರಿಗೆ ತರುವ ಮೂಲಕ ಮಾತ್ರ ನಾಗರಿಕರಿಗೆ ಸಮಾನತೆ ಮತ್ತು ನ್ಯಾಯವನ್ನು ಖಾತರಿಪಡಿಸಬಹುದು ಎಂದು ನ್ಯಾಯಮೂರ್ತಿ ಸಂಜೀವ್ ಕುಮಾರ್ ಹೇಳಿದರು. ಧರ್ಮ ಆಧಾರಿತ ವೈಯಕ್ತಿಕ ಕಾನೂನುಗಳಿಂದಾಗಿ ಸಮಾನ ಹಕ್ಕುಗಳನ್ನು ನಿರಾಕರಿಸಲಾಗುತ್ತಿರುವ ಮಹಿಳೆಯರ ಅಸಮಾನ ಸ್ಥಾನಮಾನವನ್ನು ಅವರು ವಿಶೇಷವಾಗಿ ಎತ್ತಿ ತೋರಿಸಿದರು. ಹಿಂದೂ ಉತ್ತರಾಧಿಕಾರ ಕಾನೂನಿನಲ್ಲಿ ಹೆಣ್ಣುಮಕ್ಕಳಿಗೆ ಸಮಾನ ಹಕ್ಕುಗಳನ್ನು ನೀಡಲಾಗುತ್ತದೆ. ಮುಸ್ಲಿಂ ಕಾನೂನಿನಲ್ಲಿ, ಸಹೋದರರಿಗಿಂತ ಸಹೋದರಿಯರಿಗೆ ಕಡಿಮೆ ಪಾಲು ಸಿಗುತ್ತದೆ. ಗೋವಾ ಮತ್ತು ಉತ್ತರಾಖಂಡದಂತಹ ರಾಜ್ಯಗಳು ಯುಸಿಸಿ ದಿಕ್ಕಿನಲ್ಲಿ ಉಪಕ್ರಮಗಳನ್ನು ತೆಗೆದುಕೊಂಡಿದ್ದು, ಈಗ ಅದನ್ನು ದೇಶಾದ್ಯಂತ ಜಾರಿಗೆ ತರುವ ಸಮಯ ಬಂದಿದೆ ಎಂದು ನ್ಯಾಯಾಲಯ ಹೇಳಿದೆ.

ಗ್ಯಾರಂಟಿ ಯೋಜನೆಗಳಿಗೂ ಬೆಲೆ ಏರಿಕೆಗೂ ಸಂಬಂಧವಿಲ್ಲ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ಜಾರಿಗೆ ತಂದಿರುವ 5 ಗ್ಯಾರಂಟಿ ಯೋಜನೆಗಳಿಗೂ ಬೆಲೆ ಏರಿಕೆಗೂ ಯಾವುದೇ ರೀತಿಯ ಸಂಬಂಧವಿಲ್ಲ ಎಂದು ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ಅವರು ಹೇಳಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹಾಲಿನ ಬೆಲೆ ಏರಿಕೆಯನ್ನು ಸಮರ್ಥಿಸಿಕೊಂಡರು. ಬೆಲೆ ಏರಿಕೆಗೂ ಗ್ಯಾರಂಟಿಗೂ ಯಾವುದೇ ಸಂಬಂಧ ಇಲ್ಲ. 25 ವರ್ಷದ ಹಿಂದೆ ಇದ್ದ ಬೆಲೆಯನ್ನೇ ಈಗಲು ಮುಂದುವರಿಸಲು ಆಗುತ್ತಾ? ಹಾಲಿನ ದರ 4 ರು. ಏರಿಕೆಯಾದ ಹಣವನ್ನು ಸಂಪೂರ್ಣ ರೈತರಿಗೆ ಕೊಡುತ್ತೇವೆ, ಏರಿಕೆ ಮಾಡಿರುವ ಹಣವನ್ನು ರೈತರಿಗೆ ನೀಡಲು ಎಲ್ಲಾ ಹಾಲು ಒಕ್ಕೂಟಗಳಿಗೆ ಸೂಚನೆ ನೀಡಿದ್ದೇವೆ.

ಸರ್ಕಾರದ ನಿರ್ಧಾರ ಹಾಲು ಉತ್ಪಾದಕರಿಗೆ ಅನುಕೂಲವಾಗಲಿದೆ ಎಂದು ಹೇಳಿದರು. ಮನಮೋಹನ್ ಸರ್ಕಾರ ಇದ್ದಾಗ ಪೆಟ್ರೋಲ್ ಬೆಲೆ 60 ರು. ಇತ್ತು- ಈಗ 103 ರುಪಾಯಿ ಆಗಿದೆ. ಆದರೂ ಯಾರೂ ಸಹ ಮಾತನಾಡುತ್ತಿಲ್ಲ, ಇದು ಜನರಿಗೆ ಹೊರೆ ಅಲ್ವಾ, ಯಾಕೆ ಯಾರೂ

ಬಂಡೀಪುರ ಅರಣ್ಯ ಪ್ರದೇಶದಲ್ಲಿ ರಾತ್ರಿ ಸಂಚಾರ ನಿರ್ಬಂಧ ತೆರವು ವಿರೋಧಿಸಿ ಪ್ರತಿಭಟನೆ

• ಉದಯವಾಹಿನಿ, ಮೈಸೂರು

ಉದಯವಾಹಿನಿ ಚಿತ್ರ

ಬಂಡೀಪುರ ಅರಣ್ಯ ಪ್ರದೇಶದಲ್ಲಿ ರಾತ್ರಿ ಸಂಚಾರ ನಿರ್ಬಂಧ ತೆರವು ವಿರೋಧಿಸಿ ಕನ್ನಡ ಚಳವಳಿ ಮುಖಂಡ ವಾಟಾಳ್ ನಾಗರಾಜ್ ಮೈಸೂರಿನಲ್ಲಿ ಪ್ರತಿಭಟನೆ ನಡೆಸಿದ್ದಾರೆ. ತೆಂಗಿನಕಾಯಿ ಈಡುಗಾಯಿ ಒಡೆಯುವ ಮೂಲಕ ವಿನೂತನ ರೀತಿಯಲ್ಲಿ ಮೈಸೂರಿನ ಜಯಚಾಮರಾಜ ಒಡೆಯರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದ್ದಾರೆ. ಬಂಡೀಪುರ ಅರಣ್ಯ ಪ್ರದೇಶದಲ್ಲಿ ರಾತ್ರಿ ಸಂಚಾರ ಪ್ರಾರಂಭ ಮಾಡಲಿಕ್ಕೆ ಹಲವು ಪ್ರಯತ್ನ ಮಾಡಲಾಗುತ್ತಿದೆ. ಇದರ ಹಿಂದೆ ಯಾರಿದ್ದಾರೆ?, ಒತ್ತಡ ಹಾಕುತ್ತಿರುವವರು ಯಾರು? ಕರ್ನಾಟಕ ಸರ್ಕಾರ ಕೇರಳ ಸರ್ಕಾರದ ಒತ್ತಡಕ್ಕೆ ಮಣಿದು ರಾತ್ರಿ ಸಂಚಾರ ನಿಷೇಧ ತೆರವು ಮಾಡಿದರೆ ಅಪಾಯ. ಇದರಿಂದ ಪ್ರಾಣಿ ಸಂಕುಲಕ್ಕೆ ತೊಂದರೆಯಾಗುತ್ತದೆ. ನಮ್ಮಲ್ಲಿ ಹುಲಿಗಳ ಸಂತತಿ ಕಡಿಮೆಯಾಗುತ್ತಿದೆ. ಹೀಗಾಗಿ ರಾತ್ರಿ ಸಂಚಾರ ನಿಷೇಧ ತೆರವು ಮಾಡಬಾರದು. ಇಲ್ಲವಾದಲ್ಲಿ ಉಗ್ರ ಹೋರಾಟ ನಡೆಸುವುದು ಗ್ಯಾರಂಟಿ ಎಂದು ರಾಜ್ಯ ಸರ್ಕಾರಕ್ಕೆ ವಾಟಾಳ್ ನಾಗರಾಜ್ ಎಚ್ಚರಿಕೆ ನೀಡಿದ್ದಾರೆ.

> ಬಂಡೀಪುರ ಅರಣ್ಯ ಪ್ರದೇಶದಲ್ಲಿ ರಾತ್ರಿ ಸಂಚಾರ ನಿರ್ಬಂಧ ತೆರವು ವಿರೋಧಿಸಿ ಕನ್ನಡ ಚಳವಳಿ ಮುಖಂಡ ವಾಟಾಳ್ ನಾಗರಾಜ್ ಮೈಸೂರಿನಲ್ಲಿ ಪ್ರತಿಭಟನೆ ನಡೆಸಿದ್ದಾರೆ. ರಾತ್ರಿ ಸಂಚಾರ ನಿಷೇಧ ತೆರವು ಮಾಡಿದರೆ ಅಪಾಯ. ಇದರಿಂದ ಪ್ರಾಣಿ ಸಂಕುಲಕ್ಕೆ ತೊಂದರೆಯಾಗುತ್ತದೆ. ಇದನ್ನು ನಾವು ಒಪ್ಪುವುದಿಲ್ಲ. ಸರ್ಕಾರ ನಿಷೇಧ ಹಾಕದಿದ್ದರೆ ಉಗ್ರ ಹೋರಾಟ ಮಾಡುತ್ತೇವೆ
> – ವಾಟಾಳ್ ನಾಗರಾಜ್, ಕನ್ನಡ ಚಳವಳಿ ಮುಖಂಡ

ಅಗತ್ಯ ವಸ್ತುಗಳು, ಪೆಟ್ರೋಲ್ ಡೀಸೆಲ್ ದರ ಏರಿಕೆ ವಿಚಾರ: ಎಲ್ಲಾ ಪಕ್ಷಗಳು ಬೆಲೆ ಏರಿಕೆ ಮಾಡಿವೆ. ರಾಜ್ಯದಲ್ಲಿ ಡಿಸಿಎಂ ಯಾರ ಮಾತನ್ನೂ ಕೇಳುತ್ತಿಲ್ಲ. ಒಂದು ಕಡೆ ಉಚಿತ ಕೊಡುಗೆ. ಮತ್ತೊಂದು ಕಡೆ ಜನ ಸಾಮಾನ್ಯರಿಗೆ ದರ ಏರಿಕೆಯ ಹೊರೆಯಾಗುತ್ತಿದೆ. ಎಲ್ಲಾ ದರ ಏರಿಕೆ ಮಾಡಿದ್ದಾರೆ. ರಾಜ್ಯದಲ್ಲಿ ಏಳು ಕೋಟಿ ಜನ ಇದ್ದಾರೆ. ಸೊಂಟಕ್ಕೆ ಮೀಟರ್ ಕಟ್ಟಿ ಇದಕ್ಕೂ ಟ್ಯಾಕ್ಸ್ ಕಲೆಕ್ಟ್ ಮಾಡಿ. ಇದನ್ನು ಪ್ರಧಾನಿ ನರೇಂದ್ರ ಮೋದಿಯವರೇ ಮಾಡಬೇಕು.

ಅಗತ್ಯ ವಸ್ತುಗಳ ಬೆಲೆ ಏರಿಕೆಗೆ ಕನ್ನಡ ಚಳವಳಿ ಮುಖಂಡ ವಾಟಾಳ್ ನಾಗರಾಜ್ ಮೈಸೂರಿನಲ್ಲಿ ಗರಂ ಆದರು.

ಬಂಡೀಪುರದೆಡೆಗೆ ನಮ್ಮ ನಡಿಗೆ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ಬಂಡೀಪುರ ಹುಲಿ ಸಂರಕ್ಷಿತ ಅರಣ್ಯದೊಳಗೆ ಹಾದುಹೋಗಿರುವ ರಾಷ್ಟ್ರೀಯ ಹೆದ್ದಾರಿಯಲ್ಲಿ ರಾತ್ರಿ ವಾಹನ ಸಂಚಾರಕ್ಕೆ ಅನುಮತಿ ನೀಡ ಬಾರದು, ನಿರ್ಬಂಧ ಮುಂದುವರಿಸಬೇಕು ಎಂದು ಒತ್ತಾಯಿಸಿ ಭಾನುವಾರ ಪರಿಸರವಾದಿಗಳ ನೇತೃತ್ವದಲ್ಲಿ 'ಬಂಡೀಪುರದೆಡೆಗೆ ನಮ್ಮ ನಡಿಗೆ' ಪಾದಯಾತ್ರೆ ನಡೆಯಿತು. ಕಗ್ಗಳದ ಹುಂಡಿ ಬಳಿಯಿಂದ ಆರಂಭವಾದ ಪಾದಯಾತ್ರೆ ಮದ್ದೂರು ಚೆಕ್‌ಪೋಸ್ಟ್‌ವರೆಗೂ ಸಾಗಿತು. ದಲಿತ, ರೈತ, ಪ್ರಗತಿಪರ, ಕನ್ನಡಪರ ಸಂಘಟನೆಗಳು ಹಾಗೂ ಹಲವು ಎನ್‌ಜಿಒಗಳು ಪಾದಯಾತ್ರೆಯಲ್ಲಿ ಭಾಗವಹಿಸಿದ್ದವು.

'ರಾತ್ರಿ ಸಂಚಾರ ಬೇಡವೇ ಬೇಡ', ಮೂಖ ಪ್ರಾಣಿಗಳಿಗೆ ದನಿಯಾಗೋಣ ಎಂಬ ಪೋಸ್ಟರ್‌ಗಳನ್ನು ಹಿಡಿದು ಪರಸರವಾದಿಗಳು ಸಾಗಿದರು. ಮದ್ದೂರು ಚೆಕ್‌ಪೋಸ್ಟ್ ಬಳಿ ನಡೆದ ಸಾರ್ವಜನಿಕ ಸಭೆಯಲ್ಲಿ ಪರಿಸರವಾದಿ ಸೇನಾನಿ ಮಾತನಾಡಿ 'ಭೂಮಿ ಮೇಲಿರುವ 80 ಲಕ್ಷ ಜೀವವೈವಿಧ್ಯಗಳಲ್ಲಿ ಮನುಷ್ಯನೂ ಸೇರಿದ್ದು, ಜೀವವೈವಿಧ್ಯ ಉಳಿದರೆ ಮಾತ್ರ ಮನುಷ್ಯ ಉಳಿಯಬಲ್ಲ ಎಂಬ ಸತ್ಯವನ್ನು ಆಳುವ ಸರ್ಕಾರಗಳು ಅರಿಯಬೇಕಿದೆ. ಬಂಡೀಪರ ಹುಲಿ ಸಂರಕ್ಷಿತ ಪ್ರದೇಶದಲ್ಲಿರುವ ರಾಷ್ಟ್ರೀಯ ಹೆದ್ದಾರಿಯಲ್ಲಿ ದಶಕದ ಹಿಂದೆ 15 ನಿಮಿಷಕ್ಕೊಂದು ವಾಹನ ಸಂಚರಿಸುತ್ತಿತ್ತು. ಪ್ರಸ್ತುತ 5 ಸೆಕೆಂಡ್‌ಗೆ ಒಂದು ವಾಹನ ಓಡಾಡುತ್ತಿದ್ದು ಸಂಚಾರ ದಟ್ಟಣೆ ಮಿತಿಮೀರಿದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ರಾತ್ರಿ ವಾಹನಗಳ ಸಂಚಾರಕ್ಕೆ ಅನುಮತಿ ನೀಡಿದರೆ ಜೀವವೈವಿಧ್ಯವೇ ನಾಶವಾಗಲಿದೆ ಎಂದು ಎಚ್ಚರಿಕೆ ನೀಡಿದರು. ಅರಣ್ಯದೊಳಗೆ ಮಾನವನ ಹಸ್ತಕ್ಷೇಪ ಸಲ್ಲದು, ಅಭಿವೃದ್ಧಿ ಹೆಸರಿನಲ್ಲಿ ವಿಶಾಲವಾದ ರಸ್ತೆ, ಮೇಲ್ಸೇತುವೆಗಳ ನಿರ್ಮಾಣ ಕಾರ್ಯಸಾಧುವಲ್ಲ ಎಂದು ಸೇನಾನಿ ಅಭಿಪ್ರಾಯಪಟ್ಟರು. ಸಭೆಯಲ್ಲಿ ಪರಿಸರವಾದಿಗಳಾದ ಕೃಪಾಕರ, ಜೋಸೆಫ್ ಹೂವರ್, ನಾಗಾರ್ಜುನ ಕುಮಾರ್, ಅರಣ್ಯ ಇಲಾಖೆಯ ನಿವೃತ್ತ ಅಧಿಕಾರಿ ಬಾಲಚಂದ್ರ ಸೇರಿದಂತೆ ಹಲವರು ಭಾಗವಹಿಸಿದ್ದರು.

ವಿನಯ್ ಸೋಮಯ್ಯ ಆತ್ಮಹತ್ಯೆ ಪ್ರಕರಣ | ಕಾರ್ಯಕರ್ತರು ಎದೆಗುಂದಬಾರದು: ವಿಜಯೇಂದ್ರ

ಬಹಳ ದಿನ ಈ ಸರ್ಕಾರದ ದರ್ಬಾರು ನಡೆಯುವುದಿಲ್ಲ

• ಉದಯವಾಹಿನಿ, ಮಡಿಕೇರಿ

ಉದಯವಾಹಿನಿ ಚಿತ್ರ

ಬಿಜೆಪಿ ಕಾರ್ಯಕರ್ತರು ಎದೆಗುಂದಬಾರದು, ಪೊಲೀಸರು ಕೈಗೊಂಬೆಗಳಾಗಬಾರದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು. ಕುಶಾಲನಗರದಲ್ಲಿ ನಡೆದ ಪ್ರತಿಭಟನೆ ವೇಳೆ ಮಾತನಾಡಿದ ಅವರು, ಸ್ಥಳೀಯ ಇಬ್ಬರೂ ಶಾಸಕರು ವೈಫಲ್ಯ ಪ್ರದರ್ಶಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಅವರನ್ನು ಪ್ರಶ್ನಿಸುವುದೇ ತಪ್ಪು ಎಂಬಂತಾಗಿದೆ ಎಂದು ಹರಿಹಾಯ್ದರು.

ಈ ಸರ್ಕಾರ ಬಂದ ನಂತರ ಗುತ್ತಿಗೆದಾರರೊಬ್ಬರು, ಪಿಎಸ್‌ಐ ಒಬ್ಬರು ಆತ್ಮಹತ್ಯೆ ಮಾಡಿಕೊಂಡರು. ಬಿಜೆಪಿ ಕಾರ್ಯಕರ್ತರು ಆತ್ಮಹತ್ಯೆ ಮಾಡಿಕೊಳ್ಳುವಂತಾಗಿದೆ. ಇದನ್ನೆಲ್ಲ ನೋಡಿಕೊಂಡು ಕಣ್ಮುಚ್ಚಿಕೊಂಡು ಕುಳಿತುಕೊಳ್ಳಲು ಸಾಧ್ಯವೇ ಇಲ್ಲ' ಎಂದು ಗುಡುಗಿದರು. ಪೊಲೀಸರು ಸಹ ಆಡಳಿತ ಪಕ್ಷದ ಕೈಗೊಂಬೆಗಳಂತೆ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿದ ಅವರು, ಬಹಳ ದಿನ ಈ ಸರ್ಕಾರದ ದರ್ಬಾರು ನಡೆಯುವುದಿಲ್ಲ ಎಂಬುದನ್ನು ಅರಿತುಕೊಳ್ಳಬೇಕು ಎಂದರು.

ಬಿಜೆಪಿ ಕಾರ್ಯಕರ್ತರಿಂದ ಪ್ರತಿಭಟನೆ: ಬಿಜೆಪಿ ಕಾರ್ಯಕರ್ತ ವಿನಯ್ ಸೋಮಯ್ಯ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಶನಿವಾರಸಂತೆಯ ಬಿಜೆಪಿ ಕಾರ್ಯಕರ್ತರು ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಲ್ಲಿ ಶನಿವಾರ ಪ್ರತಿಭಟನೆ ನಡೆಸಿದರು.

ಆತ್ಮಹತ್ಯೆಗೆ ಕಾರಣರಾದವರ ವಿರುದ್ಧ ಕಾನೂನು ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದ ಅವರು ಕಾಂಗ್ರೇಸ್ ವಿರುದ್ಧ ಧಿಕ್ಕಾರ ಕೂಗಿದರು.

ಬಿಜೆಪಿ ಮುಖಂಡ ಎಸ್.ಎನ್.ರಘು ಮಾತನಾಡಿ ವಿರಾಜಪೇಟೆ ಶಾಸಕ ಪೊನ್ನಣ್ಣ ಅವರು ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರಾಗಿ ಕರ್ತವ್ಯ ನಿರ್ವಹಿಸಲು ಸೂಕ್ತ ವ್ಯಕ್ತಿಯಲ್ಲ' ಎಂದು ಹರಿಹಾಯ್ದರು. ಬಿಜೆಪಿಯ ನಿಷ್ಠಾವಂತ ಕಾರ್ಯಕರ್ತನನ್ನು ನಾವು ಕಳೆದುಕೊಂಡಿದ್ದೇವೆ. ಆತನಿಗೆ ಸಾವಿಗೆ ನ್ಯಾಯ ಸಿಗುವವರೆಗೂ ನಾವು ಹೋರಾಟ ಮುಂದುವರಿಸುತ್ತೇವೆ' ಎಂದರು. ಬಿಜೆಪಿಯ ಮುಖಂಡರಾದ ಯತೀಶ್ ಕುಮಾರ್ ಯೋಗಾನಂದ ಅಪ್ಪಶೆಟ್ಟಳ್ಳಿ ಕಿರಣ್ ರಕ್ಷಿತ್ ಭುವನೇಶ್ವರಿ ನಾಗಪ್ಪ ಪ್ರವೀಣ್ ಕುಮಾರ್ ಮದನ್ ಭಾಗವಹಿಸಿದ್ದರು.

ಸಿದ್ದರಾಮಯ್ಯ ಅವರು ಮುಷ್ಠಿಯಲ್ಲಿ ಪೊಲೀಸ್ ಇಲಾಖೆ

ಬಿಜೆಪಿ ಮುಖಂಡ ಪ್ರತಾಪಸಿಂಹ ಮಾತನಾಡಿ, 'ಯಾವುದೇ ಕಾರಣಕ್ಕೂ ಶಾಸಕರ ಹೆಸರನ್ನು ಎಫ್‌ಐಆರ್‌ನಲ್ಲಿ ಸೇರಿಸಲು ಆಗದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿರುವುದೇ ಪೊಲೀಸರ ಮೇಲೆ ಯಾವ ಬಗೆಯ ಒತ್ತಡ ಇದೆ ಎಂಬುದಕ್ಕೆ ಸಾಕ್ಷಿ. ಅಕ್ಷರಶಃ ಸಿದ್ದರಾಮಯ್ಯ ಅವರ ಮುಷ್ಠಿಯಲ್ಲಿ ಪೊಲೀಸ್ ಇಲಾಖೆ ಇದೆ' ಎಂದು ಆರೋಪಿಸಿದರು.

ಸಮಾಜಕ್ಕೆ ಪೂರಕವಾಗಿ ಕಾರ್ಯನಿರ್ವಹಿಸಿ

• ಉದಯವಾಹಿನಿ, ವಿರಾಜಪೇಟೆ

ಸಂಘ ಸಂಸ್ಥೆಗಳು ತಮ್ಮ ಧ್ಯೆಯ, ಉದ್ದೇಶಗಳು, ಸಾಮಾಜಿಕ ಕಳಕಳಿಯ ತಳಹದಿಯಲ್ಲಿ ಕಾರ್ಯ ನಿರ್ವಹಣೆ ಮಾಡುತ್ತವೆ. ಸಂಘ-ಸಂಸ್ಥೆಗಳು ಅನುಷ್ಠಾನಗೊಳಿಸುವ ಯೋಜನೆಗಳು ಸಮಾಜಕ್ಕೆ ಪೂರಕವಾಗಿದ್ದು ಇವುಗಳಿಂದ ಪರಿಣಾಮಕಾರಿ ಫಲಿತಾಂಶ ಲಭಿಸುವಂತಿರಬೇಕು ಎಂದು ಲಯನ್ಸ್ ವಲಯ ರಾಜ್ಯಪಾಲ ಬಿ.ಎಂ. ಭಾರತಿ ಅವರು ಅಭಿಪ್ರಾಯಪಟ್ಟರು. ಸಮೀಪದ ಅಮ್ಮತ್ತಿ ಕೊಡವ ಸಮಾಜದ ಸಭಾಂಗಣದಲ್ಲಿ ಅಮ್ಮತ್ತಿ ಲಯನ್ಸ್ ಕ್ಲಬ್, ಸಿದ್ದಾಪುರ ಲಯನ್ಸ್ ಕ್ಲಬ್‌ನ ಆಶ್ರಯದಲ್ಲಿ ಈಚೆಗೆ ನಡೆದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸಂಘ ಸಂಸ್ಥೆಗಳನ್ನು ಹುಟ್ಟು ಹಾಕುವುದು ಸುಲಭ. ಆದರೆ ಸರಿಯಾದ ಪಥದಲ್ಲಿ ನಡೆಸಿಕೊಂಡು ಹೋಗುವುದು ಕಷ್ಟದ ಕೆಲಸ. ಕೈಗೊಳ್ಳುವ ಸಮಾಜಮುಖಿ ಕಾರ್ಯಗಳಿಂದ ಸಮಾಜಕ್ಕೆ ಉಪಯುಕ್ತವಾಗಿದೆಯೆ ಎಂದು ತಿಳಿದುಕೊಳ್ಳುವುದು ಮುಖ್ಯ ಎಂದರು.

ಅಮ್ಮತ್ತಿ ಲಯನ್ಸ್ ಕ್ಲಬ್ ಅಧ್ಯಕ್ಷೆ ಆರತಿ ಕಾರ್ಯಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕ್ಲಬ್‌ನ ಕಾರ್ಯದರ್ಶಿ ಕೃತಿನಾ ಪೂಣಚ್ಚ ಮತ್ತು ಸಿದ್ದಾಪುರ ಲಯನ್ಸ್ ಕ್ಲಬ್‌ನ ಕಾರ್ಯದರ್ಶಿ ಕುರಿಯನ್ ಜಾರ್ಜ್ ಅವರು ವಾರ್ಷಿಕ ವರದಿಯನ್ನು ವಾಚಿಸಿದರು.

ವೇದಿಕೆಯಲ್ಲಿ ಸಿದ್ದಾಪುರ ಲಯನ್ಸ್ ಕ್ಲಬ್ ಅಧ್ಯಕ್ಷ ಸುನೀಲ್ ಕುಕ್ಕನೂರು, ಸಿದ್ದಾಪುರ ಲಯನ್ಸ್ ಕ್ಲಬ್ ಖಜಾಂಚಿ ಕುಶಾಲಪ್ಪ, ಅಮ್ಮತ್ತಿ ಲಯನ್ಸ್ ಕ್ಲಬ್ ಖಜಾಂಚಿ ದಿನೇಶ್ ಕೋಡಿರ, ಪ್ರಾಂತ ಅಧ್ಯಕ್ಷರಾದ ಕೆ.ಎ.ಮಹದೇವಪ್ಪ, ಕೆ. ಬೊಳ್ಳಪ್ಪ, ಸುಮನ್ ಬಿ., ಪ್ರಾದೇಶಿಕ ರಾಯಭಾರಿಗಳಾದ ಮೋಹನ್ ದಾಸ್, ಪ್ರಾದೇಶಿಕ ಅಧ್ಯಕ್ಷರಾದ ಕನ್ನಿಕಾ ಅಯ್ಯಪ್ಪ, ಸದಸ್ಯ ಎಸ್.ಎಸ್. ಪೂಣಚ್ಚ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಲಯನ್ಸ್ ಕ್ಲಬ್ ಮಾಜಿ ಅಧ್ಯಕ್ಷೆ ಜ್ಯೋತಿ ಪೊನ್ನಪ್ಪ, ಸೇರಿದಂತೆ ಅಮ್ಮತ್ತಿ ಹಾಗೂ ಸಿದ್ದಾಪುರ ಲಯನ್ಸ್ ಕ್ಲಬ್‌ಗಳ ಸದಸ್ಯರು ಸೇರಿದಂತೆ ಜಿಲ್ಲೆಯ ವಿವಿಧ ಲಯನ್ಸ್ ಪದಾಧಿಕಾರಿಗಳು ಹಾಜರಿದ್ದರು.

ತೆಂಗಿನ ಚಿಪ್ಪಿಗೂ ಶುಕ್ರದೆಸೆ: ಒಂದು ಟನ್‌ಗೆ 26 ಸಾವಿರ

• ಉದಯವಾಹಿನಿ, ತುಮಕೂರು

ಕೊಬ್ಬರಿ, ತೆಂಗಿನಕಾಯಿ, ಎಳನೀರು ದುಬಾರಿಯಾದಂತೆ ತೆಂಗಿನ ಕಾಯಿ ಚಿಪ್ಪುಗೆ (ಕೊಬ್ಬರಿ ಕಂಟ) ದಾಖಲೆ ಬೆಲೆ ಸಿಗುತ್ತಿದೆ. ಒಂದು ಟನ್ ಚಿಪ್ಪು 26,500ರ ವರೆಗೂ ಮಾರಾಟವಾಗುತ್ತಿದೆ. ಹಿಂದಿನ ವರ್ಷಗಳಲ್ಲಿ ಟನ್‌ಗೆ 7 ಸಾವಿರದಿಂದ 8 ಸಾವಿರದವರೆಗೂ ಸಿಗುತಿತ್ತು. ಎರಡು ವರ್ಷಜ ಹಿಂದೆ ಟನ್ 18 ಸಾವಿರಕ್ಕೆ ಹೆಚ್ಚಳವಾಗಿತ್ತು. ಇದು ಈವರೆಗಿನ ದಾಖಲೆಯಾಗಿತ್ತು. ಆದರೆ, ಈ ಬಾರಿ ಹೊಸ ದಾಖಲೆ ಬರೆದಿದೆ. ಬೇಡಿಕೆಯಷ್ಟು ಚಿಪ್ಪು ಸಿಗದಿರುವುದು ಬೆಲೆ ಏರಿಕೆಗೆ ಪ್ರಮುಖ ಕಾರಣವಾಗಿದೆ. ಇತ್ತೀಚಿನ ದಿನಗಳಲ್ಲಿ ಉತ್ತಮ ಬೆಲೆ ಸಿಗುತ್ತಿರುವುದರಿಂದ ರೈತರು ತೆಂಗಿನ ಕಾಯಿ, ಎಳನೀರು ಮಾರಾಟ ಮಾಡುತ್ತಿದ್ದಾರೆ. ಇದರಿಂದಾಗಿ ಕೊಬ್ಬರಿ ಉತ್ಪಾದನೆ ಕಡಿಮೆಯಾಗಿದ್ದು, ಚಿಪ್ಪಿನ ಕೊರತೆ ಎದುರಾಗಿದೆ. ಒಂದು ವರ್ಷದ ಅಂತರದಲ್ಲಿ ನಾಲ್ಕು ಪಟ್ಟು ದರ ಹೆಚ್ಚಳ ವಾಗಿದೆ. ಚಿಪ್ಪಿಗೆ ಬೇಡಿಕೆ ಹೆಚ್ಚುತ್ತಲೇ ಇದ್ದು, ಮುಂದಿನ ದಿನಗಳಲ್ಲಿ ಮತ್ತಷ್ಟು ದುಬಾರಿಯಾಗಬಹುದು ಎಂದು ವರ್ತಕ ಸೋಮಶೇಖರ್ ಹೇಳುತ್ತಾರೆ.

ರಾಜ್ಯದ ಇದ್ದಲಿಗೆ ಬೇಡಿಕೆ: ತೆಂಗು ಬೆಳೆಯುವ ತಮಿಳುನಾಡು, ಕೇರಳ ರಾಜ್ಯದಲ್ಲೂ ಚಿಪ್ಪಿನ ಉತ್ಪಾದನೆ ಕಡಿಮೆಯಾಗಿದ್ದು, ರಾಜ್ಯದ ಚಿಪ್ಪಿಗೆ ಬೇಡಿಕೆ ಬಂದಿದೆ. ಹೊರ ರಾಜ್ಯದ ಇದ್ದಿಲಿನಲ್ಲಿ ಕಾರ್ಬನ್ ಪ್ರಮಾಣ ಶೇ 80ಕ್ಕಿಂತ ಕಡಿಮೆ ಇರುತ್ತದೆ. ರಾಜ್ಯದ ಚಿಪ್ಪಿನಿಂದ ತಯಾರಿಸಿದ ಇದ್ದಿಲಿನಲ್ಲಿ ಕಾರ್ಬನ್ ಅಂಶ ಶೇ 85ರಿಂದ 95ರ ವರೆಗೂ ಇರುತ್ತದೆ. ಹಾಗಾಗಿ ರಾಜ್ಯದ ಇದ್ದಿಲಿಗೆ ಹೆಚ್ಚು ಬೆಲೆ ಸಿಗುತ್ತದೆ. ಕಾಯಿ ಚಿಪ್ಪು ತಂದು ಕೊಡಿ, ಹಣ ಗಳಿಸಿ' ಎಂಬ ಅಭಿಯಾನವೂ ಜಿಲ್ಲೆಯಲ್ಲಿ ನಡೆದಿದೆ. ಅಷ್ಟರ ಮಟ್ಟಿಗೆ ಬೇಡಿಕೆ ಕಂಡುಕೊಂಡಿದೆ.

ಹೊರ ರಾಜ್ಯಕ್ಕೆ: ಸ್ಥಳೀಯವಾಗಿ ಖರೀದಿಸಿದ ಚಿಪ್ಪನ್ನು ಸುಟ್ಟು ಇದ್ದಿಲು ಮಾಡುತ್ತಾರೆ. ನಂತರ ಕೇರಳ, ತಮಿಳುನಾಡಿನ ಕಾರ್ಖಾನೆಗಳಿಗೆ ಕಳುಹಿಸಲಾಗುತ್ತದೆ. ರಾಜಸ್ಥಾನ, ಗುಜರಾತ್ ಕಾರ್ಖಾನೆಗಳಿಂದಲೂ ಬೇಡಿಕೆ ಬರುತ್ತಿದೆ. ಕಾರ್ಖಾನೆಗಳಲ್ಲಿ ಇದ್ದಿಲನ್ನು ಚೆನ್ನಾಗಿ ತೊಳೆದು, ಒಣಗಿಸಿ, ಗಾತ್ರಕ್ಕೆ ಅನುಗುಣವಾಗಿ ಕತ್ತರಿಸಲಾಗುತ್ತದೆ. ನಂತರ ಪ್ಯಾಕ್ ಮಾಡಿ ರಫ್ತು ಮಾಡಲಾಗುತ್ತದೆ. ಪ್ರಮುಖವಾಗಿ ಕಾರ್ಬನ್ ತಯಾರಿಕೆ ವಲಯದಲ್ಲಿ ಇದ್ದಿಲು ಬಳಸಲಾಗುತ್ತಿದೆ. ಸೌಂಧರ್ಯವರ್ಧಕ ತಯಾರಿಕೆ, ಮುಖದ ಕ್ರೀಮ್, ವಾಟರ್ ಪೇಂಟ್ ತಯಾರಿಕೆಗೂ ಬಳಸಲಾಗುತ್ತದೆ.

ಕಾಂಗ್ರೇಸ್‌ನಿಂದ ಜನತೆಗೆ ಬೆಲೆಯೇರಿಕೆ ಶೂಲ

• ಉದಯವಾಹಿನಿ, ಮಾಲೂರು

ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೇಸ್ ಪಕ್ಷದ ಸರ್ಕಾರ ಗ್ಯಾರಂಟಿ ಯೋಜನೆಗಳ ಮೂಲಕ ಜನತೆಯನ್ನು ಮರಳು ಮಾಡಿ ಅಧಿಕಾರಕ್ಕೆ ಬಂದ ಕಾಂಗ್ರೇಸ್ ಪಕ್ಷ ಇದೀಗ ಜನಸಾಮಾನ್ಯರ ಮೂಲಭೂತ ಸೇವೆಗಳ ಎಲ್ಲಾ ಬೆಲೆಗಳನ್ನು ಏರಿಸುತ್ತಾ ಜನತೆಯನ್ನು ಬೆಲೆ ಏರಿಕೆಯ ಶೂಲಕ್ಕೆ ಏರಿಸುತ್ತಿದೆ ಎಂದು ತಾಲ್ಲೂಕು ಬಿಜೆಪಿ ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ಹೇಳಿದರು.

ಪಟ್ಟಣದ ಶ್ರೀ ಮಾರಿಕಾಂಬಾ ವೃತ್ತದಲ್ಲಿ ಜಮಾಯಿಸಿದ ಬಿಜೆಪಿಯ ನೂರಾರು ಕಾರ್ಯಕರ್ತರು ಕಾಂಗ್ರೇಸ್ ಸರ್ಕಾರದ ಧೋರಣೆಯನ್ನು ಖಂಡಿಸಿ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿ ಮುಖ್ಯರಸ್ತೆಯ ಮಾರಿಕಾಂಭ ದ್ವಾರದಲ್ಲಿ ರಸ್ತೆ ತಡೆ ನಡೆಸಿ ಪ್ರತಿಭಟನಾ ರ್‍ಯಾಲಿ ಮೂಲಕ ತಾಲ್ಲೂಕು ಕಚೇರಿಗೆ ತೆರಳಿ ತಹಶೀಲ್ದಾರ್ ರವರಿಗೆ ಮನವಿ ಸಲ್ಲಿಸಿದರು.

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೇಸ್ ಪಕ್ಷದ ಮುಖ್ಯಾಮಂತ್ರಿ ಸಿದ್ದರಾಮಯ್ಯ ಸರ್ಕಾರ ಪರಿಶಿಷ್ಟ ಜಾತಿ, ಪಂಗಡದ ಕಲ್ಯಾಣ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಮೀಸಲಿಟ್ಟ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಳ್ಳುವುದರ ಮೂಲಕ ಆ ಸಮುದಾಯಗಳಿಗೆ ವಂಚನೆ ಮಾಡಿದೆ.

ಕೂಡಲೇ ಕಾಂಗ್ರೇಸ್ ಈ ನಿರ್ಧಾರಗಳಿಂದ ಹಿಂದಕ್ಕೆ ಸರಿಯಬೇಕು, ಇಲ್ಲದಿದ್ದರೆ ಜಿಲ್ಲಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂಬ ಎಚ್ಚರಿಕೆಯನ್ನು ತಾಲ್ಲೂಕು ಬಿಜೆಪಿ ಈ ಮೂಲಕ ನೀಡುತ್ತಿದೆ. ರೈತರು ತಮ್ಮ ಜಮೀನಿಗೆ ಟ್ರಾನ್ಸ್‌ಫಾರ್ಮರ್ ಅಳವಡಿಸಿಕೊಳ್ಳು

ಅಂತರಾಳದಿಂದ... EDITORIAL

ಸಾಮಾಜಿಕ ಜಾಲತಾಣದಲ್ಲಿ ಅಭಿವ್ಯಕ್ತಿಯ ದುರ್ಬಳಕೆ ಎಷ್ಟು ಸರಿ?

ಬಣ ರಾಜಕೀಯದ ಮೂಲಕ ರಾಜ್ಯದಲ್ಲಿ ಸ್ವತಃ ಆತ್ಮಹತ್ಯೆಯ ದಾರಿ ಹಿಡಿದಿರುವ ಬಿಜೆಪಿಯು, ಇದೀಗ ತನ್ನ ಕಾರ್ಯಕರ್ತನೊಬ್ಬನ ಆತ್ಮಹತ್ಯೆ ಪ್ರಕರಣಕ್ಕೆ ಸರಕಾರವನ್ನು ಹೊಣೆ ಮಾಡಿ ಪ್ರತಿಭಟನೆಗಿಳಿದಿದೆ. ಮಡಿಕೇರಿ ಮೂಲದ ಬಿಜೆಪಿ ಕಾರ್ಯಕರ್ತ ವಿನಯ್ ಸೋಮಯ್ಯ ಎಂಬಾತ ಬೆಂಗಳೂರಿನಲ್ಲಿ ಗುರುವಾರ ಆತ್ಮಹತ್ಯೆ ಮಾಡಿಕೊಂಡಿದ್ದು, ತನ್ನ ಸಾವಿಗೆ ವೀರಾಜಪೇಟೆ ಶಾಸಕರು ಮತ್ತು ಅವರ ಆಪ್ತರೇ ಹೊಣೆ ಎಂದು ಡೆತ್‌ನೋಟ್‌ನಲ್ಲಿ ಬರೆದಿದ್ದಾರೆ ಎನ್ನಲಾಗಿದೆ. ಮ್ಯಾನ್ ಪವರ್ ಕಂಪೆನಿಯಲ್ಲಿ ಸಿಬ್ಬಂದಿಯಾಗಿದ್ದ ವಿನಯ್ ಅವರು ಇತ್ತೀಚೆಗೆ ವೀರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ. ಎಸ್. ಪೊನ್ನಣ್ಣ ಅವರನ್ನು ನಿಂದಿಸಿ ವಾಟ್ಸ್‌ಆ್ಯಪ್ ಪೋಸ್ಟ್ ಒಂದನ್ನು ಹಾಕಿದ್ದರು. ಇದರ ವಿರುದ್ಧ ಶಾಸಕರ ಆಪ್ತರು ಪೊಲೀಸ್ ದೂರು ನೀಡಿದ್ದು, ಈ ಸಂಬಂಧ ವಿನಯ್ ಅವರನ್ನು ಪೊಲೀಸರು ವಶಕ್ಕೆ ತೆಗೆದುಕೊಂಡು ವಿಚಾರಣೆಯನ್ನೂ ನಡೆಸಿದ್ದರು. ಮಾಧ್ಯಮಗಳಲ್ಲೂ ಈ ಸುದ್ದಿ ಪ್ರಕಟವಾಗಿತ್ತು. ಸಾಮಾಜಿಕ ಜಾಲತಾಣಗಳಲ್ಲಿ ಏನು ಬೇಕಾದರೂ ಬರೆಯುವ ಅವಕಾಶವಿದೆ ಎಂದು, ಅದನ್ನು ದುರುಪಯೋಗ ಪಡಿಸಿಕೊಂಡರೆ ಕೆಲವೊಮ್ಮೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ. ಬಿಜೆಪಿ ಕಾರ್ಯಕರ್ತನೆಂದು ಕರೆಸಿಕೊಂಡಿರುವ ವಿನಯ್ ವಿಷಯದಲ್ಲೂ ಇದೇ ಆಗಿದೆ. ಎಫ್ ಐಆರ್ ದಾಖಲಾಗುತ್ತಿದ್ದಂತೆಯೇ ಪ್ರಕರಣ ಗಂಭೀರ ರೂಪ ಪಡೆಯುತ್ತಿರುವುದು ವಿನಯ್ ಅರಿವಿಗೆ ಬಂದಿದೆ. ಆಗಲೇ ಶಾಸಕರೊಂದಿಗೆ ಮಾತುಕತೆ ನಡೆಸಿ, ತಾನು ಮಾಡಿದ ಕೃತ್ಯಕ್ಕೆ ಕ್ಷಮೆ ಯಾಚಿಸಿ ಪ್ರಕರಣವನ್ನು ಮುಗಿಸಿ ಬಿಡುವ ಅವಕಾಶ ಆತನಿಗಿತ್ತು. ಆದರೆ ಕೆಲವು ರಾಜಕೀಯ ನಾಯಕರ ಕುಮ್ಮಕ್ಕಿನಿಂದ ಆತ ಪ್ರತಿದೂರನ್ನು ಸಲ್ಲಿಸಿದ್ದು ಮಾತ್ರವಲ್ಲ. ತನ್ನ ಕೃತ್ಯವನ್ನು ಸಮರ್ಥಿಸಿಕೊಳ್ಳುವ ಪ್ರಯತ್ನ ನಡೆಸಿದ್ದಾನೆ. ಪ್ರಕರಣ ಬೆಳೆಯುತ್ತಿದ್ದ ಹಾಗೆಯೇ ಅದು ಆತನ ವೈಯಕ್ತಿಕ ಬದುಕಿನ ಮೇಲೆ ಪರಿಣಾಮಗಳನ್ನು ಬೀರಿದ್ದು, ಅಂತಿಮವಾಗಿ ಅದು ಆತನನ್ನು ಆತ್ಮಹತ್ಯೆಯೆಡೆಗೆ ತಳ್ಳಿದೆ.

ನಾವು ಸಾಮಾಜಿಕ ಮಾಧ್ಯಮಗಳಲ್ಲಿ ಒಬ್ಬರನ್ನು ಟೀಕೆ, ವಿಮರ್ಶೆಗಳನ್ನು ಮಾಡುತ್ತೇವೆ ಎಂದಾದರೆ, ಅದಕ್ಕೆ ಬರುವ ಪ್ರತಿಕ್ರಿಯೆಯನ್ನು ಕಾನೂನಾತ್ಮಕವಾಗಿ ಎದುರಿಸುವುದಕ್ಕೂ ಸಿದ್ಧರಾಗಿರಬೇಕಾಗುತ್ತದೆ.

ಅಭಿವೃದ್ಧಿಗೆ ಸಂಬಂಧಿಸಿ ತನ್ನ ಕ್ಷೇತ್ರವನ್ನು ಒಬ್ಬ ಶಾಸಕ ಕಡೆಗಣಿಸಿದಾಗ ಆತನನ್ನು ಟೀಕಿಸಿದರೆ ಅದು ಅಪರಾಧವಾಗಬಾರದು. ಕ್ಷೇತ್ರದ ಗಂಭೀರ ಸಮಸ್ಯೆಗಳಿಗೆ ಶಾಸಕರನ್ನು ಹೊಣೆ ಮಾಡುವುದು, ಅದಕ್ಕೆ ಸಂಬಂಧಿಸಿ ಅವರನ್ನು ಖಂಡಿಸುವುದು ಜನರ ಹಕ್ಕಾಗಿದೆ. ಆದರೆ ರಾಜಕೀಯ ದುರುದ್ದೇಶವನ್ನು ಇಟ್ಟುಕೊಂಡು ಶಾಸಕರನ್ನು ವೈಯಕ್ತಿಕವಾಗಿ ನಿಂದಿಸುವ, ವ್ಯಂಗ್ಯ ಮಾಡುವ ಅಧಿಕಾರ ಯಾರಿಗೂ ಇಲ್ಲ. ಟೀಕೆ, ವ್ಯಂಗ್ಯ ಅಭಿವ್ಯಕ್ತಿಯ ಗೆರೆಯನ್ನು ಮೀರಿದಾಗ ಅದರ ವಿರುದ್ಧ ಕಾನೂನಾತ್ಮಕ ಕ್ರಮವನ್ನು ತೆಗೆದುಕೊಳ್ಳುವ ಅಧಿಕಾರ ಶಾಸಕರಿಗೂ ಇದೆ. ಇಲ್ಲಿ ಬಿಜೆಪಿ ಕಾರ್ಯಕರ್ತ ಶಾಸಕನನ್ನು ವೈಯಕ್ತಿಕವಾಗಿ ನಿಂದಿಸಿದ್ದಾನೆ ಎಂದು ಅವರ ಆಪ್ತರು ಪೊಲೀಸರಿಗೆ ದೂರು ನೀಡಿದ ಹಿನ್ನೆಲೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಈ ಎಫ್‌ಐಆರ್‌ಗೆ ಆರೋಪಿ ತಡೆಯಾಜ್ಞೆಯನ್ನು ತಂದಿರುವುದು ಮಾತ್ರವಲ್ಲ ಪ್ರತಿದೂರನ್ನೂ ಸಲ್ಲಿಸಿದ್ದಾರೆ ಎನ್ನಲಾಗಿದೆ. ಇಲ್ಲಿ ಶಾಸಕರು ಅಥವಾ ಆಪ್ತರು ಕಾನೂನು ವ್ಯಾಪ್ತಿಯಲ್ಲಿ ದೂರು ಸಲ್ಲಿಸುವುದನ್ನು ಕಿರುಕುಳ ಎಂದು ಕರೆಯುವುದು ಎಷ್ಟು ಸರಿ? ಸಾಮಾಜಿಕ ಜಾಲತಾಣವನ್ನು ಬಳಸುವವರಿಗೆ ಅವರದೇ ಹೊಣೆಗಾರಿಕೆಗಳಿವೆ. ದ್ವೇಷ ರಾಜಕಾರಣಕ್ಕೆ ಇನ್ನೊಬ್ಬರ ವ್ಯಕ್ತಿತ್ವ ಹನನ ಮಾಡುವುದಕ್ಕೆ ಅಭಿವ್ಯಕ್ತಿಯನ್ನು ದುರ್ಬಳಕೆ ಮಾಡಬಾರದು. ಇತ್ತೀಚೆಗೆ ಹಿರಿಯ ವಕೀಲರೊಬ್ಬರು ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಅವರ ವಿರುದ್ಧ ಟೀಕೆ ಮಾಡಿದ್ದಾರೆ ಎಂದು ಕೊಡಗಿನ ಕೆಲವರು ಪೊಲೀಸರಿಗೆ ದೂರು ಸಲ್ಲಿಸಿದ್ದರು. ಈ ಸಂಬಂಧ ಆ ಹಿರಿಯ ವಕೀಲರನ್ನು ಪೊಲೀಸರು ವಶಕ್ಕೂ ತೆಗೆದುಕೊಂಡಿದ್ದರು. ಅವರು ಕಾನೂನು ಮಾರ್ಗದಲ್ಲೇ ತನ್ನ ಮೇಲಿರುವ ಆರೋಪವನ್ನು ಎದುರಿಸಿದ್ದರು. ಸಾಮಾಜಿಕ ಜಾಲತಾಣದಲ್ಲಿ ಏನನ್ನೇ ಬರೆಯುವ ಮೊದಲು ನಮಗೆ ನಾವೇ ನೈತಿಕ ಗಡಿಗಳನ್ನು ಹಾಕಿಕೊಳ್ಳುವ ಅಗತ್ಯವಿದೆ ಎನ್ನುವ ಅಂಶವನ್ನು ವಿನಯ್ ಸೋಮಯ್ಯ ಪ್ರಕರಣ ಎತ್ತಿ ತೋರಿಸುತ್ತದೆ. ಯಾವುದೇ ವಿಮರ್ಶೆ, ಟೀಕೆಗಳು ವೈಯಕ್ತಿಕ ನಿಂದನೆಗಳಾಗದಂತೆ ನೋಡಿಕೊಳ್ಳಬೇಕು. ಹಾಗೆಯೇ ರಾಜಕೀಯ ನಾಯಕರ ಮಾತುಗಳಿಗೆ ಬಲಿ ಬಿದ್ದು, ಯುವಕರು ಸಾಮಾಜಿಕ ಜಾಲತಾಣಗಳಲ್ಲಿ ಇನ್ನೊಂದು ಧರ್ಮದ ಅಥವಾ ರಾಜಕೀಯ ಪಕ್ಷಗಳ ವಿರುದ್ಧ ಬರೆಯುವಾಗ ಎರಡೆರಡು ಬಾರಿ ಯೋಚಿಸಬೇಕು.

ವೈಯಕ್ತಿಕವಾಗಿಯಾಗಲಿ, ಸಮಾಜಕ್ಕಾಗಲಿ, ರಾಜ್ಯಕ್ಕಾಗಲಿ ಯಾವುದೇ ಪ್ರಯೋಜನವಿಲ್ಲದ, ದ್ವೇಷ, ಅಸೂಯೆಗಳನ್ನಷ್ಟೇ ಹರಡುವ ಸಾಲುಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಾಗ ಎದುರಾಳಿ ಯಾವುದೇ ಕಾನೂನು ಕ್ರಮವನ್ನು ತನ್ನ ವಿರುದ್ಧ ತೆಗೆದುಕೊಳ್ಳಬಾರದು ಎಂದು ನಿರೀಕ್ಷಿಸಬಾರದು. ವಿನಯ್ ಸೋಮಯ್ಯ ಪ್ರಕರಣದಲ್ಲಿ ಶಾಸಕರು ವೈಯಕ್ತಿಕವಾಗಿ ತನ್ನ ಗೂಂಡಾಗಳಿಂದ ಬೆದರಿಕೆ ಹಾಕಿದ್ದಿದ್ದರೆ ಅದು ಬೇರೆ ಮಾತು. ತನ್ನ ಮೇಲೆ ಸಾಮಾಜಿಕ ಜಾಲತಾಣದಲ್ಲಿ ನಡೆದ ದಾಳಿಯನ್ನು ಕಾನೂನು ಮೂಲಕ ಎದುರಿಸುವುದನ್ನು 'ಕಿರುಕುಳ' ಎಂದು ಕರೆದರೆ, ಡಿಜಿಟಲ್ ಮೂಲಕ ಹರಡುವ ದ್ವೇಷಗಳನ್ನು ನಿಯಂತ್ರಿಸುವ ಬಗೆ ಹೇಗೆ? ಪ್ರತಿಭಟನಾ ನಿರತ ಬಿಜೆಪಿ ನಾಯಕರೇ ಉತ್ತರಿಸಬೇಕು.

ಕಲಾ ಸಾಹಿತ್ಯ

ವೈ.ಕೆ. ಸಂಧ್ಯಾಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

ಬಹುಮುಖ ಪ್ರತಿಭೆ ಕು. ರಶ್ಮಿ ಹೆಗ್ಡೆ ಭರತನಾಟ್ಯ ರಂಗಪ್ರವೇಶ

ಪ್ರತಿಭಾವಂತೆಯ ರಮ್ಯ ನೃತ್ಯವೈಭವ

ಉದಯೋನ್ಮುಖ ನೃತ್ಯಕಲಾವಿದೆ ಕು. ರಶ್ಮಿ ಹೆಗ್ಡೆ ಕಳೆದ ಇಪ್ಪತ್ತು ವರ್ಷಗಳಿಂದ ಸತತವಾಗಿ ಭರತನಾಟ್ಯ ತರಬೇತಿಯನ್ನು ಪಡೆಯುತ್ತಾ ನಿರಂತರ ಪರಿಶ್ರಮಿಸುತ್ತ ಇದೀಗ 'ರಂಗಪ್ರವೇಶ' ಮಾಡುವ ಸ್ಮರಣೀಯ ಘಟ್ಟವನ್ನು ಪ್ರವೇಶಿಸುತ್ತಿದ್ದಾಳೆ. ಪ್ರತಿಭಾವಂತ ನಾಟ್ಯಗುರು- ನೃತ್ಯಕಲಾವಿದೆ ವಿದುಷಿ. ಎಲ್. ಮಂಜುಭೈರವಿ (ನಾಟ್ಯ ಭೈರವಿ ಕಲಾ ಕುಟೀರ) ಅವರ ನುರಿತ ಗರಡಿಯಲ್ಲಿ ತರಬೇತಿಗೊಂಡ ಕಲಾಶಿಲ್ಪ ಇವಳು. ಕರ್ನಾಟಕ ಶಾಸ್ತ್ರೀಯ ಸಂಗೀತವನ್ನೂ ಕಲಿತಿರುವ ರಶ್ಮಿ, ಶ್ರೀಮತಿ ರಾಜೇಶ್ವರಿ ಶ್ರೀ ಮಂಜುನಾಥ್ ಹೆಗ್ಡೆ ಅವರ ಪುತ್ರಿಯಾಗಿದ್ದು, ಕರ್ನಾಟಕ ಸರ್ಕಾರದ ಜ್ಯೂನಿಯರ್, ಸೀನಿಯರ್, ಪ್ರೀ ವಿದ್ವತ್ ನೃತ್ಯಪರೀಕ್ಷೆಗಳಲ್ಲಿ ಉನ್ನತಾಂಕಗಳಿಂದ ತೇರ್ಗಡೆಯಾಗಿದ್ದು ಈಗ 'ವಿದ್ವತ್' ಪರೀಕ್ಷೆಗೆ ತಯಾರಿ ನಡೆಸಿದ್ದಾಳೆ. ಬಿ.ಎ. ಪದವೀಧರೆಯಾದ ಇವಳು, ಬೆಂಗಳೂರು ವಿಶ್ವವಿದ್ಯಾನಿಲಯದಿಂದ ಭರತನಾಟ್ಯದಲ್ಲಿ 'ಎಂ.ಎ.' ಸ್ನಾತಕೋತ್ತರ ಪದವಿ ಪಡೆದ ಪ್ರತಿಭಾವಂತೆ. ವನ್ಯ ಜೀವಿ ಛಾಯಾಗ್ರಾಹಕಿ, ಚಿತ್ರಕಲೆಯಲ್ಲಿ ನುರಿತ ಕಲಾವಿದೆಯಾಗಿದ್ದು, ನಾಡಿನಾದ್ಯಂತ ಹಲವಾರು ನೃತ್ಯಪ್ರದರ್ಶನಗಳನ್ನು ನೀಡಿ ಮೆಚ್ಚುಗೆ ಗಳಿಸಿದ್ದಾಳೆ.

ಪ್ರಸ್ತುತ ರಶ್ಮಿ, ಇದೇ ತಿಂಗಳ 13 ಭಾನುವಾರ ಸಂಜೆ 5 ಗಂಟೆಗೆ ಎ.ಡಿ.ಎ. ರಂಗಮಂದಿರದಲ್ಲಿ ತನ್ನ ಪ್ರತಿಭಾ ಪ್ರದರ್ಶನವನ್ನು ವಿದ್ಯುಕ್ತವಾಗಿ 'ರಂಗಪ್ರವೇಶ'ದ ಮೂಲಕ ನೆರವೇರಿಸಿಕೊಳ್ಳಲಿದ್ದಾಳೆ. ಇವಳ ಕಲಾ ಪ್ರಪೂರ್ಣ ನೃತ್ಯಸೊಬಗನ್ನು ಕಣ್ತುಂಬಿಕೊಳ್ಳಲು ಸಮಸ್ತ ಕಲಾಭಿಮಾನಿಗಳಿಗೂ ಸುಸ್ವಾಗತ.

ಸಂಸ್ಕಾರವಂತ ಕುಟುಂಬದ ಹಿನ್ನಲೆಯುಳ್ಳ ರಶ್ಮಿಗೆ ನೃತ್ಯ ಎಂದರೆ ಚಿಕ್ಕಂದಿನಿಂದ ಒಲವು. ಹೆತ್ತವರು ಅವಳ ಪ್ರತಿಭೆಯನ್ನು ಗಮನಿಸಿ ಏಳರ ಬಾಲಕಿಯನ್ನು 'ಅಜಂತಾ ಇಂಟರ್‌ನ್ಯಾಷನಲ್ ಕಲ್ಚರಲ್ ಸೊಸೈಟಿ' ನೃತ್ಯ ಸಂಸ್ಥೆಗೆ ಸೇರಿಸಿದರು. ಅಲ್ಲಿ ರಶ್ಮಿಗೆ, ಗುರು ಲಕ್ಷ್ಮೀಮೂರ್ತಿ, ಮಂಜುಭೈರವಿ ಅವರಿಂದ ನೃತ್ಯ ತರಬೇತಿ ದೊರೆಯಿತು. ಕರ್ನಾಟಕ ಸರ್ಕಾರದ ಜೂನಿಯರ್ ಸೀನಿಯರ್ ಮತ್ತು ಪ್ರೀ ವಿದ್ವತ್ ಪರೀಕ್ಷೆಯಲ್ಲಿ ಶ್ರೇಷ್ಠ ಅಂಕಗಳನ್ನು ಪಡೆದು ಉತ್ತೀರ್ಣಳಾದಳು. ಪ್ರಸ್ತುತ 'ನಾಟ್ಯ ಭೈರವಿ ಕಲಾ ಕುಟೀರ'ದಿಂದ 'ವಿದ್ವತ್'ಗೆ ತಯಾರಿ ನಡೆಸಿದ್ದಾಳೆ. ಕರ್ನಾಟಕ ಶಾಸ್ತ್ರೀಯ ಸಂಗೀತದ ಪರೀಕ್ಷೆಯನ್ನೂ ಪೂರ್ಣಗೊಳಿಸಿರುವ ರಶ್ಮಿ, ಭರತನಾಟ್ಯ ಪರೀಕ್ಷಾರ್ಥಿಗಳಿಗೆ ಗಾಯನ ಸಹಕಾರ ನೀಡುತ್ತಿದ್ದಾಳೆ ಕೂಡ. ಚಿತ್ರಕಲೆ-ಪೇಯಿಂಟಿಂಗ್, ವನ್ಯಜೀವಿ ಛಾಯಾಗ್ರಹಣದಲ್ಲಿ ಆಸಕ್ತಿಯುಳ್ಳ ರಶ್ಮಿ, ಬೆಂಗಳೂರು ಎಜುಕೇಷನ್ ಸೊಸೈಟಿ ಮತ್ತು ಶ್ರೀವಾಣಿ ಎಜುಕೇಷನ್ ಸೆಂಟರ್ ನಲ್ಲಿ ಶಾಲಾಭ್ಯಾಸವನ್ನು ಮುಗಿಸಿ ಎಂ.ಇ.ಎಸ್. ಕಾಲೇಜಿನಿಂದ ಬಿ.ಎ. ಪದವಿ ಪಡೆದಿದ್ದಾಳೆ. ನಂತರ-ಬೆಂಗಳೂರು ವಿಶ್ವವಿದ್ಯಾನಿಲಯದಿಂದ ಪರ್ಫಾರ್ಮಿಂಗ್ ಆರ್ಟ್ಸ್ ನಲ್ಲಿ ಎಂ.ಎ. ಪದವಿ ಪಡೆದು, ದೊಡ್ಡಬಳ್ಳಾಪುರದ ಕ್ರಿಯೇಟಿವ್ ಸ್ಕೂಲ್ ನಲ್ಲಿ ಸಂಗೀತ ಮತ್ತು ನೃತ್ಯ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿರುವ ವೈಶಿಷ್ಟ್ಯ ಅವಳದು.

ದೂರದರ್ಶನದ 'ಬಿ' ಗ್ರೇಡ್ ನೃತ್ಯಕಲಾವಿದೆಯಾದ ರಶ್ಮಿ, 'ಸಂಕಲ್ಪ' ನೃತ್ಯತಂಡದ ಭಾಗವಾದ ಇವಳು ಈಗಾಗಲೇ ಅನೇಕ ನೃತ್ಯ ಪ್ರದರ್ಶನಗಳನ್ನು ನೀಡಿ ಮೆಚ್ಚುಗೆ ಗಳಿಸಿದ್ದಾಳೆ. ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದ ಅನೇಕ ನೃತ್ಯಸ್ಪರ್ಧೆಗಳಲ್ಲಿ ಭಾಗವಹಿಸಿ ಬಹುಮಾನ ಪಡೆದ ಹೆಮ್ಮೆ ಇವಳದು. ಅವುಗಳಲ್ಲಿ ಮುಖ್ಯವಾದವು- ಇಸ್ಕಾನ್ ಮತ್ತು ಕನ್ನಡ-ಸಂಸ್ಕೃತಿ ಇಲಾಖೆಯ ಅನೇಕ ನೃತ್ಯಸ್ಪರ್ಧೆಗಳು, ಅರಳು ಮಲ್ಲಿಗೆ ರಾಜ್ಯ ಪ್ರಶಸ್ತಿ, ಐ. ಸಿ. ಸಿ ಆರ್, ಘಾಟಿ ಸುಬ್ರಮಣ್ಯ, ಗೋಕರ್ಣ, ಕೇರಳ, ಗುರುವಾಯೂರು, ತುಮಕೂರು, ಧರ್ಮಸ್ಥಳ ದೇವಾಲಯಗಳಲ್ಲಿ ನೃತ್ಯ ಪ್ರದರ್ಶನ, ಕೆಲವು ನೃತ್ಯಸ್ಪರ್ಧೆಗಳಿಗೆ ತೀರ್ಪುಗಾರಳಾಗಿಯೂ ಅನುಭವ ಗಳಿಸಿದ್ದಾಳೆ. ಭರತನಾಟ್ಯದ ಚರಿತ್ರೆ, ಸೌಂದರ್ಯ ಕುರಿತ ಸಂಶೋಧನಾ ಪ್ರಬಂಧವನ್ನು ವಿಚಾರಸಂಕಿರಣಗಳಲ್ಲಿ ಮಂಡಿಸಿದ, ಜೊತೆಗೆ ಉತ್ತರ ಕನ್ನಡದ ಜಾನಪದ ನೃತ್ಯ 'ಹಾಲಕ್ಕಿ ಕುಣಿತ'ದ ಬಗ್ಗೆ ಅದರ ಸಾಂಸ್ಕೃತಿಕ ವೈಶಿಷ್ಟ್ಯ ಕುರಿತು ಸಂಶೋಧನೆ ನಡೆಸಿದ್ದಾಳೆ. 'ಕಾಲ' ಎಂಬ ಬರಲಿರುವ ಚಲನಚಿತ್ರಕ್ಕೆ ಹಾಡಿದ್ದು, ಕೆಲವು ನೃತ್ಯನಾಟಕಗಳಿಗೆ ಸಹಯೋಗ ನೀಡಿರುವ ಅಗ್ಗಳಿಕೆ ಇವಳದು.

ಧರೆಗೆ ಬಾ...ರಾಮ ನಾಚಿಕೊಳ್ಳಬೇಡ

• ಗುರಾಣಿ

ಎದ್ದೊಡನೆ ಎಡಗೈಯಲ್ಲಿ ಆಂಡ್ರಾಯ್ಡ್ ಫೋನು
ಕಣ್ಣುಜ್ಜುತ್ತ ಬಲಗೈಯಲ್ಲಿ ಸ್ವೈಪು ಹಾಗೇ ಒಂದು
ಯೂಟ್ಯೂಬ್‌ನ ಝಲಕು ಇನ್ನೆಲ್ಲಿಯ ರಾಮ...
ಹದಿನೆಂಟರ ಪಡ್ಡೆ ಹುಡುಗ ಹರಿದ ಲೇಟೆಸ್ಟ್
ಥ್ರಿ ಫೋರ್ಥ್ ಬರ್ಮುಡಾ ಧರಿಸಿ, ಕೊರಳ ಕೊಂಕಿಸಿ
ರೋಡ್ ಮೇಲೆ ಸ್ಟಂಟ್ಸ್ ಮಾಡುತ್ತ, ತಂಪು ಮುಂಜನೆಯ
ತಂಗಾಳಿಗೆ ಕಾರ್ಬನ್ ಹಂಚುವಾಗ ಇನ್ನೆಲ್ಲಿಯ
ರಾಮ...

ಮೈ ಮುರಿದು
ದುಡಿವ ತಲೆ ಹುರಿದು,
ಕಂಪ್ಯೂಟರ್‌ನ ಬುಡ
ಜಾಲಾಡಿ ಮಾಡಿಟ್ಟ
ಮೂರು ದಿನ ಫ್ರಿಜ್‌ಲ್ಲಿಟ್ಟ
ತಂಗಳು ಸಾಂಬಾರ್
ಬಿಸಿಮಾಡಿ ಉಣ್ಣುವ
ಸೂಪರ್ ಭೋಜನಕ್ಕೆ
ಸಾಕ್ಷಿಯಾಗುವ ಯುವ
ದಂಪತಿಗಳಿರುವಾಗ
ಇನ್ನೆಲ್ಲಿಯ ರಾಮ...
ಮೂವತ್ತಾದರು ಮದುವೆ ಗೋಜಿಗೆ ಹೋಗದ
ಮಗಳು, ಅವಳೊಪ್ಪಿದರೆ ಆಯ್ತು ನಮ್ಮದೇನಿಲ್ಲ
ಹಳೇ ಫರ್ನಿಚರ್ಗಳು ಇರಬಾರದು ಅಷ್ಟೇ
ಎಂದು ಮುದ್ದುಮಾಡುವ ಮಾತ ಪಿತೃರಿರುವಾಗ
ಇನ್ನೆಲ್ಲಿಯ ರಾಮ...
ನಾವೇ ಸಾಕಿ ಸಲಹಿದ ಮುದ್ದು ಮಕ್ಕಳು ಇರುವರು
ಹೊರದೇಶದಲಿ ಬಂದರೆ ಬರುವರು ವರುಷಕ್ಕೊಮ್ಮೆ
ಬದುತಿಹೆವು ನಾವಿಲ್ಲಿ ಸಾವಿಗಂಜಿ ಬಾಳುತಿರಲು
ಇನ್ನೆಲ್ಲಿಯ ರಾಮ...
ಹೆದರದೆ ಧರೆಗಿಳಿದು ಬಾ....ರಾಮ ನಾಚಿಕೊಳ್ಳಬೇಡ

ಆಹಾರಪದ್ಧತಿಯಿಂದ ಲಿವರ್ ಚೆನ್ನಾಗಿ ಕೆಲಸಮಾಡುವ ಹಾಗೆ ಮಾಡಬಹುದು

ನಮ್ಮ ದೇಹದಲ್ಲಿ ಬಹುದೊಡ್ಡ ಅಂಗ ಎಂದರೆ ಅದು ಲಿವರ್. ಈ ಪ್ರಮುಖ ಅಂಗ ನಮ್ಮ ದೇಹದ ರಕ್ತವನ್ನು ಶುದ್ಧಿಗೊಳಿಸುವುದರ ಜೊತೆಗೆ ಬೇಡದ ವಿಷಕಾರಿ ಅಂಶಗಳನ್ನು ನಮ್ಮ ದೇಹದಿಂದ ಹೊರ ಹಾಕುವ ಕೆಲಸವನ್ನು ಅಚ್ಚುಕಟ್ಟಾಗಿ ನೆರವೇರಿಸುತ್ತದೆ. ಪ್ರಮುಖವಾಗಿ ಮೆಟಬಾಲಿಸಂ ಪ್ರಕ್ರಿಯೆಯಿಂದ ಹಿಡಿದು ಅನೇಕ ಕಾರ್ಯ ಚಟುವಟಿಕೆಗಳಲ್ಲಿ ತನ್ನನ್ನು ತಾನು ತೊಡಗಿಸಿಕೊಳ್ಳುತ್ತದೆ ದೇಹದ ಆರೋಗ್ಯ ಕಾಪಾಡುವಲ್ಲಿ ಇದರ ಪಾತ್ರ ಮರೆಯುವ ಹಾಗಿಲ್ಲ ಹೀಗಾಗಿ ನಮ್ಮ ದೇಹದ ಆರೋಗ್ಯಕ್ಕೆ ಲಿವರ್ ಕೊಡುಗೆ ತುಂಬಾ ದೊಡ್ಡದಿದೆ. ಆದರೆ ಇಂದಿನ ದಿನಗಳಲ್ಲಿ ಕೆಲವರಿಗೆ ಸಣ್ಣ ವಯಸ್ಸಿನಿಂದಲೇ ಲಿವರ್ ಸಮಸ್ಯೆ ಕಾಣಿಸಿಕೊಳ್ಳುತ್ತಿದ್ದರೆ, ಇನ್ನು ಕೆಲವರಿಗೆ ಮದ್ಯಪಾನ ಅಭ್ಯಾಸದಿಂದ ಈ ಸಮಸ್ಯೆ ಶುರುವಾಗುತ್ತಿದೆ ಹೀಗಾಗಿ ಲಿವರ್ ಆರೋಗ್ಯವನ್ನು ನಿರ್ವಹಣೆ ಮಾಡಿಕೊಳ್ಳಬೇಕಾದ ಜವಾಬ್ದಾರಿ ನಮ್ಮದೇ. ಇಲ್ಲದಿದ್ದರೆ ನಾವು ಅನುಸರಿಸುತ್ತಿರುವ ಕೆಟ್ಟ ಅಭ್ಯಾಸಗಳಿಂದಾಗಿ ಹಾಗೂ ಅತಿಯಾಗಿ ಕೆಟ್ಟ ಕೊಬ್ಬಿನಾಂಶ ಇರುವ ಹಾಗೂ ಎಣ್ಣೆಯಾಂಶ ಇರುವ ಆಹಾರಗಳಿಂದ ಲಿವರ್ ಭಾಗದಲ್ಲಿ ಉರಿಯುತ ಹೆಚ್ಚಾಗುತ್ತದೆ ಮತ್ತು ಲಿವರ್ ಆರೋಗ್ಯ ಸಂಪೂರ್ಣವಾಗಿ ಹಾಳಾಗುತ್ತದೆ! ಇಲ್ಲಾಂದ್ರೆ ಫ್ಯಾಟಿ ಲಿವರ್ ಕಾಯಿಲೆ ಕೂಡ ಬರುವ ಸಾಧ್ಯತೆ ಇರುತ್ತದೆ. ಇಂದಿನ ಲೇಖನದಲ್ಲಿ ಮನೆಯಲ್ಲಿಯೇ ಸುಲಭವಾಗಿ ಮನೆಮದ್ದುಗಳ ಮೂಲಕ ನಮ್ಮ ಲಿವರ್ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಹೇಗೆ ಎನ್ನುವುದರ ಬಗ್ಗೆ ತಜ್ಞರು ಹಾಗೂ ಯೂಟ್ಯೂಬರ್ ಕೂಡ ಆಗಿರುವ ಡಾ. ಸಲೀಂ ಜೈದಿ ಅವರು ನೀಡಿರುವ ಮಾಹಿತಿಯನ್ನು ನೋಡುತ್ತಾ ಹೋಗೋಣ?

ನಿಂಬೆ ಪಾನೀಯ!: ಬೆಳಗಿನ ಜಾವದಲ್ಲಿ ಖಾಲಿ ಹೊಟ್ಟೆಗೆ ನಿಂಬೆಹಣ್ಣಿನ ರಸ ಬೆರೆಸಿದ ನೀರು ಸೇವಿಸುವ ಅಭ್ಯಾಸ ಮಾಡಿಕೊಳ್ಳಿ ಎಂದು ತಜ್ಞರು ಸಲಹೆ ನೀಡುತ್ತಾರೆ. ದೇಹದಿಂದ ವಿಷಕಾರಿ ಅಂಶಗಳು ಮತ್ತು ಬೇಡದ ತ್ಯಾಜ್ಯಗಳು ಮೂತ್ರದ ಮೂಲಕ ಹೊರಹೋಗುತ್ತವೆ, ಜೊತೆಗೆ ಲಿವರ್ ಆರೋಗ್ಯವು ಆರೋಗ್ಯವಾಗಿರುತ್ತವೆ. ಇದಕ್ಕೆ ಪ್ರಮುಖ ಕಾರಣ ನಿಂಬೆ ಹಣ್ಣಿನ ರಸದಲ್ಲಿ ವಿಟಮಿನ್ ಸಿ ಪ್ರಮಾಣವನ್ನು ಹೆಚ್ಚಾಗಿ ಒಳಗೊಂಡಿದೆ. ಇದು ನಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವ ಜೊತೆಗೆ ನಮ್ಮ ಲಿವರ್ ಭಾಗದ ವಿಷಕಾರ

ಮತ್ತೊಂದು ಬ್ಯಾಂಕ್ ದರೋಡೆ ಯತ್ನ: ತನಿಖೆಯಲ್ಲಿ ಸ್ಫೋಟಕ ಮಾಹಿತಿ ಬಹಿರಂಗ

• ಉದಯವಾಹಿನಿ ಮಂಗಳೂರು

ಮಂಗಳೂರು ಹೊರವಲಯದ ಕೋಟೆಕಾರ್ ಸಹಕಾರಿ ಬ್ಯಾಂಕ್ ನಲ್ಲಿನ ದರೋಡೆ ಇಡೀ ಕರ್ನಾಟಕವನ್ನೇ ಬೆಚ್ಚಿ ಬೀಳಿಸಿತ್ತು. ಬ್ಯಾಂಕ್‌ಗೆ ನುಗ್ಗಿದ್ದ ಚೋರರು ಪಿಸ್ತೂಲ್ ತೋರಿಸಿ 12 ಕೋಟಿ ರೂ ಮೌಲ್ಯದ ಚಿನ್ನಾಭರಣ ದೋಚಿದ್ದರು. ಇದರ ಬೆನ್ನಲ್ಲೇ ಇತ್ತೀಚೆಗೆ ಅದೇ ಮಂಗಳೂರು ಹೊರವಲಯದ ದೇರಳಕಟ್ಟೆ ಜಂಕ್ಷನ್‌ನಲ್ಲಿರುವ ಮುತ್ತೂಟ್ ಫೈನಾನ್ಸ್‌ಗೆ ಕನ್ನ ಹಾಕಲು ಮುಂದಾಗಿದ್ದ ಚೋರರು ಲಾಕ್ ಆಗಿದ್ದರು. ಸದ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿತ ನಟೋರಿಯಸ್ ದರೋಡೆಕೋರರಿಬ್ಬರ ವಿಚಾರಣೆ ತೀವ್ರವಾಗಿದ್ದು, ಮಂಗಳೂರು ಪೊಲೀಸರು ಮಹತ್ವದ ಮಾಹಿತಿ ಕಲೆ ಹಾಕಿದ್ದಾರೆ. ಕೇರಳ ಮೂಲದ ಐವರು ದರೋಡೆಕೋರರಿಂದ ಮುತ್ತೂಟ್ ಫೈನಾನ್ಸ್ ದರೋಡೆಗೆ ಯತ್ನಿಸಿದ್ದರು. ದರೋಡೆಗೂ ಮೊದಲು ಮುರುಳಿ ತಂಡ ಫೈನಾನ್ಸ್‌ನ ರೇಖಿ ನಡೆಸಿತ್ತು. ಫೈನಾನ್ಸ್ ನಲ್ಲಿ ಭಾರೀ ಪ್ರಮಾಣದಲ್ಲಿ ಚಿನ್ನಾಭರಣವಿರುವ ಬಗ್ಗೆ ಮಾಹಿತಿ ಕಲೆ ಹಾಕಿದ್ದರು ಎಂಬುವುದು ವಿಚಾರಣೆಯಲ್ಲಿ ತಿಳಿದುಬಂದಿದೆ.

ಕಳ್ಳತನಕ್ಕೆ ವಿಫಲ ಯತ್ನ

ತಡರಾತ್ರಿ ಕಟ್ಟಡದ ಹಿಂದಿರುವ ಮರವೇರಿ ಫೈನಾನ್ಸ್ ಕಟ್ಟಡ ಪ್ರವೇಶಿಸಿದ್ದ ಮುರುಳಿ, ಹರ್ಷದ್ ಮತ್ತು ಲತೀಫ್, ಅತ್ಯಾಧುನಿಕ ಸೈಲೆಂಟ್ ಡ್ರಿಲ್ ಮಿಷನ್ ತಂದಿದ್ದರು. ಫೈನಾನ್ಸ್ ನಲ್ಲಿದ್ದ ಅತ್ಯಾಧುನಿಕ ಸೆನ್ಸರ್ ಸೈರನ್ ಮೊಳಗಿದ ಹಿನ್ನೆಲೆ ಸ್ಥಳದಲ್ಲೇ ಮುರುಳಿ ಮತ್ತು ಹರ್ಷದ್ ಸಿಕ್ಕಿಬಿದ್ದಿದ್ದು, ಲತೀಫ್ ಸ್ಥಳದಿಂದ ಪರಾರಿಯಾಗಿದ್ದ.

35 ಕೆಜಿಗೂ ಹೆಚ್ಚು ಚಿನ್ನಾಭರಣ ಮುತ್ತೂಟ್ ಫೈನಾನ್ಸ್ ನಲ್ಲಿತ್ತು. ಆದರೆ ಕಂಟ್ರೋಲ್ ರೂಮ್‌ನ ಸಮಯ ಪ್ರಜ್ಞೆಯಿಂದಾಗಿ ಭಾರೀ ಅನಾಹುತ ತಪ್ಪಿತ್ತು. ಈ ಮೂವರು ಆರೋಪಿಗಳು ಈ ಹಿಂದೆ ಕೇರಳದಲ್ಲಿ ನಡೆದಿದ್ದ ಬ್ಯಾಂಕ್ ದರೋಡೆ ಪ್ರಕರಣದಲ್ಲಿ ಆರೋಪಿಗಳಾಗಿದ್ದರು ಅನ್ನೋ ಮಾಹಿತಿ ಕೂಡ ತನಿಖೆಯಲ್ಲಿ ಬಯಲಾಗಿದೆ. ಸದ್ಯ ತಲೆ ಮರೆಸಿಕೊಂಡಿರುವ ಆರೋಪಿಗಳಿಗೆ ಮಂಗಳೂರು ಪೊಲೀಸರು ಬಲೆ ಬೀಸಿದ್ದಾರೆ.

ಉದಯವಾಹಿನಿ ಚಿತ್ರ

ಹಣಕಾಸು ಸಂಸ್ಥೆಗಳಲ್ಲಿ ಸೂಕ್ತ ಭದ್ರತಾ ವ್ಯವಸ್ಥೆಗಳು ಇಲ್ಲದೇ ಇದ್ದರೆ ಏನಾಗುತ್ತೆ ಅನ್ನೋದಕ್ಕೆ ಮಂಗಳೂರಿನ ಕೋಟೆಕಾರ್ ವ್ಯವಸಾಯ ಸೇವಾ ಸಹಕಾರಿ ಬ್ಯಾಂಕ್ ದರೋಡೆ ಸಾಕ್ಷಿಯಾಗಿತ್ತು. ಅದೇ ರೀತಿ ಭದ್ರತಾ ವ್ಯವಸ್ಥೆಗಳು ಸರಿಯಾಗಿ ಇದ್ದರೆ ಏನಾಗುತ್ತೆ ಅನ್ನೋದಕ್ಕೂ ಮಂಗಳೂರಿನಲ್ಲಿ ನಡೆದ ಕಳ್ಳತನಕ್ಕೆ ವಿಫಲ ಪ್ರಯತ್ನವೇ ಸಾಕ್ಷಿ ಆಗಿದೆ. ಆದರೆ ಈ ಫೈನಾನ್ಸ್ ಕಳ್ಳತನಕ್ಕೆ ಯತ್ನದಲ್ಲಿ ಭದ್ರತಾ ಸಲಕರಣೆಗಳೇ ಸಹಕಾರಿಯಾಗಿದೆ. ಜೊತೆಗೆ ಫೈನಾನ್ಸ್‌ನ ಕಂಟ್ರೋಲ್ ರೂಂ ಅಧಿಕಾರಿಗಳು, ಸ್ಥಳೀಯರು ಹಾಗೂ ಪೊಲೀಸರ ಸಮಯ ಪ್ರಜ್ಞೆಯಿಂದ ಭಾರೀ ಕಳ್ಳತನವೊಂದು ತಪ್ಪಿತ್ತು.

ರಾಣಿತೋಟದ ವೆಂಕಟೇಶ್ ಕೊಲೆ ಪ್ರಕರಣ ಆರೋಪಿಗಳ ಬಂಧನ

ಉದಯವಾಹಿನಿ ಚಿತ್ರ

• ಉದಯವಾಹಿನಿ ಬಳ್ಳಾರಿ

ಎ. 5 ರ ಬೆಳಿಗ್ಗೆ ಅಂದ್ರಾಳ್ ರಸ್ತೆಯಲ್ಲಿನ ಕೆ.ಟಿ ಪ್ರಜ್ವಲ್ ಕಾಟನ್ ಮಿಲ್ ಮುಂದೆ ನಗರದ ರಾಣಿತೋಟದ ವೆಂಕಟೇಶ ಎಂಬಾತನ ಕೊಲೆ ನಡೆದಿತ್ತು. ಈ ಪ್ರಕರಣದಲ್ಲಿ ನಿನ್ನೆ ಇಬ್ಬರು ಮಕ್ಕಳು ಸೇರಿದಂತೆ 11 ಜನರನ್ನು ಬಂಧಿಸಿದ್ದಾರೆ ಬ್ರೂಸ್ ಪೇಟೆ ಪೊಲೀಸರು. ಕಟ್ಟಿಗೆ, ಮಚ್ಚು ಹಾಗೂ ಕಲ್ಲಿನಿಂದ ತಲೆಗೆ, ಹಣೆ, ಎದೆ, ಬೆನ್ನು ಸಿಕ್ಕಸಿಕ್ಕಲ್ಲಿಗೆ ಹೊಡೆದು ತೀವ್ರ ಗಾಯಗೊಳಿಸಿ ಕೊಲೆ ಮಾಡಲಾಗಿತ್ತು.

ಕೊಲೆ ಮಾಡಿದ ಆರೋಪಿಗಳಾದ ನೀಲವೇಣಿ, ಆನಂದ, ಮಹಮದ್ ಗೌಸ್, ಶಿವಸಂಕರ ಅಲಿಯಾಸ್ ಚಿರು, ಮಹಮದ್ ಸಾಹಿದ್ ಅಲಿಯಾಸ್ ಜಂಗ್ಲಿ, ಪಾಷಾವಲಿ ಅಲಿಯಾಸ್ ದುದ್ದು, ಮಹಮದ್ ಶರೀಫ್, ಮಹಮದ್ ಆಸಿಫ್, ಮಹಮದ್ ಸೊಹೇಲ್ ಹಾಗು ಇಬ್ಬರು ಕಾನೂನು ಸಂರ್ಘಷಕ್ಕೆ ಒಳಗಾದ ಬಾಲಕರನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದೆಂದು ಎಸ್ಪಿ ಶೋಭಾರಾಣಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಮ್ಯೂನಿಸ್ಟ್ ಸಿದ್ಧಾಂತಗಳ ಮೂಲಕ ದಲಿತರ ಮತ್ತು ಶೋಷಿತರ ಕಲ್ಯಾಣಕ್ಕಾಗಿ ಶ್ರಮಿಸಿದರು: ಪ್ರೊ. ಕನಕರತ್ನಂ

ದೇಶದ ಅಪ್ರತಿಮ ನಾಯಕ ಡಾ. ಬಾಬು ಜಗಜೀವನರಾಂ

• ಉದಯವಾಹಿನಿ ಬಳ್ಳಾರಿ

ಬಾಬುರವರು ಕೇವಲ ರಾಜಕಾರಣಿಯಾಗಿರದೆ, ದೇಶದ ಕೆಳ ವರ್ಗದ ದಮನಿತರ ಧ್ವನಿಯಾಗಿ ಹೋರಾಟ ಮಾಡಿದ ಹರಿಕಾರ ಎಂದು ಆಂಧ್ರಪ್ರದೇಶದ ಕುಪ್ಪಂನ ದ್ರಾವಿಡಿಯನ್ ವಿಶ್ವವಿದ್ಯಾಲಯ ಇತಿಹಾಸ ಮತ್ತು ಪುರಾತತ್ವ ವಿಭಾಗದ ಪ್ರಾಧ್ಯಾಪಕರಾದ ಪ್ರೊ. ಕನಕರತ್ನಂ ಅವರು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಆಯೋಜಿಸಿದ್ದ ಬಾಬು ಜಗಜೀವನ ರಾಂ 118ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಅವರು ಗಣ್ಯರೊಂದಿಗೆ ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿದರು.

ಬಾಬುರವರು ಶೋಷಿತ ಕಾರ್ಮಿಕ ವರ್ಗದ ಹಕ್ಕಿಗಾಗಿ, ಒಳಿತಿಗಾಗಿ ಹೋರಾಟಕ್ಕೆ ಧುಮುಕಿದ್ದರು.

ಸಮಾಜದಲ್ಲಿ ನೆಲೆಯೂರಿದ್ದ ಅಸ್ಪೃಶ್ಯತೆಯನ್ನು ಹೋಗಲಾಡಿಸಿ ಸಮಾನತೆ ತರುವುದು ಅವರ ಮುಖ್ಯ ಉದ್ದೇಶವಾಗಿತ್ತು. ಗಾಂಧೀಜಿಯವರು, ಮುನ್ಸಿ ಪ್ರೇಮ್‌ಚಂದ್, ಕಮಲಾ ತ್ರಿಪಾಠಿ ಸೇರಿದಂತೆ ದೇಶದ ಅನೇಕ ನಾಯಕರು ಇವರ ವಿಚಾರಧಾರೆಗಳನ್ನು ಪ್ರೋತ್ಸಾಹಿಸಿದರು. ಬನಾರಸ್ ಹಿಂದೂ ವಿಶ್ವವಿದ್ಯಾಲಯ ಮತ್ತು ಕೋಲ್ಕತಾ ವಿಶ್ವವಿದ್ಯಾಲಯಗಳಿಂದ ಶಿಕ್ಷಣ ಪೂರೈಸಿದ ನಂತರ ಬಾಬುರವರು ಸಕ್ರೀಯ ರಾಜಕೀಯಕ್ಕೆ ಪ್ರವೇಶಿಸಿ ರವಿದಾಸ ಚಳುವಳಿ, ಅಸ್ಪೃಶ್ಯತಾ ವಿರೋಧಿ ಚಳುವಳಿ ಸೇರಿದಂತೆ ದೇಶದಾದ್ಯಂತ ಸಂಚರಿಸಿ ಅನೇಕ ಚಳುವಳಿಗಳನ್ನು ನಡೆಸಿದ್ದರು.

ಉದಯವಾಹಿನಿ ಚಿತ್ರ

ಕಮ್ಯೂನಿಸ್ಟ್ ಸಿದ್ಧಾಂತಗಳ ಮೂಲಕ ದಲಿತರ ಮತ್ತು ಶೋಷಿತರ ಕಲ್ಯಾಣಕ್ಕಾಗಿ ಶ್ರಮಿಸಿದರು. ಸಂಸದರಾಗಿ, ವಿವಿಧ ಸಚಿವಾಲಯಗಳ ಮಂತ್ರಿಗಳಾಗಿ, ದೇಶದ ಉಪಪ್ರಧಾನಿಯಾಗಿ ಕಾರ್ಯನಿರ್ವಹಿಸಿದ್ದರು. ನಂತರದಲ್ಲಿ ಕಾಂಗ್ರೇಸ್ ಫಾರ್ ಡೆಮಾಕ್ರಸಿ (ಕಾಂಗ್ರೇಸ್ ಜೆ) ಎಂಬ ಪಕ್ಷ ಸ್ಥಾಪಿಸಿದ್ದರು.

ಡಾ. ಬಾಬು ಜಗಜೀವನರಾಂ ಅಧ್ಯಯನ ಮತ್ತು ಸಂಶೋಧನ ಕೇಂದ್ರದ ಸಂಯೋಜಕರಾದ ಡಾ. ಹೆಚ್. ತಿಪ್ಪೇಸ್ವಾಮಿ ವೇದಿಕೆಯಲ್ಲಿದ್ದರು. ನಾಟಕ ಹಾಗೂ ಪ್ರದರ್ಶನ ಕಲೆ ವಿಭಾಗದ ಡಾ ಅಣ್ಣೋಜಿ ಕೃಷ್ಣಾ ರೆಡ್ಡಿ ತಂಡವು ಗೀತಗಾಯನ ಪ್ರಸ್ತುತಪಡಿಸಿದರು.

> ಬಾಬುರವರ ಸಮಾಜದ ಕಡೆಗಣಿತ ವರ್ಗದ ಪರವಾಗಿ ನಿಂತವರು. ಬಂಡವಾಳಶಾಹಿ ವಿರುದ್ಧ ಕೋಲ್ಕತ ಪ್ರಾಂತ್ಯದಲ್ಲಿ ಹೋರಾಟ ಮಾಡಿದರು. ನೆಹರು ಅವರ ಸರ್ಕಾರದಲ್ಲಿ ಸ್ಥಾನ ಪಡೆದ ಯುವ ಮತ್ತು ಪ್ರಥಮ ಕಾರ್ಮಿಕ ಸಚಿವರಾಗಿದ್ದರು. ಕೃಷಿಯಲ್ಲಿ ಕ್ಷಿಪ್ರ ಬದಲಾವಣೆ ತಂದು ಹಸಿರುಕ್ರಾಂತಿಯ ಹರಿಕಾರ ಎಂಬ ಬಿರುದು ಪಡೆದರು. ವಿವಿಯಲ್ಲಿರುವ ಜಗಜೀವನ್‌ರಾಮ್ ಅಧ್ಯಯನ ಪೀಠದಲ್ಲಿ 21ನೇ ಶತಮಾನದಲ್ಲಿ ಬಾಬುರವರ ವಿಚಾರಧಾರೆಗಳ ಪ್ರಸ್ತುತತೆ ಕುರಿತು ಆಳವಾದ ಸಂಶೋಧನೆಗಳು ನಡೆಯಲಿ
> –ಎಸ್ ಎನ್ ರುದ್ರೇಶ್, ವಿಶ್ವವಿದ್ಯಾಲಯದ ಕುಲಸಚಿವ

> ಡಾ. ಬಾಬು ಜಗಜೀವನ ರಾಮ್ ಬದುಕಿನುದ್ದಕ್ಕೂ ಶಿಕ್ಷಣ, ರಾಜಕೀಯ, ಕೈಗಾರಿಕೋದ್ಯಮ ಸೇರಿದಂತೆ ಎಲ್ಲಾ ಕ್ಷೇತ್ರಗಳಿಗೆ ಅಪಾರ ಕೊಡುಗೆ ನೀಡಿದ ಮಹಾನ್ ನಾಯಕರಾಗಿದ್ದಾರೆ. ಸಾಮಾನ್ಯ ಜನರ ಕಷ್ಟವನ್ನು ಹತ್ತಿರದಿಂದ ನೋಡಿದ್ದ ಇವರು ತಮ್ಮ ನಿಸ್ವಾರ್ಥ ಸೇವೆ ಮೂಲಕ ಜನನಾಯಕರಾಗಿ ಬೆಳೆದರು. ಸರ್ಕಾರಿ ಶಾಲೆ, ಕಾಲೇಜು, ವಿದ್ಯಾಲಯಗಳಲ್ಲಿ ಬಾಬುರಂತಹ ಹಲವಾರು ಪ್ರತಿಭೆಗಳಿದ್ದು, ಸಮಾಜಮುಖಿಯಾಗಿ ಸೇವೆ ಸಲ್ಲಿಸಲು ಹಾಗೂ ಪೋಷಕರ ಕನಸುಗಳನ್ನು ಈಡೇರಿಸಲು ಅವರ ತತ್ವಾದರ್ಶಗಳನ್ನು ಅಳವಡಿಸಿಕೊಂಡು ನಿರಂತರ ಅಧ್ಯಯನ ನಡೆಸಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು –ಪ್ರೊ. ಎಂ ಮುನಿರಾಜು, ವಿಶ್ವವಿದ್ಯಾಲಯದ ಕುಲಪತಿ

ಭಾರತೀಯ ಯೋಗ ಶಿಕ್ಷಣ ಸಂಸ್ಥೆ ವತಿಯಿಂದ ಶ್ರೀರಾಮೋತ್ಸವ ಆಚರಣೆ

• ಉದಯವಾಹಿನಿ ಚಿತ್ರದುರ್ಗ

ಶ್ರೀರಾಮನು ಸತ್ಯವಂತನಾಗಿದ್ದನು, ಯಾವಾಗಲೂ ಧರ್ಮದ ಮಾರ್ಗದಲ್ಲಿ ನಡೆದನು. ಅವನು ಎಂದಿಗೂ ಸುಳ್ಳು ಹೇಳಲಿಲ್ಲ ಮತ್ತು ಅನ್ಯಾಯವನ್ನು ಸಹಿಸಲಿಲ್ಲ. ಇದು ಮಕ್ಕಳಿಗೆ ಸತ್ಯವನ್ನು ಪಾಲಿಸುವ ಮತ್ತು ಧರ್ಮದಂತೆ ನಡೆಯುವ ಪ್ರಾಮುಖ್ಯತೆಯನ್ನು ತಿಳಿಸುತ್ತದೆ. ಎಂದು ಮದಕರಿಪುರ ಸರ್ಕಾರಿ ಶಾಲೆಯ ಶಿಕ್ಷಕಿ ಶ್ರೀಮತಿ ನಾಗಲತಾ ಮಾತಾಜೀ ಅಭಿಪ್ರಾಯ ಪಟ್ಟರು.

ಚಿತ್ರದುರ್ಗ ನಗರದ ತುರುವನೂರು ರಸ್ತೆಯ ಶ್ರೀಪ್ರಸನ್ನ ವೆಂಕಟೇಶ್ವರ ಸ್ವಾಮಿ ದೇವಾಲಯ ಆವರಣದಲ್ಲಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ಇವರು ಹಮ್ಮಿಕೊಂಡಿರುವ ಮಕ್ಕಳ ಉಚಿತ ಬೇಸಿಗೆ ಶಿಬಿರದಲ್ಲಿ ಭಾನುವಾರ ಶ್ರೀರಾಮ ನವಮಿ ಅಂಗವಾಗಿ ಏರ್ಪಡಿಸಿದ್ದ ಶ್ರೀರಾಮೋತ್ಸವ ಪೂಜಾ ಕಾರ್ಯಕ್ರಮದಲ್ಲಿ ಶಿಬಿರದ ಮುಖ್ಯ ಪ್ರಶಿಕ್ಷಕರಾಗಿ ಭಾಗವಹಿಸಿ ಅವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಬ್ಯಾಂಕ್ ಕಾಲೋನಿ ನಾಗರೀಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ದೇವೇಂದ್ರಪ್ಪ ಮಾತನಾಡಿ ಶ್ರೀರಾಮನು ಮಕ್ಕಳಿಗೆ ಅನೇಕ ವಿಧಗಳಲ್ಲಿ ಆದರ್ಶ ವ್ಯಕ್ತಿಯಾಗಿದ್ದಾರೆ.

ಉದಯವಾಹಿನಿ ಚಿತ್ರ

ಅವರ ಜೀವನವು ಮಕ್ಕಳು ಕಲಿಯಬಹುದಾದ ಮತ್ತು ಅಳವಡಿಸಿಕೊಳ್ಳಬಹುದಾದ ಮೌಲ್ಯಗಳಲ್ಲಿ ಶ್ರೀ ರಾಮನು ತನ್ನ ತಂದೆಯ ಮಾತಿಗೆ ಗೌರವ ಕೊಟ್ಟು 14 ವರ್ಷಗಳ ಕಾಲ ವನವಾಸಕ್ಕೆ ಹೋದನು.

ಇದು ಮಕ್ಕಳಿಗೆ ತಮ್ಮ ಪೋಷಕರನ್ನು ಗೌರವಿಸುವುದು ಮತ್ತು ಅವರ ಮಾತಿಗೆ ವಿಧೇಯರಾಗಿರುವುದು ಎಷ್ಟು ಮುಖ್ಯ ಎಂದು ಕಲಿಸುತ್ತದೆ. ಹಾಗೆಯೇ ಸತ್ಯ ಮತ್ತು ಧರ್ಮಕ್ಕೆ ಬದ್ಧನಾಗಿದ್ದ ರಾಮನು ಯಾವಾಗಲೂ ಸತ್ಯವನ್ನೇ ನುಡಿದನು ಮತ್ತು ಧರ್ಮದ ಮಾರ್ಗದಲ್ಲಿ ನಡೆದನು. ಮಕ್ಕಳು ಸಹ ಸತ್ಯವಂತರಾಗಿರಬೇಕು ಮತ್ತು ಸರಿಯಾದದ್ದನ್ನು ಮಾಡಬೇಕು ಬೇಸಿಗೆ ಶಿಬಿರಗಳು ಮಕ್ಕಳಿಗೆ ಶಾಲೆಗಳಂತಿರದೆ ಜೀವನದ ಮೌಲ್ಯಗಳನ್ನು ತಿಳಿಸುವ ಸಂಸ್ಕಾರಯುತ ಶಿಬಿರಗಳಾಗಬೇಕು ಎಂದು ಹೇಳಿದರು. ಇದೇ ಸಂಧರ್ಭದಲ್ಲಿ ಶಿಬಿರದ ಮಕ್ಕಳೆಲ್ಲರೂ ಶ್ರೀ ರಾಮಾಯಣ ಕಥೆಯಲ್ಲಿ ಬರುವ ವಿವಿಧ ಸನ್ನಿವೇಶಗಳ ಶ್ರೀರಾಮನ ಚಿತ್ರಗಳನ್ನು ಬಿಡಿಸುವುದರ ಮೂಲಕ ಶ್ರೀರಾಮನಿಗೆ ಚಿತ್ರನಮನ ಸಲ್ಲಿಸಿದರು. ಇದಕ್ಕೂ ಮೊದಲು ಶಿಬಿರದ ಮಕ್ಕಳು ಶ್ರೀರಾಮನ ಭಾವಚಿತ್ರ ಹಿಡಿದು ಶ್ರೀರಾಮ ಭಜನೆಮಾಡುತ್ತಾ ಮೆರವಣಿಗೆ ಹೊರಟರು. ನಂತರ ಮಹಾಮಂಗಳಾರತಿ ಪ್ರಸಾದ ವಿನಿಯೋಗ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಬ್ಯಾಂಕ್ ಕಾಲೋನಿ ನಾಗರೀಕ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳಾದ ನಾಗರಾಜ್, ರವಿಕುಮಾರ್, ಕಾರ್ಯಕ್ರಮ ಆಯೋಜಕ ರವಿ ಕೆ.ಅಂಬೇಕರ್, ಶಿಬಿರದ ಪ್ರಕ್ಷಿಕರಾದ ಶ್ರೀಮತಿ ಅರುಣ, ಸೀಮಾ ಮಾತಾಜಿ, ಅಂಬುಜಮ್ಮ, ವಿಂಡ್ ವರ್ಲ್ಡ್ ವ್ಯವಸ್ಥಾಪಕ ಶರಣಪ್ಪ ಹಾಗೂ ನೂರಾರು ಶ್ರೀರಾಮ ಭಕ್ತರು ಪಾಲ್ಗೊಂಡಿದ್ದರು.

ಮುಂಜಾಗ್ರತಾ ಕ್ರಮಕ್ಕೆ ಬಿಜೆಪಿ ಮಂಡಲ ಮನವಿ

• ಉದಯವಾಹಿನಿ ಮುದ್ದೇಬಿಹಾಳ

ಪಟ್ಟಣದಲ್ಲಿ ಏ.7ರಂದು ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರ ಉಚ್ಚಾಟನೆ ಖಂಡಿಸಿ ನಡೆಯುತ್ತಿರುವ ಪ್ರತಿಭಟನೆಯಲ್ಲಿ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಅವರ ಭಾವಚಿತ್ರಗಳಿಗೆ ಅವಮಾನಿಸುವ ಕೃತ್ಯ ತಡೆಗಟ್ಟಲು ಮುಂಜಾಗ್ರತಾ ಕ್ರಮ ಕೈಕೊಳ್ಳುವಂತೆ ಆಗ್ರಹಿಸಿ ಬಿಜೆಪಿ ಮುದ್ದೇಬಿಹಾಳ ಮಂಡಲ ವತಿಯಿಂದ ಭಾನುವಾರ ಇಲ್ಲಿನ ಪೊಲೀಸ್ ಠಾಣೆಯ ಪಿಎಸೈ ಸಂಜಯ್ ತಿಪ್ಪರಡ್ಡಿ, ಸಿಪಿಐ ಮೆಹಮ್ಮೂದ್ ಫಸಿಯುದ್ದೀನ್ ಅವರಿಗೆ ಮನವಿ ಸಲ್ಲಿಸಲಾಗಿದೆ. ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣವರ್ ನೇತೃತ್ವದಲ್ಲಿ ಠಾಣೆಗೆ ತೆರಳಿದ ಮುಖಂಡರು, ಕಾರ್ಯಕರ್ತರು ಮನವಿ ಸಲ್ಲಿಸಲು ಕಾರಣಗಳನ್ನು ವಿವರಿಸಿದರು.

ಉಚ್ಚಾಟನೆ ವಿರೋಧಿಸುವ ನೆಪದಲ್ಲಿ ಪಕ್ಷದ ನಾಯಕರ ಭಾವಚಿತ್ರಗಳಿಗೆ ಅವಮಾನಿಸಿ ಶಾಂತಿ, ಸುವ್ಯವಸ್ಥೆ ಕದಡಲು ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಕೆಲವು ಕಾಂಗ್ರೇಸ್ ಮುಖಂಡರ ನೇತೃತ್ವದಲ್ಲಿ ವ್ಯವಸ್ಥಿತ ಷಡ್ಯಂತ್ರ ನಡೆದಿರುವುದು ಗಮನಕ್ಕೆ ಬಂದಿದೆ. ಏ.7ರ ಪ್ರತಿಭಟನಾ ರ್‍ಯಾಲಿಯಲ್ಲಿ ಬೇರೆ ಕಡೆಗಳಿಗೆ ಸಮಾಜಘಾತುಕ ಕಿಡಿಗೇಡಿ ಜನರನ್ನು ಕರೆಸಿ ಪಕ್ಷದ ನಾಯಕರ ಭಾವಚಿತ್ರ ಅವಮಾನಿಸಲು ಯೋಜಿಸಲಾಗಿದೆ. ಇಂಥ ಘಟನೆಗಳು ಈಗಾಗಲೇ ತಾಳಿಕೋಟೆ, ಮಿಣಜಗಿಯಲ್ಲಿ ನಡೆದಿವೆ.

ಉದಯವಾಹಿನಿ ಚಿತ್ರ

ಆಗ ಭಾವಚಿತ್ರಗಳಿಗೆ ಅವಮಾನಿಸಿ, ಚಪ್ಪಲಿ ಹಾರ ಹಾಕಿ, ಕಾಲಿನಿಂದ ತುಳಿದು ಅನಾಗರಿಕ ರೀತಿಯಲ್ಲಿ ಪ್ರತಿಭಟಿಸಲಾಇದೆ. ಸಂಬಂಧಪಟ್ಟ ಪೊಲೀಸ್ ಠಾಣೆ ವ್ಯಾಪ್ತಿಯ ಅಧಿಕಾರಿಗಳು ಅಲ್ಲಿ ಯಾವುದೇ ಕ್ರಮ ಕೈಕೊಂಡಿಲ್ಲ. ಇದನ್ನು ಪಕ್ಷ ಉಗ್ರವಾಗಿ ಖಂಡಿಸುತ್ತದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಪಕ್ಷದ ನಾಯಕರ ಭಾವಚಿತ್ರ ಬಳಸದಂತೆ ತಡೆಯಬೇಕು. ಪಕ್ಷದ ನಾಯಕರಿಗೆ ಅವಮಾನಿಸುತ್ತಿರುವ ಪ್ರಭುಗೌಡ ದೇಸಾಯಿ ಮೇಲೆ ಕಾನೂನು ಕ್ರಮ ಜರುಗಿಸಬೇಕು. ಒಂದು ವೇಳೆ ರ್‍ಯಾಲಿಯಲ್ಲಿ ನಮ್ಮ ನಾಯಕರ ಫೋಟೊ ಬಳಸಿ ಅವಮಾನಿಸಿದ್ದೇ ಆದಲ್ಲಿ ಪ್ರತಿರೋಧ ಒಡ್ಡಬೇಕಾಗುತ್ತದೆ. ಆಗ ಕಾನೂನು ಸುವ್ಯವಸ್ಥೆ ಹಾಳಾಗಿ ಶಾಂತಿಗೆ ಭಂಗವಾದಲ್ಲಿ ಪೊಲೀಸ್ ಇಲಾಖೆ, ಸಂಬಂಧಿಸಿದ ಪೊಲೀಸ್ ಅಧಿಕಾರಿಗಳು ಹೊಣೆ ಹೊರಬೇಕಾಗುತ್ತದೆ ಎಂದು ಎಚ್ಚರಿಸಲಾಗಿದೆ.

ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಸುರೇಶ ಬಿರಾದಾರ, ಜಿಲ್ಲಾ ಕಾರ್ಯದರ್ಶಿಗಳಾದ ಮಲ್ಲಿಕಾರ್ಜುನ ದೇವರಮನಿ, ಗೌರಮ್ಮ ಹುನಗುಂದ, ತಾಲ್ಲೂಕು ಕಾರ್ಯದರ್ಶಿ ಸಂಜು ಬಾಗೇವಾಡಿ, ಸೋಮನ ಗೌಡ ಪಾಟೀಲ ನಡಹಳ್ಳಿ, ಸೋಮನಗೌಡ ಬಿರಾದಾರ ಕವಡಿಮಟ್ಟಿ, ಮಹಿಳಾ ಘಟಕದ ಮುಖಂಡರು ಸೇರಿ ಹಲವರು ಇದ್ದರು.

ಇಮೇಲ್ ಮೂಲಕವೂ ಸಲ್ಲಿಕೆ

ಮನವಿಯ ಪ್ರತಿಗಳನ್ನು ಇಮೇಲ್ ಮೂಲಕ ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಬಸವನ ಬಾಗೇವಾಡಿ ಡಿವ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	07:30 ರಿಂದ 09:00
ಗುಳಿಕ ಕಾಲ	ಮಧ್ಯಾಹ್ನ	01:30 ರಿಂದ 03:00
ಯಮಗಂಡ ಕಾಲ	ಬೆಳಿಗ್ಗೆ	10:30 ರಿಂದ 12:00

ಮೇಷ ನಿಮ್ಮಲ್ಲಿ ಶಕ್ತಿಯ ಕೊರತೆಯಿರದೇ ಆತ್ಮವಿಶ್ವಾಸದ ಕೊರತೆಯಿರುವುದರಿಂದ ನಿಮ್ಮ ನಿಜವಾದ ಸಾಮರ್ಥ್ಯವನ್ನು ಅರಿತುಕೊಳ್ಳಿ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ.

ವೃಷಭ ಮನರಂಜನೆ ಮತ್ತು ಮೋಜಿನ ಒಂದು ದಿನ. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ ಆದರೆ ಇಂದು ನೀವು ಹಣದ ಮೌಲ್ಯವನ್ನು ಅರ್ಥಮಾಡಿಕೊಳ್ಳಬಹುದು.

ಮಿಥುನ ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು.

ಕರ್ಕಾಟಕ ಆರೋಗ್ಯ ವಿಷಯಗಳಲ್ಲಿ ನಿರ್ಲಕ್ಷ್ಯ ಮಾಡದಂತೆ ಎಚ್ಚರಿಕೆ ವಹಿಸಿ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು.

ಸಿಂಹ ನೀವು ಒಂದು ದೀರ್ಘ ಪ್ರಯಾಣಕ್ಕೆ ಹೋಗಲು ಯೋಜನೆ ಹಾಕುತ್ತಿದ್ದ ಹಾಗೆ ನಿಮ್ಮ ಆರೋಗ್ಯ ಮತ್ತು ಇಂಧನ ಸಂರಕ್ಷಣೆಯ ಹವ್ಯಾಸ ನಿಮಗೆ ಅಪಾರವಾದ ಉಪಯೋಗವುಂಟುಮಾಡುತ್ತದೆ.

ಕನ್ಯಾ ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಸಂಬಂಧಿಕರಿಂದ ಹಣದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ .

ತುಲಾ ನಿಮ್ಮ ಮನಸ್ಸು ಇತ್ತೀಚಿನ ಘಟನೆಗಳಿಂದ ತೊಂದರೆಗೊಳಗಾಗುತ್ತದೆ. ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗೆ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ.

ವೃಶ್ಚಿಕ ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ಪತ್ನಿಯೊಂದಿಗೆ ಜಗಳ ಮಾನಸಿಕ ಒತ್ತಡಕ್ಕೆ ಕಾರಣವಾಗಬಹುದು. ಅನವಶ್ಯಕ ಒತ್ತಡ ತೆಗೆದುಕೊಳ್ಳುವ ಅಗತ್ಯವಿಲ್ಲ.

ಧನಸ್ಸು ಉತ್ತಮ ಆರೋಗ್ಯ ಏನಾದರೂ ಅಸಾಮಾನ್ಯವಾಗಿದ್ದನ್ನು ಸಾಧಿಸಲು ಸಾಧ್ಯವಾಗಿಸುವ ಒಂದು ವಿಶೇಷ ದಿನ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು.

ಮಕರ ನಿಮ್ಮ ನೆರವು ಅಗತ್ಯವಿರುವ ಒಬ್ಬ ಸ್ನೇಹಿತರನ್ನು ಭೇಟಿ ಮಾಡಿ. ನಿಮ್ಮ ಪ್ರೇಮಿ ಅಥವಾ ಪ್ರೇಮಿಕ ಇಂದು ತುಂಬಾ ಕೋಪದಲ್ಲಿ ಕಾಣಬಹುದು, ಇದರಿಂದಾಗಿ ಅವರ ಮನೆಯ ಪರಿಸ್ಥಿತಿ ಇರುತ್ತದೆ.

ಕುಂಭ ತಂದೆಯು ನಿಮ್ಮನ್ನು ಆಸ್ತಿಯ ಉತ್ತರಾಧಿಕಾರಿತ್ವ ದಿಂದ ತಪ್ಪಿಸಬಹುದು. ಆದರೆ ಧೃತಿಗೆಡಬೇಡಿ. ಅಭ್ಯುದಯ ಮನಸ್ಸಿಗೆ ಮುದ ನೀಡಿದರೆ ಅಭಾವ ಅದನ್ನು ಬಲಗೊಳಿಸುತ್ತದೆಂದು ನೆನಪಿಡಿ.

ಮೀನ ನೀವು ಜನಪ್ರಿಯರಾಗಿರುತ್ತೀರಿ ಮತ್ತು ಸುಲಭವಾಗಿ ವಿರುದ್ಧಲಿಂಗದ ಸದಸ್ಯರ ಸೆಳೆಯುತ್ತೀರಿ. ನಿಮ್ಮ ಆಂತರಿಕ ಶಕ್ತಿ ದಿನದ ಕೆಲಸವನ್ನು ಉತ್ತಮಗೊಳಿಸುವಲ್ಲಿ ನಿಮ್ಮನ್ನು ಬೆಂಬಲಿಸುತ್ತದೆ.

ಮಾದಕ ವಸ್ತುಗಳ ಸಹವಾಸದಿಂದ ದೂರವಿರಿ

• ಉದಯವಾಹಿನಿ, ನವಲಗುಂದ

ಮಾದಕ ವಸ್ತುಗಳ ಸಹವಾಸದಿಂದ ದೂರವಿರಿ ಎಂದು ದಿವಾಣಿ ನ್ಯಾಯಾಧೀಶರಾದ ಮಂಜುನಾಥ ಪಾಣಿಘಂಟಿ ಹೇಳಿದರು.ಅವರು ಇಬ್ರಾಹಿಮಪುರ ಗ್ರಾಮದಲ್ಲಿ ನವಲಗುಂದ ಶ್ರೀ ಶಂಕರ ಮಹಾವಿದ್ಯಾಲಯದ ಎನ್ ಎಸ್ ಎಸ್ ಘಟಕದಡಿಯಲ್ಲಿ ಹಮ್ಮಿಕೊಂಡಿ ವಾರ್ಷಿಕ ವಿಶೇಷ ಶಿಬಿರ ಉದ್ದೇಶಿಸಿ ಮಾತನಾಡಿದರು.

ದಿವಾಣಿ ನ್ಯಾಯಾಧೀಶರಾದ ನವೀನ ಡಿಸೋಜಾ ಮಾತನಾಡಿಮಾದಕ ವಸ್ತುಗಳಿಂದಾಗುವ ಹಲವು ದುರಂತಗಳ ಬಗ್ಗೆ ಕಾನೂನಿನಲ್ಲಿರುವ ಶಿಕ್ಷೆಗಳ ಕುರಿತು ತಿಳಿಸಿಕೊಟ್ಟರು.ಎನ್ ಎಸ್ ಎಸ್ ಕಾರ್ಯಕ್ರಮಾಧಿಕಾರಿ ಎಂ.ಎನ್ ಹಾರೋಗೇರಿ, ಎಸ್ ಎನ್ ಡಂಬಳ ಆನಂದ ಮುರಾಳ ಸೇರಿದಂತೆ ಗ್ರಾಮಸ್ಥರು, ಮಹಾವಿದ್ಯಾಲಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸಿಡಿಲು ಬಡಿದು ತೆಂಗಿನ ಮರಕ್ಕೆ ಬೆಂಕಿ

• ಉದಯವಾಹಿನಿ, ಕೊಲ್ಹಾರ

ಪಟ್ಟಣದ ನಿವೃತ್ತ ಶಿಕ್ಷಕ ಎಸ್.ಎನ್.ಗಿಡ್ಡಪ್ಪಗೋಳ ಅವರ ತೋಟದಲ್ಲಿ ರಾತ್ರಿ ಸಿಡಿಲು ಬಡಿದು ತೆಂಗಿನ ಮರಕ್ಕೆ ಬೆಂಕಿ ಹತ್ತಿ ಉರಿದಿದೆ. ಯುಕೆಪಿ ಮತ್ತು ಕೊಲ್ಹಾರ ಊರ ಸುತ್ತ ರಭಸದಿಂದ ಬೀಸುತ್ತಿದ್ದ ಗಾಳಿಯ ವೇಗಕ್ಕೆ ಅಲ್ಪ ಪ್ರಮಾಣದ ಮಳೆ ಆಗಿದ್ದು ಗುಡುಗು ಮಿಂಚು ಕಾಣಿಸಿಕೊಂಡಾಗ ಅವರ ತೋಟದಲ್ಲಿನ ಟೆಂಗಿನ ಮರಕ್ಕೆ ಅಪ್ಪಳಿಸಿ ಬೆಂಕಿ ಹತ್ತಿ ಉರಿಯದಿದೆ. ಬೆಂಕಿಯ ಕೆನ್ನಾಲಿಗೆಗೆ ಮರ ಸುಟ್ಟು ಕರಕಲಾಯಿತು. ತಾಲ್ಲೂಕಿನ ರೋಣಿಹಾಳ ಕುಪ್ಪ ಕಡ್ಡಿ ಹಳ್ಳದ ಗೆಣ್ಣೂರ ಬಳೂತಿ ಮಟ್ಟಿಹಾಳ ಇನ್ನಿತರ ಭಾಗದಲ್ಲಿ ಗಾಳಿ ಗುಡುಗು ಮಿಂಚು ಕಾಣಿಸಿಕೊಂಡಿದ್ದು ಸ್ವಲ್ಪ ಪ್ರಮಾಣದಲ್ಲಿ ಮಳೆಯಾಗಿದೆ.

ಕಲಿತ ಶಾಲೆ, ಶಿಕ್ಷಕರ ಸ್ಮರಣೆ ಎಲ್ಲರ ಕರ್ತವ್ಯ: ನಿವೃತ್ತ ಪ್ರಾಂಶುಪಾಲೆ ಕಮಲಮ್ಮ

• ಉದಯವಾಹಿನಿ, ಅಜ್ಜಂಪುರ

'ಕಲಿತ ಶಾಲೆಯನ್ನು ಸ್ಮರಿಸಿ, ಶಿಕ್ಷಕರಿಗೆ ಗುರುವಂದನೆ ಸಲ್ಲಿಸುತ್ತಿರುವ ಹಿರಿಯ ವಿದ್ಯಾರ್ಥಿಗಳ ಕಾರ್ಯ ಶ್ಲಾಘನೀಯ' ಎಂದು ನಿವೃತ್ತ ಪ್ರಾಂಶುಪಾಲೆ ಕಮಲಮ್ಮ ಮೆಚ್ಚುಗೆ ವ್ಯಕ್ತಪಡಿಸಿದರು. ಪಟ್ಟಣದ ಶೆಟ್ಟಿಸಿದ್ಧಪ್ಪ ಸರ್ಕಾರಿ ಪದವಿ ಪೂರ್ವ ಕಲಾ ಮತ್ತು ವಾಣಿಜ್ಯ ಕಾಲೇಜಿನಲ್ಲಿ ರಜತ ಮಹೋತ್ಸವ ಅಂಗವಾಗಿ 2000ನೇ ಸಾಲಿನ ವಿದ್ಯಾರ್ಥಿಗಳಿಂದ ನಡೆದ ಗುರುವಂದನೆ ಮತ್ತು ಸ್ನೇಹ ಸಂಗಮ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಉಪನ್ಯಾಸಕ ಗಂಗಾಧರಪ್ಪ ಮಾತನಾಡಿ, 'ಕಳೆದ ವರ್ಷ 1999ನೇ ಸಾಲಿನ ಪಿಯು ವಿದ್ಯಾರ್ಥಿಗಳು ಗುರುವಂದನೆ, ಸ್ನೇಹ , 2000 ಕಾರ್ಯಕ್ರಮ ನಡೆಸುತ್ತಿರುವುದು ಸಂತಸ ತಂದಿದೆ. ಈ ಪರಂಪರೆ ಹೀಗೆ ಮುಂದುವರೆಯಲಿ' ಎಂದು ಆಶಿಸಿದರು.

ಹಿರಿಯ ವಿದ್ಯಾರ್ಥಿ ರೂಪ ಮಾತನಾಡಿ, ಶಿಕ್ಷಕರ ಮಾರ್ಗದರ್ಶನದ ಫಲವಾಗಿ ಇಂದು ಸ್ವಾವಲಂಬಿ ಬದುಕು ಕಟ್ಟಿಕೊಂಡು, ಸಾರ್ಥಕ ಜೀವನ ನಡೆಸುತ್ತಿದ್ದೇವೆ. ಈ ನಿಟ್ಟಿನಲ್ಲಿ ಕಲಿಸಿದ ಶಿಕ್ಷಕರನ್ನು ಗೌರವಿಸುವುದು ನಮ್ಮ ಕರ್ತವ್ಯ ಗುರುಗಳು ನೀಡಿದ ಜ್ಞಾನ, ಮಾರ್ಗದರ್ಶನ ಬದುಕಿಗೆ ದಾರಿದೀಪ ಸಮಾಜದಲ್ಲಿ ಆದರ್ಶ ಜೀವನ ಕಟ್ಟಿಕೊಳ್ಳಲು ಅನೇಕರಿಗೆ ಸಹಕಾರಿಯಾಗಿದೆ ಎಂದು ವಕೀಲ. ಹಿರಿಯ ವಿದ್ಯಾರ್ಥಿ ಕೃಷ್ಣಮೂರ್ತಿ ಅನಿಸಿಕೆ ಹಂಚಿಕೊಂಡರು.

ಉದಯವಾಹಿನಿ ಚಿತ್ರ

ಜೀವನದಲ್ಲಿ ಗುರಿಯಿಟ್ಟುಕೊಂಡು ಸಾಧಿಸಬೇಕು: ಶಾಸಕ ಪಾಟೀಲ

• ಉದಯವಾಹಿನಿ ಚನ್ನಮ್ಮನ ಕಿತ್ತೂರು

ಜೀವನದಲ್ಲಿ ಮನುಷ್ಯ ಗುರಿಯಿಟ್ಟುಕೊಂಡು ಸಾಧಿಸಬೇಕು. ಮುಂದೊಂದು ದಿನ ಆ ಗುರಿ ಯಶಿಸ್ಸಿನ ಹಾದಿ ತೋರಿಸುತ್ತದೆಯೆಂದು ಶಾಸಕ ಬಾಬಾಸಾಹೇಬ ಪಾಟೀಲ ಹೇಳಿದರು.

ತಿಗಡೊಳ್ಳಿ ರಸ್ತೆ ಹೊಂದಿಕೊಂಡಿರುವ ಗ್ರಾಮೀಣ ಯುವಕರ ಸೇವಾ ತರಬೇತಿ ಕೇಂದ್ರದಲ್ಲಿ ಕಾನ್ಸ್ಟೇಬಲ್ ಮತ್ತು ಅಗ್ನಿವೀರರಾಗಿ ಆಯ್ಕೆಗೊಂಡ ಅಭ್ಯರ್ಥಿಗಳಿಗಾಗಿ ಸನ್ಮಾನ ಕಾರ್ಯಕ್ರಮ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಿಜಯಪುರದ ಎಸ್‌ಪಿ ಕರಿಯರ್ ಅಕಾಡಮಿ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅಧ್ಯಕ್ಷಸ್ಥಾನವಹಿಸಿಕೊಂಡು

ಉದಯವಾಹಿನಿ ಚಿತ್ರ

ಮಾತನಾಡಿದರು. ತಂದೆ-ತಾಯಿ ಕನಸನ್ನು ಈಡೇರಿಸಬೇಕಾದರೆ ನಾವು ಇಟ್ಟುಕೊಂಡ ಗುರಿ ಮುಟ್ಟಲೇಬೇಕು. ವಿದ್ಯಾರ್ಥಿಗಳು ಓದಿ ಮುಂದೆ ಬರಬೇಕು.

ಕಾನ್ಸ್‌ಟೇಬಲ್ ಹುದ್ದೆಗಿಂತ ಇನ್ನೂ ದೊಡ್ಡ ಹುದ್ದೆ ಪಡೆದುಕೊಳ್ಳಿ, ನೀವು ಅಗ್ನಿವೀರರಾಗಿ ದೇಶ ಸೇವೆಗೆ ಭರ್ತಿಯಾಗಿದ್ದು ನಿಮ್ಮ ಪ್ರಯತ್ನ, ಗುರು ಮತ್ತು ಪೋಷಕರ, ದೇವರ ಕೃಪೆ ಎಂದರು.

ಬೆಳಗಾವಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಾಮನಗೌಡ ಕನ್ನೋಳ್ಳಿ ಮಾತನಾಡಿ ಸಮಾಜದಲ್ಲಿ ಮುಂದೆ ಬರಬೇಕಾದರೆ ಶಿಕ್ಷಣ ಅವಶ್ಯ. ಯಾವುದೇ ಒಂದು ಗುರಿಯಿಟ್ಟುಕೊಂಡು ಕೆಲಸ ಮಾಡಬೇಕಾದರೆ ಅದರ ಹಿಂದೆ ಶ್ರದ್ಧೆ, ತಪಸ್ಸು, ಜೊತೆಗೆ ಗುರು ಇರಬೇಕು ಅಂದಾಗ ಮಾತ್ರ ಗುರಿ ಮುಟ್ಟಲು ಸಾಧ್ಯವೆಂದರು.

ಬೆಂಗಳೂರಿನ ಸಮಾಜ ಕಲ್ಯಾಣ ಇಲಾಖೆ ಡಾ. ಅಂಜುಮನ್ ಹಪೀಜ್ ತರಬೇತಿಗೆ ಆಯ್ಕೆಯಾಗಿರುವ ವಿದ್ಯಾರ್ಥಿಗಳ ಕುರಿತು ಮಾತನಾಡಿದರು.

ಡಾ. ಬಾಬು ಜಗಜೀವನರಾಂ ಜನ್ಮದಿನಾಚರಣೆ

• ಉದಯವಾಹಿನಿ ನವಲಗುಂದ

ಹಸಿರು ಕ್ರಾಂತಿಯ ಹರಿಕಾರ ಬಾಬು ಜಗಜೀವನರಾಂ ಅವರ ಕೊಡುಗೆಗಳನ್ನು ಇಂದಿನ ಯುವ ಪೀಳಿಗೆಗೆ ತಿಳಿಸುವ ಕಾರ್ಯವಾಗಬೇಕು' ಎಂದು ನವಲಗುಂದ ಗವಿಮಠದ ಬಸವಲಿಂಗ ಸ್ವಾಮೀಜಿ ನುಡಿದರು.

ಅವರು ಗಾಂಧಿ ಮಾರುಕಟ್ಟೆಯಲ್ಲಿ ತಾಲ್ಲೂಕಾ ಆಡಳಿತ, ಸಮಾಜಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಿದ್ದ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನರಾಂ ಅವರ 118ನೇ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ

ಉದಯವಾಹಿನಿ ಚಿತ್ರ

ಮಾತನಾಡಿದ ಅವರು ಬಾಬು ಜಗಜೀವನರಾಂ ಅವರು ದೇಶ ಕಂಡ ಮಹಾನ್ ಸ್ವಾತಂತ್ರ್ಯ ಹೋರಾಟಗಾರರಷ್ಟೇ ಅಲ್ಲದೇ ಅತ್ಯುತ್ತಮ ಸಂಸದೀಯ ಪಟುವಾಗಿದ್ದ ಅವರು, ಶೋಷಿತ ಸಮುದಾಯಗಳ ಪರಿವಾಗಿ ಧ್ವನಿ ಎತ್ತಿದವರು ಎಂದು ಹೇಳಿದರು.

ಈ ರಾಷ್ಟ್ರ ಕಂಡ ಧೀಮಂತ ನಾಯಕರು ಮತ್ತು ರಾಷ್ಟ್ರ ಭಕ್ತ ರಾಜಕಾರಣಿ, ರೈತನಾಯಕ

ಡಾ. ಬಾಬು ಜಗಜೀವನ ರಾಂ ಅವರ 118 ನೇ ಜಯಂತಿ

• ಉದಯವಾಹಿನಿ ಧಾರವಾಡ

ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರು ಈ ರಾಷ್ಟ್ರ ಕಂಡ ಧೀಮಂತ ನಾಯಕರು ಮತ್ತು ರಾಷ್ಟ್ರ ಭಕ್ತ ರಾಜಕಾರಣಿ, ರೈತನಾಯಕರಾಗಿದ್ದರು, ಯುದ್ಧ ,ಆಹಾರ ಉತ್ಪಾದನೆಯಲ್ಲಿ ಅವರು ಕೈಗೊಂಡ ದಿಟ್ಟ ನಿರ್ಧಾರಗಳು ಬಲಿಷ್ಠ ಭಾರತವಾಗಲು ಸಾಧ್ಯವಾಯಿತು ಎಂದು ಶಾಸಕ ಎನ್.ಎಚ್. ಕೋನರಡ್ಡಿ ಅವರು ಹೇಳಿದರು.

ಭಾರತದ ರಾಜಕಾರಣದ ಅಜಾತಶತ್ರು

ಅವರು ಕರ್ನಾಟಕ ವಿದ್ಯಾವರ್ಧಕ ಸಂಘದ ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಾಗೂ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸಹಯೋಗದಲ್ಲಿ ಜರುಗಿದ ಹಸಿರು ಕ್ರಾಂತಿಯ ಹರಿಕಾರ, ಭಾರತದ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ 118ನೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮಾತನಾಡಿದರು.

ಮುಖ್ಯ ಅತಿಥಿಗಳಾಗಿದ್ದ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಬೆಳೆಯುವ

ಉದಯವಾಹಿನಿ ಚಿತ್ರ

ಸಿರಿ ಮೊಳಕೆಯಲ್ಲಿ ನೋಡು ಎನ್ನುವಂತೆ ಡಾ. ಬಾಬು ಜಗಜೀವನ ರಾಂ ಅವರ ಬಾಲ್ಯದ ಜೀವನ ಗಮನಿಸಿದಾಗ ಅವರ ಸಮರ್ಥತೆ, ಸಮಾನತೆ ಚಿಂತನೆ, ಸಾತ್ವಿಕ ಪ್ರತಿಭಟನೆ ಕಾಣುತ್ತದೆ.

ಬಾಲ್ಯದಿಂದಲೇ ಅವರಲ್ಲಿ ನಾಯಕತ್ವದ ಗುಣಗಳು ಬೆಳೆದಿದ್ದವು. ಹೀಗಾಗಿ ಅವರು ಭಾರತದ ರಾಜಕಾರಣದಲ್ಲಿ ಅಜಾತಶತ್ರು ಆಗಿದ್ದರು ಎಂದರು.

ನರಗುಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಪ್ರೊ. ಪವಿತ್ರಾ ಅವರು ಡಾ. ಬಾಬು ಜಗಜೀವನ ರಾಂ ಅವರ ಜೀವನ ಚರಿತ್ರೆ ಕುರಿತು ವಿಶೇಷ ಉಪನ್ಯಾಸ ನೀಡಿದರು.

> ಮಹಾತ್ಮರ, ರಾಷ್ಟ್ರೀಯ ನಾಯಕರ ಜಯಂತಿ ದಿನದಂದು ನಾವು ಅವರಿಂದ ಏನು ಕಲಿಯುತ್ತೇವೆ, ಏನು ತಿಳಿಯುತ್ತೇವೆ, ಅದನ್ನು ಹೇಗೆ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುತ್ತೇವೆ ಎಂಬುದು ಅತಿ ಮುಖ್ಯವಾಗಿದೆ. ಡಾ. ಬಾಬು ಜಗಜೀವನ ರಾಂ ಅವರು ಸರಳ, ಸಜ್ಜನರಾಗಿ, ಸಮಾನತೆಗಾಗಿ ಹೋರಾಟ ಮಾಡಿದವರು
> -ಡಾ. ಗೋಪಾಲ್ ಎಂ. ಬ್ಯಾಕೋಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

> ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಕಲಬುರ್ಗಿ ಜಿಲ್ಲೆ ಜೇವರ್ಗಿ ತಾಲ್ಲೂಕಿನ ಚಿಗರಹಳ್ಳಿಯ ಜಗದ್ಗುರು ಮರುಳಶಂಕರ ದೇವರಗುರು ಪೀಠದ ಸಿದ್ದ ಬಸವ ಕಬೀರ ಸ್ವಾಮಿಗಳು ಮಾತನಾಡಿ, ಸಮಾಜದಲ್ಲಿ ಮಡಿವಂತಿಕೆ ಒಡೆದು ಹಾಕಿದವರು ದಾರ್ಶನಿಕರಾಗುತ್ತಾರೆ. ಜಾತಿ ವ್ಯವಸ್ಥೆ ನಾಶವಾಗಬೇಕು. ಸಮಾನತೆ, ಸಹಬಾಳ್ವೆಗೆ ಶಿಕ್ಷಣ, ಸಂವಿಧಾನ ಅವಕಾಶ ನೀಡಿವೆ. ಮೂಢನಂಬಿಕೆಗಳನ್ನು ನಂಬದೆ, ವಾಸ್ತವತೆ ಅರಿತು ಬದುಕಬೇಕು
> -ಸಿದ್ದ ಬಸವ ಕಬೀರ ಸ್ವಾಮಿ

ಎಸ್.ಎಸ್.ಎಲ್.ಸಿ., ಪಿಯುಸಿ, ಪದವಿ ಹಾಗೂ ಸ್ನಾತಕೊತ್ತರ ಪರೀಕ್ಷೆಗಳಲ್ಲಿ ಹೆಚ್ಚು ಅಂಕಗಳಿಸಿ, ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಿ, ಗೌರವಿಸಲಾಯಿತು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪಿ. ಶುಭ ಅವರು ಸ್ವಾಗತಿಸಿದರು.

ಪ್ರಗತಿ ಪರಿಶೀಲನಾ ಸಭೆ

• ಉದಯವಾಹಿನಿ ಅಥಣಿ

ಜಿಪಂ ಸಿಇಒ ರಾಹುಲ್ ಶಿಂಧೆ ರವರು ಅಥಣಿ ತಾಲ್ಲೂಕು ಪಂಚಾಯತ ಸಭಾ ಭವನದಲ್ಲಿ ಎಲ್ಲಾ ತಾಲ್ಲೂಕ ಮಟ್ಟದ ಅಧಿಕಾರಿ ಹಾಗೂ ಎಲ್ಲಾ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಪಂ ಸಿಇಒ ರಾಹುಲ್ ಶಿಂಧೆ ರವರು ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮ ವಹಿಸುವುದು ಹಾಗೂ ಆರ್ ಓ ಪ್ಲಾಂಟ್‌ಗಳನ್ನು ಸುಸ್ಥಿತಿಯಲ್ಲಿ ಇರುವಂತೆ ನೋಡಿಕೊಳ್ಳಬೇಕು ಎಂದು ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದರು.

ನರೇಗಾ ಯೋಜನೆಗೆ ಸಂಬಂಧಿಸಿದಂತೆ ಪ್ರತಿಯೊಂದು ಗ್ರಾಮ ಪಂಚಾಯತಿಗಳಲ್ಲಿ ಸಮುದಾಯ ಕಾಮಗಾರಿ ಪ್ರಾರಂಭಿಸುವುದು ಮತ್ತು ಜನರು ಉದ್ಯೋಗ ಅಂತ ಬೇರೆ ಕಡೆಗೆ ವಲಸೆ ಹೋಗಬಾರದು ಅದಕ್ಕಾಗಿ ಸ್ವ-ಗ್ರಾಮದಲ್ಲಿ ಉದ್ಯೋಗ ನೀಡಬೇಕು. ಅದರ ಜೊತೆಗೆ ಎಪ್ರಿಲ್ 15ರ ಒಳಗಾಗಿ ಪ್ರತಿಯೊಬ್ಬ ವಿಕಲಚೇತನರಿಗೆ ಜಾಬ್ ಕಾರ್ಡ್‌ಗಳನ್ನು ಕಡ್ಡಾಯವಾಗಿ ನೀಡಬೇಕು ಎಂದು ತಿಳಿಸಿದರು. ಅಥಣಿ ಗ್ರಾಮೀಣ ಗ್ರಾಮ ಪಂಚಾಯತಿ ವ್ಯಾಪ್ತಿಯ ವಿಕಲಚೇತನರಿಗೆ ಜಾಬ್ ಕಾರ್ಡ್‌ಗಳನ್ನು ವಿತರಿಸಿದರು.ತದನಂತರ ಸರ್ಕಾರಿ ಆಸ್ಪತ್ರೆ ಭೇಟಿ ನೀಡಿ ಅಲ್ಲಿನ ಮೇಡಿಸಿನ್‌ಗಳನ್ನು ಪರಿಶೀಲನೆ ಮಾಡಿದರು.

ಮಾರುತೇಶ್ವರ ಜಾತ್ರಾ ಮಹೋತ್ಸವ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಅಣವಾರ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಕೂಡ ಶ್ರೀಮಾರುತೇಶ್ವರ ಮಂದಿರದ ಜಾತ್ರಾ ಮಹೋತ್ಸವ ಅತ್ಯಂತ ವಿಜೃಂಭಣೆಯಿಂದ ಏ.12ರಂದು ಸಾಯಂಕಾಲ 6: 30ಕ್ಕೆ ರಥೋತ್ಸವ ಜರುಗಲಿದೆ ಎಂದು ದೇವಾಸ್ಥಾನ ಸಮಿತಿಯ ಮುಖಂಡ ಬಾಬುಗೌಡ ಪಾಟೀಲ ತಿಳಿಸಿದ್ದಾರೆ.

ಶ್ರೀಮಾರುತೇಶ್ವರ ಮಂದಿರದ ಜಾತ್ರಾಮಹೋತ್ಸವ ಅಂಗವಾಗಿ ವೀರಭದ್ರೇಶ್ವರ ಪಲ್ಲಕ್ಕಿ ಉತ್ಸವ ಏ.08ರಿಂದ 12,ರವರೆಗೆ ಜರುಗಲಿದೆ,ಸಂಜೆ 8:30,ಗಂಟೆಗೆ ಗ್ರಾಮದ ಬೀದಿಗಳಲ್ಲಿ ಪಲ್ಲಕ

ದ್ವಾರಕಾದಲ್ಲಿ 140 ಕಿ.ಮೀ ಪಾದಯಾತ್ರೆ ಮುಕ್ತಾಯಗೊಳಿಸಿದ ಮುಕೇಶ್ ಅಂಬಾನಿ ಪುತ್ರ

ದ್ವಾರಕ: ಇದೇ ಏಪ್ರಿಲ್ 10ರಂದು ರಿಲಯನ್ಸ್ ಇಂಡಸ್ಟ್ರೀಸ್ ಸಂಸ್ಥೆಯ ಮುಖ್ಯಸ್ಥ ಮುಕೇಶ್ ಅಂಬಾನಿಯವರ ಕಿರಿಯ ಪುತ್ರ ಅನಂತ್ ಅಂಬಾನಿಯವರ 30ನೇ ಜನ್ಮದಿನ. ಈ ಸಂದರ್ಭದಲ್ಲಿ ಅವರು ಗುಜರಾತ್ ರಾಜ್ಯದ ಜಾಮ್ ನಗರ್‌ದಿಂದ ದೇಶದ ಅತ್ಯಂತ ಪವಿತ್ರ ಪುರಾತನ ನಗರವಾದ ದ್ವಾರಕದವರೆಗೆ 140 ಕಿಲೋ ಮೀಟರ್ ದೂರ ಪಾದಯಾತ್ರೆ ಕೈಗೊಂಡಿದ್ದರು.

ಮಾರ್ಚ್ 29ರಂದು ಜಾಮ್ ನಗರದಿಂದ ಪಾದಯಾತ್ರೆ ಆರಂಭಿಸಿದ್ದ ಅನಂತ್ ಅಂಬಾನಿ ಪ್ರತಿದಿನ ರಾತ್ರಿ ಹೊತ್ತು 7ರಿಂದ 8 ಗಂಟೆ ನಡೆದುಕೊಂಡು 20 ಕಿಲೋ ಮೀಟರ್ ದೂರ ಕ್ರಮಿಸಿ, ಇಂದು ರಾಮನವಮಿಯ ಪುಣ್ಯದಿನ ಬೆಳಗಿನ ಜಾವ ದ್ವಾರಕಾದಲ್ಲಿರುವ ದ್ವಾರಕಾಧೀಶ ದೇವಸ್ಥಾನಕ್ಕೆ ಆಗಮಿಸಿ 140 ಕಿಲೋ ಮೀಟರ್ ನಡಿಗೆಯನ್ನು ಮುಕ್ತಾಯಗೊಳಿಸಿದರು. ಪಾದಯಾತ್ರೆಯುದ್ದಕ್ಕೂ ಹನುಮಾನ ಚಾಲೀಸ, ಸುಂದರಕಾಂಡ, ದೇವಿ ಸ್ತೋತ್ರಗಳನ್ನು ಪಠಿಸುತ್ತಾ ಸಾಗಿ ಬಂದಿದ್ದರು. ಭಾರತದ ಸತಾನನ ಶೈಲಿಯಲ್ಲಿ ವೇಷಭೂಷಣಗಳನ್ನು ಧರಿಸಿ ತಮ್ಮ ಹಿತೈಷಿಗಳೊಂದಿಗೆ ಪಾದಯಾತ್ರೆ ಸಾಗಿ ಬಂದದ್ದು ವಿಶೇಷವಾಗಿತ್ತು. ಇಲ್ಲಿಗಮನಿಸಬೇಕಾದ ಅಂಶವೆಂದರೆ ಅನಂತ್ ಅಂಬಾನಿಯವರು ಅಪರೂಪದ ಅಸ್ತಮಾ, ಬೊಜ್ಜಿನ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಅಪರೂಪದ ಹಾರ್ಮೋನುಗಳ ಅಸ್ವಸ್ಥತೆ, ಶ್ವಾಸಕೋಶದ ಕಾಯಿಲೆಯಂತಹ ಜೀವಿತಾವಧಿಯ ಕಾಯಿಲೆಯಿಂದ ಬಳಲುತ್ತಿರುವ ಅನಂತ್ ಪಾದಯಾತ್ರೆ ಸಾಗಿ ಬಂದದ್ದು ಹಲವರ ಗಮನ ಸೆಳೆದಿದೆ.

ಭಾರತದ ಶೈಲಿಯಲ್ಲಿ ವೇಷಭೂಷಣ

ಅನಂತ್ ಅಂಬಾನಿ ಈ ಪವಿತ್ರ ಹಾದಿಯಲ್ಲಿ ಅನೇಕರು ಅವರಿಗೆ ಸಾಥ್ ನೀಡಿದ್ದರು. ಇಂದು ದ್ವಾರಕಾಧೀಶ್ವರ ದೇವಸ್ಥಾನಕ್ಕೆ ಬರುತ್ತಿದ್ದಂತೆ ಅವರ ಪತ್ನಿ ರಾಧಿಕಾ ಮರ್ಚೆಂಟ್ ಮತ್ತು ತಾಯಿ ನೀತಾ ಅಂಬಾನಿ ಜೊತೆಗೂಡಿಕೊಂಡರು. ಅನಂತ್ ಅಂಬಾನಿ, ರಾಧಿಕಾ ಮದುವೆಯಲ್ಲಿ ಭಾಗವಹಿಸಿ, ನವ ಜೋಡಿಗೆ ಆಶೀರ್ವದಿಸಿದ ಪ್ರಧಾನಿ ಮೋದಿ ಈ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ರಾಧಿಕಾ ಮರ್ಚೆಂಟ್, ನಮ್ಮ ಮದುವೆಯ ನಂತರ ಪಾದಯಾತ್ರೆ ಕೈಗೊಳ್ಳಬೇಕೆಂದು ಅನಂತ್ ಬಯಸಿದ್ದರು. ಅವರ ಜನ್ಮದಿನವನ್ನು ದ್ವಾರಕಾದಲ್ಲಿ ಆಚರಿಸುತ್ತಿರುವುದು ನಮಗೆ ಖುಷಿ ತರುತ್ತಿದೆ. ಅವರ ಪಾದಯಾತ್ರೆ ಯಶಸ್ವಿಯಾಗಲು ಹರಸಿದ ಮತ್ತು ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು ಎಂದರು.

ಇದು ನನ್ನ ಆಧ್ಯಾತ್ಮಿಕ ಪ್ರಯಾಣ, ದೇವರ ಹೆಸರು ಹೇಳಿಕೊಂಡು ನನ್ನ ಪಾದಯಾತ್ರೆ ಕೈಗೊಂಡು ದೇವರ ಹೆಸರಿನಲ್ಲಿಯೇ ಮುಕ್ತಾಯಗೊಳಿಸುತ್ತಿದ್ದೇನೆ.

ನನ್ನ ಈ ಪಯಣದಲ್ಲಿ ನನ್ನ ಜೊತೆಯಾದ ಪತ್ನಿ, ತಾಯಿ ಮತ್ತು ಎಲ್ಲ ಹಿತೈಷಿಗಳಿಗೂ ಧನ್ಯವಾದಗಳು ಎಂದು ಅನಂತ್ ಅಂಬಾನಿ ಹೇಳಿದರು. ಈ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ನೀತಾ ಅಂಬಾನಿ, ತಾಯಿಯಾಗಿ ನನ್ನ ಕಿರಿಯ ಪುತ್ರ ಅನಂತ್ ಅಂಬಾನಿ ಕೈಗೊಂಡ ಪಾದಯಾತ್ರೆ ಬಗ್ಗೆ ನನಗೆ ಹೆಮ್ಮೆಯೆನಿಸುತ್ತದೆ. ಎಂದು ಹೇಳಿದರು.

ಸಂಸತ್ತಿನ ಉಭಯ ಸದನಗಳಲ್ಲಿ ಅಂಗೀಕಾರಗೊಂಡ ಚರ್ಚಾಸ್ಪದ ವಕ್ಫ್ ತಿದ್ದುಪಡಿ ಮಸೂದೆ

ವಕ್ಫ್ ತಿದ್ದುಪಡಿ ಮಸೂದೆ-2025ಕ್ಕೆ ಅಂಕಿತ ಹಾಕಿದ ರಾಷ್ಟ್ರಪತಿ ದ್ರೌಪದಿ ಮುರ್ಮು

ನವದೆಹಲಿ: ಸಂಸತ್ತಿನ ಉಭಯ ಸದನಗಳಲ್ಲಿ ಅಂಗೀಕಾರಗೊಂಡ ಚರ್ಚಾಸ್ಪದ ವಕ್ಫ್ ತಿದ್ದುಪಡಿ ಮಸೂದೆ-2025ಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ನಿನ್ನೆ ಅಂಕಿತ ಹಾಕಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮುಸಲಾನ್ ವಕ್ಫ್(ರದ್ದತಿ) ಮಸೂದೆ, 2025 ಕ್ಕೆ ಸಹ ತಮ ಒಪ್ಪಿಗೆ ನೀಡಿದ್ದಾರೆ. ಈ ಮೂಲಕ ಸಂಸತ್ತಿನ ಈ ಕಾಯ್ದೆಗೆ ಏಪ್ರಿಲ್ 5, 2025 ರಂದು ರಾಷ್ಟ್ರಪತಿಗಳ ಒಪ್ಪಿಗೆ ಸಿಕ್ಕಿದೆ.

ವಕ್ಫ್ (ತಿದ್ದುಪಡಿ) ಕಾಯ್ದೆಯು ಏಪ್ರಿಲ್ 5, 2025ರಂದು ರಾಷ್ಟ್ರಪತಿಗಳ ಒಪ್ಪಿಗೆ ಪಡೆದಿದೆ. ಸಾಮಾನ್ಯ ಮಾಹಿತಿಗಾಗಿ ಇಲ್ಲಿ ಪ್ರಕಟಿಸಲಾಗಿದೆ. ವಕ್ಫ್ (ತಿದ್ದುಪಡಿ) ಕಾಯಿದೆ, 2025 ಎಂದು ಕೇಂದ್ರ ಸರ್ಕಾರ ಅಧಿಸೂಚನೆಯಲ್ಲಿ ತಿಳಿಸಿದೆ. ಜೊತೆಗೆ, ರಾಷ್ಟ್ರಪತಿ ಮುರ್ಮು ಅವರು ಮುಸಲಾನ್ ವಕ್ಫ್ (ಪುನರಾವರ್ತಿತ) ಮಸೂದೆ-2025ಕ್ಕೂ ಕೂಡ ತಮ ಒಪ್ಪಿಗೆ ನೀಡಿದ್ದಾರೆ.

ಮಸೂದೆಯು ಲೋಕಸಭೆಯಲ್ಲಿ ಅಂಗೀಕಾರವಾದ ಬಳಿಕ, ರಾಜ್ಯಸಭೆಯಲ್ಲಿ 13 ಗಂಟೆಗಳಿಗೂ ಹೆಚ್ಚು ಕಾಲ ನಡೆದ ಚರ್ಚೆಯ ಬಳಿಕ ಶುಕ್ರವಾರ ಮುಂಜಾನೆ ಈ ಶಾಸನವು ಅನುಮೋದನೆಗೊಂಡಿತ್ತು. ಬಳಿಕ ಸಂಸತ್ತು ಮಸೂದೆಯನ್ನು ಅಂಗೀಕರಿಸಿತ್ತು. ಚರ್ಚೆಯಲ್ಲಿ ವಿರೋಧ ಪಕ್ಷಗಳಿಂದ ತೀವ್ರ ಆಕ್ಷೇಪ ವ್ಯಕ್ತವಾಗಿತ್ತು.

ಮಸೂದೆಯನ್ನು ಮುಸ್ಲಿಂ ವಿರೋಧಿ ಮತ್ತು ಅಸಂವಿಧಾನಿಕ ಎಂದು ಟೀಕಿಸಿದ್ದರು.

ಆದರೆ ಮಸೂದೆಯು ಐತಿಹಾಸಿಕ ಸುಧಾರಣೆ ಹಾಗೂ ಅಲ್ಪಸಂಖ್ಯಾತ ಸಮುದಾಯಕ್ಕೆ ನೆರವಾಗಲಿದೆ ಎಂದು ಕೇಂದ್ರ ಸರ್ಕಾರ ಸಮರ್ಥಿಸಿಕೊಂಡಿತ್ತು.

ಮಸೂದೆಗೆ ರಾಜ್ಯಸಭೆಯ 128 ಸದಸ್ಯರು ಪರ ಹಾಗೂ 95 ಸದಸ್ಯರು ವಿರೋಧಿಸಿ ಮತ ಚಲಾಯಿಸಿದ್ದರು. ಅದಕ್ಕೂ ಮುನ್ನ ಗುರುವಾರ ಮುಂಜಾನೆ ಲೋಕಸಭೆಯಲ್ಲಿ 288 ಸದಸ್ಯರು ಮಸೂದೆಗೆ ಬೆಂಬಲಿಸಿದರೆ, 232 ಸದಸ್ಯರು ವಿರುದ್ಧವಾಗಿ ಮತ ಚಲಾಯಿಸಿದ್ದರು.

ರಾಷ್ಟ್ರಪತಿಗಳು ಒಪ್ಪಿಗೆ

ರಾಜ್ಯಸಭೆಯಲ್ಲಿ ತಿದ್ದುಪಡಿ ಮಸೂದೆ ಪರವಾಗಿ 128 ಸದಸ್ಯರು ಮತ್ತು 95 ಸದಸ್ಯರು ವಿರುದ್ಧವಾಗಿ ಮತ ಚಲಾಯಿಸಿದರು. ಅದಕ್ಕೂ ಮುನ್ನ ಗುರುವಾರ ಮುಂಜಾನೆ ಲೋಕಸಭೆಯಲ್ಲಿ ಇದನ್ನು ಅಂಗೀಕರಿಸಲಾಯಿತು, 288 ಸದಸ್ಯರು ಪರವಾಗಿ ಮತ್ತು 232 ಸದಸ್ಯರು ವಿರುದ್ಧವಾಗಿ ಮತ ಚಲಾಯಿಸಿದ್ದರು. ವಕ್ಫ್ ತಿದ್ದುಪಡಿ ಮಸೂದೆ ಅಂಗೀಕರಿಸುವುದರ ಜೊತೆಗೆ ಸಂಸತ್ತು ಮುಸಲಾನ್ ವಕ್ಫ್ (ರದ್ದತಿ) ಮಸೂದೆಯನ್ನು ಸಹ ಅನುಮೋದಿಸಿತು, ರಾಷ್ಟ್ರಪತಿಗಳು ತಮ್ಮ ಒಪ್ಪಿಗೆಯನ್ನು ನೀಡಿದ ನಂತರ, ಮುಸಲಾನ್ ವಕ್ಫ್ ಕಾಯ್ದೆ, 1923ನ್ನು ರದ್ದುಗೊಳಿಸಲಾಗಿದೆ.

ವಕ್ಫ್ ತಿದ್ದುಪಡಿ ಮಸೂದೆಗೆ ವಿರೋಧ ಪಕ್ಷಗಳಿಂದ ಮತ್ತು ಮುಸ್ಲಿಂ ಸಂಘಟನೆಗಳಿಂದ ತೀವ್ರ ಆಕ್ಷೇಪಣೆಗಳು ವ್ಯಕ್ತವಾಗಿದೆ. ಅವರು ಮಸೂದೆಯನ್ನು ಮುಸ್ಲಿಂ ವಿರೋಧಿ ಮತ್ತು ಅಸಂವಿಧಾನಿಕ ಎಂದು ಕರೆದಿದ್ದಾರೆ. ಸರ್ಕಾರವು ಇದನ್ನು ಐತಿಹಾಸಿಕ ಸುಧಾರಣೆ ಅಲ್ಪಸಂಖ್ಯಾತ ಸಮುದಾಯಕ್ಕೆ ಪ್ರಯೋಜನವನ್ನು ನೀಡುತ್ತದೆ ಎಂದು ಹೇಳುತ್ತಿದೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಈ ಕ್ರಮವನ್ನು ಒಂದು ಮಹತ್ವದ ಕ್ಷಣ ಎಂದು ಶ್ಲಾಘಿಸಿದ್ದು, ವಕ್ಫ್ ವ್ಯವಸ್ಥೆಯು ದೀರ್ಘಕಾಲದಿಂದ ಪಾರದರ್ಶಕತೆ ಮತ್ತು ಉತ್ತರದಾಯಿತ್ವದ ಕೊರತೆಯಿಂದ ಬಳಲುತ್ತಿದೆ ಎಂದು ಅವರು ಹೇಳಿದ್ದಾರೆ. ಈ ಶಾಸನವು ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ ಮತ್ತು ಜನರ ಹಕ್ಕುಗಳನ್ನು ರಕ್ಷಿಸುತ್ತದೆ ಎಂದು ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

13 ಗಂಟೆಗಳಿಗೂ ಹೆಚ್ಚು ಕಾಲ ನಡೆದ ಚರ್ಚೆಯ ನಂತರ ರಾಜ್ಯಸಭೆಯು ವಿವಾದಾತಕ ಶಾಸನಕ್ಕೆ ಅನುಮೋದನೆ ನೀಡಿದ ನಂತರ ಕಳೆದ ಶುಕ್ರವಾರ ಮುಂಜಾನೆ ಸಂಸತ್ತು ಮಸೂದೆಯನ್ನು ಅಂಗೀಕರಿಸಿತ್ತು.

ಕಾಂಗ್ರೇಸ್ ಸಂಸದ ಮೊಹಮದ್ ಜಾವೇದ್ ಮತ್ತು ಆಲ್ ಇಂಡಿಯಾ ಮಜ್ಲಿಸ್-ಎ-ಇತ್ತೆಹಾದುಲ್ ಮುಸ್ಲಿಮೀನ್ (ಎಐಎಂಐಎಂ) ಅಧ್ಯಕ್ಷ ಅಸಾದುದ್ದೀನ್ ಓವೈಸಿ, ಸುಪ್ರೀಂ ಕೋರ್ಟ್‌ನಲ್ಲಿ ವಕ್ಫ್ (ತಿದ್ದುಪಡಿ) ಮಸೂದೆಯ ಸಿಂಧುತ್ವವನ್ನು ಪ್ರಶ್ನಿಸಿ, ಇದು ಸಾಂವಿಧಾನಿಕ ನಿಬಂಧನೆಗಳನ್ನು ಉಲ್ಲಂಘಿಸುತ್ತದೆ ಎಂದು ಹೇಳಿದ್ದಾರೆ.

ವಕೀಲ ಅನಸ್ ತನ್ವೀರ್ ಮೂಲಕ ಸಲ್ಲಿಸಲಾದ ಅರ್ಜಿಯಲ್ಲಿ, ಇತರ ಧಾರ್ಮಿಕ ದತ್ತಿಗಳ ಆಡಳಿತದಲ್ಲಿ ಇಲ್ಲದ ನಿರ್ಬಂಧಗಳನ್ನು ವಿಧಿಸುವ ಮೂಲಕ ಮುಸ್ಲಿಂ ಸಮುದಾಯದ ವಿರುದ್ಧ ತಾರತಮ್ಯ ಮಾಡಲಾಗಿದೆ ಎಂದು ಸಂಸದ ಮೊಹಮದ್ ಜಾವೇದ್ ಆರೋಪ ಮಾಡಿದ್ದಾರೆ.

ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿಗಳ ಸಲ್ಲಿಕೆ

ವಕ್ಫ್ (ತಿದ್ದುಪಡಿ) ಮಸೂದೆ ಮಸೂದೆಯ ಸಿಂಧುತ್ವವನ್ನು ಪ್ರಶ್ನಿಸಿ, ಕಾಂಗ್ರೇಸ್ ಸಂಸದ ಮೊಹಮದ್ ಜಾವೇದ್ ಮತ್ತು ಆಲ್ ಇಂಡಿಯಾ ಮಜ್ಲಿಸ್-ಎ-ಇತ್ತೆಹಾದುಲ್ ಮುಸ್ಲಿಮೀನ್ (ಎಐಎಂಐಎಂ) ಅಧ್ಯಕ್ಷ ಅಸಾದುದ್ದೀನ್ ಓವೈಸಿ ಶುಕ್ರವಾರ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದಾರೆ. ಮಸೂದೆಯು ವಕ್ಫ್ ಆಸ್ತಿಗಳು ಮತ್ತು ಅವುಗಳ ನಿರ್ವಹಣೆಯ ಮೇಲೆ ಅನಿಯಂತ್ರಿತ ನಿರ್ಬಂಧ ವಿಧಿಸುತ್ತದೆ. ಹಾಗೂ ಮುಸ್ಲಿಂ ಸಮುದಾಯದ ಧಾರ್ಮಿಕ ಸ್ವಾಯತ್ತತೆಯನ್ನು ದುರ್ಬಲಗೊಳಿಸುತ್ತದೆ ಎಂದು ಜಾವೇದ್ ತಮ ಅರ್ಜಿಯಲ್ಲಿ ಆರೋಪಿಸಿದ್ದಾರೆ.

ಬಿಜೆಪಿ ದುರ್ಬಲವಾದರೆ ಭಾರತದ ಜಾಗತಿಕ ನಾಯಕನ ಸ್ಥಾನಕ್ಕೆ ಅಡೆತಡೆ : ಹಿಮಂತ ಬಿಸ್ವಾ ಶರ್ಮಾ

ಗುವಾಹಟಿ: ಆಡಳಿತಾರೂಢ ಭಾರತೀಯ ಜನತಾ ಪಕ್ಷವನ್ನು ದುರ್ಬಲಗೊಳಿಸುವುದು ಎಂದರೆ ಜಾಗತಿಕ ನಾಯಕನ ಸ್ಥಾನವನ್ನು ಪಡೆಯುವ ಭಾರತದ ಹಾದಿಯಲ್ಲಿ ಅಸಂಖ್ಯಾತ ಅಡೆತಡೆಗಳನ್ನು ಸೃಷ್ಟಿಸುತ್ತದೆ ಎಂದು ಅಸ್ಸಾ 0 ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಹೇಳಿದ್ದಾರೆ.

ಬಿಜೆಪಿಯ 46 ನೇ ಸಂಸ್ಥಾಪನಾ ದಿನದ ಸಂದರ್ಭದಲ್ಲಿ ಪಕ್ಷದ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಶರ್ಮಾ, ಸೂರ್ಯ ಮತ್ತು ಚಂದ್ರ ಇರುವವರೆಗೂ ಕೇಸರಿ ಪಕ್ಷವು ರಾಷ್ಟ್ರಕ್ಕೆ ಸೇವೆ ಸಲ್ಲಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಬಿಜೆಪಿಯನ್ನು ದುರ್ಬಲಗೊಳಿಸುವುದು ಎಂದರೆ ಯಾವುದೇ ವ್ಯಕ್ತಿಯನ್ನು ದುರ್ಬಲ ಗೊಳಿಸುವುದು ಎಂದರ್ಥವಲ್ಲ. ಇದರರ್ಥ ಒಂದು ಸಿದ್ಧಾಂತ ಮತ್ತು ರಾಷ್ಟ್ರೀಯ ಹೆಮ್ಮೆಯನ್ನು ದುರ್ಬಲಗೊಳಿಸುವುದು ಎಂದಿದ್ದಾರೆ. ಬಿಜೆಪಿಯನ್ನು ದುರ್ಬಲಗೊಳಿಸುವುದು ಎಂದರೆ ಭಾರತವನ್ನು ವಿಶ್ವ ವೇದಿಕೆಗೆ ಕೊಂಡೊಯ್ಯುವ ಹಾದಿಯಲ್ಲಿ ಅಸಂಖ್ಯಾತ ಅಡೆತಡೆಗಳನ್ನು ಸೃಷ್ಟಿಸುವುದು ಎಂದು ಅವರು ಹೇಳಿದರು. ಮುಂಬರುವ ವರ್ಷಗಳಲ್ಲಿ ಭಾರತವನ್ನು ಜಾಗತಿಕ ನಾಯಕನನ್ನಾಗಿ ಮಾಡುವ ಪ್ರತಿಜ್ಞೆಯನ್ನು ತೆಗೆದುಕೊಳ್ಳುವಂತೆ ಶರ್ಮಾ ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರಿಗೆ ಮನವಿ ಮಾಡಿದರು.

ಸೂರ್ಯ ಮತ್ತು ಚಂದ್ರ ಇರುವವರೆಗೂ ಬಿಜೆಪಿ ರಾಷ್ಟ್ರದ ಸೇವೆ ಮಾಡುತ್ತದೆ. ನಾನು ಅದೇ ರೀತಿ ಬಯಸುತ್ತೇನೆ. ರಾಷ್ಟ್ರದ ಸೇವೆಗೆ ತಮ್ಮನ್ನು ತಾವು ಸಮರ್ಪಿಸಿಕೊಳ್ಳುವಂತೆ ನಾನು ಎಲ್ಲರಿಗೂ ಮನವಿ ಮಾಡುತ್ತೇನೆ ಎಂದು ಅವರು ಹೇಳಿದರು. ಪ್ರಗತಿ ಮತ್ತು ಬೆಳವಣಿಗೆಯತ್ತ ಸಾಗುತ್ತಿರುವ ಪಕ್ಷವನ್ನು ದುರ್ಬಲಗೊಳಿಸಲು, ದೂಷಿಸಲು ಅನೇಕ ವಿಭಾಗಗಳು ಪ್ರಯತ್ನಿಸುತ್ತವೆ ಎಂದು ಶರ್ಮಾ ಹೇಳಿದರು.

ಬಿಜೆಪಿ ವಿಶ್ವದ ಅತಿದೊಡ್ಡ ರಾಜಕೀಯ ಪಕ್ಷವಾಗಿ ಬೆಳೆಯಲು ಘಟಾನುಘಟಿ ನಾಯಕರ ನಾಯಕತ್ವ ಕಾರಣ: ಫಡ್ನವೀಸ್

ನಾಗುರ: ಬಿಜೆಪಿ ವಿಶ್ವದ ಅತಿದೊಡ್ಡ ರಾಜಕೀಯ ಪಕ್ಷವಾಗಲು ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ ಮತ್ತು ಶ್ಯಾಮ್ ಪ್ರಸಾದ್ ಮುಖರ್ಜಿ, ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಮತ್ತು ಅಟಲ್ ಬಿಹಾರಿ ವಾಜಪೇಯಿ ಅವರಂತಹ ಘಟಾನುಘಟಿ ನಾಯಕರ ಪ್ರಯತ್ನಗಳು ಕಾರಣ ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಹೇಳಿದ್ದಾರೆ.

ಬಿಜೆಪಿಯನ್ನು ಏಪ್ರಿಲ್ 6, 1980ರಂದು ಹಿಂದಿನ ಭಾರತೀಯ ಜನಸಂಘದ ನಾಯಕರು ಸ್ಥಾಪಿಸಿದರು. ಇದು ಇತರ ವಿರೋಧ ಪಕ್ಷಗಳೊಂದಿಗೆ ವಿಲೀನಗೊಂಡು 1977 ರ ತುರ್ತು ಪರಿಸ್ಥಿತಿಯ ನಂತರದ ಚುನಾವಣೆಯಲ್ಲಿ ಕಾಂಗ್ರೇಸ್ ಅನ್ನು ಎದುರಿಸಲು ಜನತಾ ಪಕ್ಷವನ್ನು ರಚಿಸಿತು.

1984 ರಲ್ಲಿ ಸ್ಪರ್ಧಿಸಿದ ಮೊದಲ ರಾಷ್ಟ್ರೀಯ ಚುನಾವಣೆಯಲ್ಲಿ ಬಿಜೆಪಿ ಕೇವಲ ಎರಡು ಲೋಕಸಭಾ ಸ್ಥಾನಗಳನ್ನು ಗೆದ್ದಿತು.

ಆದಾಗ್ಯೂ, ಅಟಲ್ ಬಿಹಾರಿ ವಾಜಪೇಯಿ ಮತ್ತು ಎಲ್.ಕೆ.ಅಡ್ವಾಣಿ ಅವರ ನಾಯಕತ್ವದಲ್ಲಿ 90 ರ ದಶಕದಲ್ಲಿ ಸಮ್ಮಿಶ್ರ ಸರ್ಕಾರದ ಮುಖ್ಯಸ್ಥರಾಗಿ ಅಧಿಕಾರಕ್ಕೆ ಬಂದ ನಂತರ, 2014 ರಲ್ಲಿ ಮೋದಿ ಪಕ್ಷವನ್ನು ಅದರ ಮೊದಲ ಬಹುಮತಕ್ಕೆ ಮುನ್ನಡೆಸುವ ಮೊದಲು ಅದು ವೇಗವಾಗಿ ಬೆಳೆಯಿತು ಎಂದಿದ್ದಾರೆ.

ಅಂದಿನಿಂದ ಪಕ್ಷವು ಕೇಂದ್ರದಲ್ಲಿ ಅಧಿಕಾರದಲ್ಲಿದೆ. ಕೇಂದ್ರ ಸಚಿವ ನಿತಿನ್ ಗಡ್ಕರಿ ನಾಗುರದಲ್ಲಿ ಬಿಜೆಪಿಯ ಹೊಸ ಕಚೇರಿಗೆ ಶಂಕುಸ್ಥಾಪನೆ ನೆರವೇರಿಸಿದ ನಂತರ ಫಡ್ನವೀಸ್ ಮಾತನಾಡುತ್ತಿದ್ದರು.

ಇದು ನಮ್ಮ ಸ್ವಂತ ಮನೆಯ ಅಡಿಪಾಯ ಸಮಾರಂಭದಂತೆ ಭಾಸವಾಗುತ್ತಿದೆ ಎಂದು ಸಿಎಂ ಹೇಳಿದರು.

ಶ್ಯಾಮ್ ಪ್ರಸಾದ್ ಮುಖರ್ಜಿ, ಪಂಡಿತ್ ದೀನ್ ದಯಾಳ್ ಉಪಾಧ್ಯಾಯ, ಅಟಲ್ ಬಿಹಾರಿ ವಾಜಪೇಯಿ ಮತ್ತು ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಲ್ಲಿ ಬಿಜೆಪಿ ವಿಶ್ವದ ಅತಿದೊಡ್ಡ ಪಕ್ಷವಾಗಿ ಮಾರ್ಪಟ್ಟಿದೆ ಎಂದು ಫಡ್ನವೀಸ್ ಹೇಳಿದರು.

ಅವರು ಹೊಸ ಬಿಜೆಪಿ ಕಚೇರಿಗೆ 5 ಲಕ್ಷ ರೂ. ನೀಡಿದರು ಪಕ್ಷದ ಎಲ್ಲಾ ಕಾರ್ಯಕರ್ತರು ತಮ್ಮ ಸಾಮರ್ಥ್ಯಕ್ಕೆ ಅನುಗುಣವಾಗಿ ಕೊಡುಗೆ ನೀಡುವಂತೆ ವಿನಂತಿಸಿದರು.

● ಚೇನಾದ ವಿಸ್ತರಣಾ ತಂತ್ರಕ್ಕೆ ತಡೆ ಹಾಕಲು ಉಭಯ ದೇಶಗಳ ನಿರ್ಧಾರ

ಭಾರತ-ಶ್ರೀಲಂಕಾ ಬಾಂಧವ್ಯ ವೃದ್ಧಿಗೆ ಹಲವು ಒಪ್ಪಂದ

ಕೊಲೊಂಬೊ: ಹಿಂದೂ ಮಹಾಸಾಗರ ವ್ಯಾಪ್ತಿಯಲ್ಲಿ ಕಡಲ ಭದ್ರತೆ, ರಕ್ಷಣಾ ಸಹಕಾರ, ಇಂಧನ, ಆರೋಗ್ಯ ಕ್ಷೇತ್ರ ಒಳಗೊಂಡು ಏಳು ಒಪ್ಪಂದಗಳಿಗೆ ಭಾರತ-ಶ್ರೀಲಂಕಾ ಶನಿವಾರ ಸಹಿ ಹಾಕಿವೆ. ನೆರೆಯ ಚೀನಾದ ವಿಸ್ತರಣಾ ತಂತ್ರಗಾರಿಕೆ ತಡೆಯಲು ದ್ವೀಪ ರಾಷ್ಟ್ರದ ಜತೆಗಿನ ಸಂಬಂಧಕ್ಕೆ ಮತ್ತಷ್ಟು ಒತ್ತು ನೀಡಲು ಭಾರತ ಮುಂದಾಗಿದೆ.

- ಚೀನಾದ ವಿಸ್ತರಣಾ ತಂತ್ರಕ್ಕೆ ತಡೆ ಹಾಕಲು ಉಭಯ ದೇಶಗಳ ನಿರ್ಧಾರ
- ಐತಿಹಾಸಿಕ ರಕ್ಷಣಾ ಒಪ್ಪಂದಕ್ಕೆ ಅಂಕಿತ
- ಇಂಧನ ಕೊರತೆ ನೀಗಿಸಲು ಭಾರತದ ರಾಷ ್ಟ್ರೀಯ ಉಷ್ಣ ವಿದ್ಯುತ್ ನಿಗಮ ಹಾಗೂ ಲಂಕಾದ ಸಿಲೋನ್ ವಿದ್ಯುತ್ ಮಂಡಳಿ ಜತೆಗಿನ ಜಂಟಿ ಒಪ್ಪಂದದಂತೆ ಮೋದಿ ಸಹಿ ಹಾಕಿದರು.

ಮೂರು ದಿನಗಳ ಶ್ರೀಲಂಕಾ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಸಿಂಹಳೀಯ ದೇಶದ ಅಧ್ಯಕ್ಷ ಅನುರಾ ಕುಮಾರ ದಿಸಾನಾಯಕ ಜತೆ ಮಹತ್ವದ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಪ್ರಾದೇಶಿಕ ರಾಜಕೀಯ ಕಾರ್ಯತಂತ್ರದ ಭಾಗವಾಗಿ ಉಭಯ ದೇಶಗಳ ನಡುವಿನ ಬಾಂಧವ್ಯವನ್ನು ಗಟ್ಟಿಗೊಳಿಸಲು ಉಭಯ ನಾಯಕರು, ರಕ್ಷಣೆ, ಇಂಧನ, ಡಿಜಿಟಲ್ ಮೂಲಸೌಕರ್ಯ ಅಭಿವೃದ್ಧಿ, ಆರೋಗ್ಯ, ವ್ಯಾಪಾರ, ಕಡಲ ಭದ್ರತೆ ವಿಚಾರದಲ್ಲಿ ಪರಸ್ಪರ ಸಹಕಾರ ಮನೋಭಾವದಿಂದ ಮುಂದುವರಿಯಲು ಪ್ರಮುಖ 7 ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿದರು.

ಇಂಧನ ಕೊರತೆ ನೀಗಿಸಲು ಭಾರತದ ರಾಷ್ಟ್ರೀಯ ಉಷ್ಣ ವಿದ್ಯುತ್ ನಿಗಮ

ಮುಂಬೈ ಇಂಡಿಯನ್ಸ್ ಬಳಗಕ್ಕೆ ಕ್ವಿಂಟನ್ ಡಿಕಾಕ್ ಎಂಟ್ರಿ

ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಪರ ಕಣಕ್ಕಿಳಿಯುತ್ತಿರುವ ಕ್ವಿಂಟನ್ ಡಿಕಾಕ್ ಮುಂಬೈ ಇಂಡಿಯನ್ಸ್ ಬಳಗಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಅದು ಕೂಡ ಮುಂಬರುವ ಮೇಜರ್ ಲೀಗ್ ಕ್ರಿಕೆಟ್ ಟೂರ್ನಿಗಾಗಿ ಎಂಬುದು ವಿಶೇಷ. ಅಂದರೆ ಅಮೆರಿಕದಲ್ಲಿ ನಡೆಯಲಿರುವ 2025 ಟಿ20 ಲೀಗ್‌ನಲ್ಲಿ ಕ್ವಿಂಟನ್ ಡಿಕಾಕ್ ಮುಂಬೈ ಇಂಡಿಯನ್ಸ್ ನ್ಯೂಯಾರ್ಕ್ ತಂಡದ ಪರ ಕಣಕ್ಕಿಳಿಯಲಿದ್ದಾರೆ. 2023 ರಿಂದ ಶುರುವಾದ ಮೇಜರ್ ಲೀಗ್ ಕ್ರಿಕೆಟ್ ಟೂರ್ನಿಯಲ್ಲಿ ಒಟ್ಟು 6 ತಂಡಗಳು ಕಣಕ್ಕಿಳಿಯುತ್ತಿದ್ದು, ಇದೀಗ ಈ ತಂಡಗಳ ಡ್ರಾಫ್ಟ್ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಇದರ ನಡುವೆ ಮುಂಬೈ ಇಂಡಿಯನ್ಸ್ ಫ್ರಾಂಚೈಸಿ ಎಂಐ ನ್ಯೂಯಾರ್ಕ್ ತಂಡಕ್ಕೆ ಸೌತ್ ಆಫ್ರಿಕಾದ ದಾಂಡಿಗ ಕ್ವಿಂಟನ್ ಡಿಕಾಕ್ ಅವರನ್ನು ಆಯ್ಕೆ ಮಾಡಿಕೊಂಡಿದೆ. ಇನ್ನು ಕಳೆದ ಸೀಸನ್‌ನಲ್ಲಿ ಎಂಐ ನ್ಯೂಯಾರ್ಕ್ ಪರ ಕಣಕ್ಕಿಳಿದಿದ್ದ ಟಿಮ್ ಡೇವಿಡ್, ಅನ್ರಿಕ್ ನೋಕಿಯಾ, ಕಗಿಸೊ ರಬಾಡ ಮತ್ತು ಉದಯೋನ್ಮುಖ ತಾರೆ ಡೆವಾಲ್ಡ್ ಬ್ರೆವಿಸ್ ಸೇರಿದಂತೆ ಪ್ರಮುಖ ಅಂತರರಾಷ್ಟ್ರೀಯ ಆಟಗಾರರನ್ನು ತಂಡದಿಂದ ಕೈ ಬಿಟ್ಟಿದ್ದಾರೆ. ಈ ಮೂಲಕ ಡಿಕಾಕ್ ಸೇರಿದಂತೆ ಒಂದಷ್ಟು ಆಟಗಾರರನ್ನು ತಂಡಕ್ಕೆ ಸೇರ್ಪಡೆಗೊಳಿಸಿದ್ದಾರೆ. ಹಾಗೆಯೇ ಕಳೆದೆರಡು ಸೀಸನ್‌ನಲ್ಲಿ ಎಂಐ ನ್ಯೂಯಾರ್ಕ್ ಪರ ಕಣಕ್ಕಿಳಿದಿದ್ದ ಪೂರನ್, ರಶೀದ್ ಖಾನ್, ಬಾರಿ ಕೂಡ ತಂಡದಲ್ಲೇ ಕೀರನ್ ಪೊಲಾರ್ಡ್ ಐಪಿಎಲ್‌ನಲ್ಲಿ ತಂಡದ ಬ್ಯಾಟಿಂಗ್ ಕಾರ್ಯ ನಿರ್ವಹಿಸುತ್ತಿದ್ದಾರೆ. ಅತ್ತ ಮೇಜರ್ ಲೀಗ್ ಕ್ರಿಕೆಟ್ ಟೂರ್ನಿಯಲ್ಲಿ ಎಂಐ ಪರ ಆಟಗಾರನಾಗಿ ಕಣಕ್ಕಿಳಿಯುತ್ತಿರುವುದು ವಿಶೇಷ.

ಎಂಐ ನ್ಯೂಯಾರ್ಕ್ ತಂಡ: ಕೀರನ್ ಪೊಲಾರ್ಡ್, ನಿಕೋಲಸ್ ಪೂರನ್, ಟ್ರೆಂಟ್ ಬೌಲ್ಟ್, ರಶೀದ್ ಖಾನ್, ಮೊನಾಂಕ್ ಪಟೇಲ್, ನೊಸ್ತುಶ್ ಕೆಂಜಿಗೆ, ಹೀತ್ ರಿಚರ್ಡ್ಸ್, ಎಹ್ಸಾನ್ ಆದಿಲ್, ಸನ್ನಿ ಪಟೇಲ್, ರುಶಿಲ್ ಉಗಾರ್ಕರ್, ಜಾರ್ಜ್ ಲಿಂಡೆ, ಕ್ವಿಂಟನ್ ಡಿ ಕಾಕ್, ಮೈಕೆಲ್ ಬ್ರೇಸ್‌ವೆಲ್, ನವೀನ್ ಉಲ್ ಹಕ್, ಅಝ್ಮತುಲ್ಲಾ ಒಮರ್‌ಝಾಹಿ, ಕುನ್ವರ್ಜೀತ್ ಸಿಂಗ್, ಶರದ್ ಲುಂಬಾ, ತಜೀಂದರ್ ಸಿಂಗ್ ಮತ್ತು ಅಗ್ನಿ ಚೋಪ್ರಾ.

ಐಪಿಎಲ್‌ನಲ್ಲಿ ಅತ್ಯಂತ ಈಟಿ ದಾಖಲೆ ಧೋನಿ

ಐಪಿಎಲ್ 2025: ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಮಹೇಂದ್ರ ಸಿಂಗ್ ಧೋನಿ ಹಲವು ದಾಖಲೆಗಳನ್ನು ನಿರ್ಮಿಸಿದ್ದಾರೆ. ಈ ದಾಖಲೆಗಳಲ್ಲಿ ಕೆಲವು ವಿಶ್ವ ದಾಖಲೆಯಾದರೆ, ಇನ್ನು ಕೆಲವು ಅನಗತ್ಯ ದಾಖಲೆಗಳು. ಇದೀಗ ಈ ಅನಗತ್ಯ ದಾಖಲೆ ಪಟ್ಟಿಗೆ ಮತ್ತೊಂದು ರೆಕಾರ್ಡ್ ಸೇರಿದೆ. ಅದು ಸಹ ನಿಧಾನಗತಿಯ ಬ್ಯಾಟಿಂಗ್‌ನೊಂದಿಗೆ..! ಹೌದು, ಐಪಿಎಲ್ 2025 ರಲ್ಲಿ ಒಂದು ಬೌಂಡರಿ ಬಾರಿಸಲು ಅತ್ಯಧಿಕ ಎಸೆತಗಳನ್ನು ತೆಗೆದುಕೊಂಡ ಬ್ಯಾಟರ್ ಎಂಬ ಹೀನಾಯ ದಾಖಲೆಯೊಂದು ಮಹೇಂದ್ರ ಸಿಂಗ್ ಧೋನಿ ಹೆಸರಿಗೆ ಸೇರ್ಪಡೆಯಾಗಿದೆ. ಚೆನ್ನೈನ ಚೆಪಾಕ್ ಸ್ಟೇಡಿಯಂನಲ್ಲಿ ನಡೆದ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧದ ಪಂದ್ಯದಲ್ಲಿ ಧೋನಿ ತನ್ನ ಇನಿಂಗ್ಸ್‌ನ ಮೊದಲ ಬೌಂಡರಿ ಬಾರಿಸಲು ತಗೆದುಕೊಂಡಿದ್ದು ಬರೋಬ್ಬರಿ 19 ಎಸೆತಗಳನ್ನು ಎಂದರೆ ನಂಬಲೇಬೇಕು. ಈ ಪಂದ್ಯದ ದ್ವಿತೀಯ ಇನಿಂಗ್ಸ್‌ನಲ್ಲಿ ಮಹೇಂದ್ರ ಸಿಂಗ್ ಧೋನಿ 11ನೇ ಓವರ್‌ನಲ್ಲಿ ಕಣಕ್ಕಿಳಿದಿದ್ದರು. ಇದಾಗ್ಯೂ ಅವರ ಬ್ಯಾಟ್‌ನಿಂದ ಒಂದು ಬೌಂಡರಿ ಮೂಡಿಬಂದಿದ್ದು 18ನೇ ಓವರ್‌ನಲ್ಲಿ ಮುಖೇಶ್ ಕುಮಾರ್ ಎಸೆದ 18ನೇ ಓವರ್‌ನ 4ನೇ ಎಸೆತದಲ್ಲಿ ಧೋನಿ ಸಿಕ್ಸ್ ಬಾರಿಸಿದ್ದರು. ಈ ಮೂಲಕ ಐಪಿಎಲ್ 2025 ರಲ್ಲಿ ಒಂದು ಬೌಂಡರಿ (ಸಿಕ್ಸ್/ಫೋರ್) ಬಾರಿಸಲು ಅತ್ಯಧಿಕ ಎಸೆತಗಳನ್ನು ತೆಗೆದುಕೊಂಡ ಬ್ಯಾಟರ್ ಎಂಬ ಹೀನಾಯ ದಾಖಲೆಯೊಂದನ್ನು ಧೋನಿ ತಮ್ಮದಾಗಿಸಿಕೊಂಡರು. ಅಲ್ಲದೆ ಈ ಪಂದ್ಯದಲ್ಲಿ 26 ಎಸೆತಗಳನ್ನು ಎದುರಿಸಿದ ಧೋನಿ 1 ಸಿಕ್ಸ್, 1 ಫೋರ್‌ನೊಂದಿಗೆ ಕೇವಲ 30 ರನ್‌ಗಳಿಸಲಷ್ಟೇ ಶಕ್ತರಾದರು. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಪರ ಕೆಎಲ್ ರಾಹುಲ್ (77) ಅರ್ಧಶತಕ ಬಾರಿಸಿದರು. ಈ ಅರ್ಧಶತಕದ ನೆರವಿನೊಂದಿಗೆ ಡೆಲ್ಲಿ ಕ್ಯಾಪಿಟಲ್ಸ್ ತಂಡ 183 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್ ತಂಡವು 158 ರನ್‌ಗಳಿಸಲಷ್ಟೇ ಶಕ್ತರಾಗಿದ್ದಾರೆ. ಈ ಮೂಲಕ 25 ರನ್‌ಗಳಿಂದ ಸಿಎಸ್‌ಕೆ ಸೋಲೊಪ್ಪಿಕೊಂಡಿದೆ.

ಹೈದರಾಬಾದ್‌ಗೆ 4ನೇ ಹೀನಾಯ ಸೋಲು

ಸನ್ ರೈಸರ್ಸ್‌ಗೆ ಗುಜರಾತ್ ಗುನ್ನ, ಗಿಲ್ ನಾಯಕನ ಆಟ ಟೈಟನ್ಸ್‌ಗೆ ಹ್ಯಾಟ್ರಿಕ್ ಜಯ

ಹೈದರಾಬಾದ್: 300 ರನ್ ಗುರಿ ಪೂರೈಸುವ ಗುರಿಯೊಂದಿಗೆ 2025ರ ಐಪಿಎಲ್ ಅಖಾಡಕ್ಕೆ ಧುಮುಕಿದ ಸನ್ ರೈಸರ್ಸ್ ಹೈದರಾಬಾದ್ ತಂಡಕ್ಕೆ ಆರಂಭದಲ್ಲೇ ಆಘಾತವಾಗಿದೆ. ಮೊದಲ ಪಂದ್ಯದಲ್ಲಿ ಅಬ್ಬರಿಸಿ ಬೊಬ್ಬರಿದಿದ್ದ ಆರೆಂಜ್ ಆರ್ಮಿಗೆ ಮುಂದಿನ ಸತತ ನಾಲ್ಕು ಪಂದ್ಯಗಳಲ್ಲೂ ಹೀನಾಯ ಸೋಲು ಕಂಡು ಮುಖಭಂಗ ಅನುಭವಿಸಿದೆ. ಇಂದು ತವರಿನಲ್ಲಿ ನಡೆದ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಸನ್ ರೈಸರ್ಸ್ ವಿರುದ್ಧ 7 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಬೀಸಿದ ಸನ್‌ರೈಸರ್ಸ್ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 152 ರನ್ ಕಲೆ ಹಾಕಿತು. ಬಳಿಕ ಕಣಕ್ಕಿಳಿದ ಟೈಟಾನ್ಸ್ ತಂಡ 16.4 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 153 ರನ್ ಕಲೆಹಾಕಿ ಗೆಲುವು ಸಾಧಿಸಿತು. ಗುಜರಾತ್ ಪರ ಶುಭಮನ್ ಗಿಲ್ 43 ಎಸೆತಗಳಲ್ಲಿ 9 ಬೌಂಡರಿ ನೆರವಿಂದ 61 ರನ್, ಶೆರ್ಫೇನ್ ರುದರ್ಫೋರ್ಡ್ 16 ಎಸೆತಗಳಲ್ಲಿ 1 ಸಿಕ್ಸರ್, 6 ಬೌಂಡರಿ ಸಿಡಿಸಿ 35 ರನ್ ಕಲೆಹಾಕಿ ಔಟಾಗದೇ ಉಳಿದರು. ವಾಷಿಂಗ್ಟನ್ ಸುಂದರ್ 29 ಎಸೆತಗಳಲ್ಲಿ 2 ಸಿಕ್ಸರ್, 5 ಬೌಂಡರಿ ನೆರವಿಂದ 49 ರನ್ ಕಲೆ ಹಾಕಿದರು.

ಹೈದರಾಬಾದ್ ಪರ ಮೊಹಮ್ಮದ್ ಶಮಿ 2 ವಿಕೆಟ್, ಪ್ಯಾಟ್ ಕಮಿನ್ಸ್ 1 ವಿಕೆಟ್ ಕಬಳಿಸಿದರು. ಸನ್‌ರೈಸರ್ಸ್ ಹೈದರಾಬಾದ್ ಪರ ನಿತೀಶ್ ಕುಮಾರ್ ರೆಡ್ಡಿ 34 ಎಸೆತಗಳಲ್ಲಿ 3 ಬೌಂಡರಿ ನೆರವಿನಿಂದ 31 ರನ್, ಹೆನ್ರಿಚ್ ಕ್ಲಾಸೆನ್ 19 ಎಸೆತಗಳಲ್ಲಿ 1 ಸಿಕ್ಸರ್, 2 ಫೋರ್ ನೆರವಿನಿಂದ 27 ರನ್, ಪ್ಯಾಟ್ ಕಮಿನ್ಸ್ 9 ಎಸೆತಗಳಲ್ಲಿ 1 ಸಿಕ್ಸರ್, 3 ಬೌಂಡರಿ ನೆರವಿಂದ 22 ರನ್, ಅಭಿಷೇಕ್ ಶರ್ಮಾ 16 ಎಸೆತಗಳಲ್ಲಿ 4 ಬೌಂಡರಿ ಸಿಡಿಸಿ 18, ಅನಿಕೇತ್ ವರ್ಮಾ 15 ಎಸೆತಗಳಲ್ಲಿ 18 ರನ್ ಕಲೆಹಾಕಿದರು. ಗುಜರಾತ್ ಪರ ಮೊಹಮ್ಮದ್ ಸಿರಾಜ್ 4 ವಿಕೆಟ್, ಪ್ರಸಿದ್ಧ್ ಕೃಷ್ಣ, ಸಾಯಿ ಕಿಶೋರ್ ತಲಾ 2 ವಿಕೆಟ್ ಉರುಳಿಸಿದರು. ಹೈದರಾಬಾದ್ ಮೂಲದವರಾದ ಸಿರಾಜ್, ತಮ್ಮ ಸ್ಥಳೀಯ ನೆಚ್ಚಿನ ಮೈದಾನದಲ್ಲಿ ಮಾರಕ ದಾಳಿ ಸಂಘಟಿಸಿದ್ದರಲ್ಲದೆ ಕೇವಲ 17 ರನ್ ತೆತ್ತು ನಾಲ್ಕು ವಿಕೆಟ್ ಕಿತ್ತು ಮಿಂಚಿದರು. ಇದು ಐಪಿಎಲ್‌ನಲ್ಲಿ ಸಿರಾಜ್ ಅವರ ಜೀವನಶ್ರೇಷ್ಠ ಬೌಲಿಂಗ್ ಸಾಧನೆಯಾಗಿದೆ. ಅಂದ ಹಾಗೆ ಐಪಿಎಲ್‌ನಲ್ಲಿ ಅತಿ ಹೆಚ್ಚು ವಿಕೆಟ್ ಗಳಿಸಿದ ದಾಖಲೆ ಯಜುವೇಂದ್ರ ಚಾಹಲ್ ಅವರ ಹೆಸರಲ್ಲಿದೆ. ಚಾಹಲ್ ಒಟ್ಟು 206 ವಿಕೆಟ್‌ಗಳನ್ನು ಕಬಳಿಸಿದ್ದಾರೆ.

ಸಿರಾಜ್ 100 ವಿಕೆಟ್‌ಗಳ ಸಾಧನೆ

ಈ ಪಂದ್ಯದ ಮೂಲಕ ಇಂಡಿಯನ್ ಪ್ರೀಮಿಯರ್ ಲೀಗ್ ಟ್ವೆಂಟಿ-20 ಕ್ರಿಕೆಟ್ ಟೂರ್ನಿಯಲ್ಲಿ ಬಲಗೈ ವೇಗದ ಬೌಲರ್ ಮೊಹಮ್ಮದ್ ಸಿರಾಜ್ 100 ವಿಕೆಟ್‌ಗಳ ಸಾಧನೆ ಮಾಡಿದ್ದಾರೆ. ಈ ಬಾರಿಯ ಐಪಿಎಲ್‌ನಲ್ಲಿ ಗುಜರಾತ್ ಟೈಟನ್ಸ್ ತಂಡವನ್ನು ಪ್ರತಿನಿಧಿಸುತ್ತಿರುವ ಸಿರಾಜ್, ಇಂದು ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ನಡೆಯುತ್ತಿರುವ ಪಂದ್ಯದಲ್ಲಿ ಈ ಸಾಧನೆ ಮಾಡಿದ್ದಾರೆ.

ಆರ್‌ಸಿಬಿ- ಮುಂಬೈ ನಡುವೆ ಹೈವೋಲ್ಟೇಜ್ ಫೈಟ್

2025ರ ಐಪಿಎಲ್‌ನ 20ನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವು ತನ್ನ ತವರು ನೆಲವಾದ ವಾಂಖೆಡೆ ಕ್ರೀಡಾಂಗಣದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ. ತಮ್ಮ ತಮ್ಮ ಕೊನೆಯ ಪಂದ್ಯದಲ್ಲಿ ಎರಡು ತಂಡಗಳು ಸೋತಿರುವ ಕಾರಣ ಈ ಪಂದ್ಯ ಉಭಯ ತಂಡಗಳಿಗೆ ಅತ್ಯಂತ ಮಹತ್ವದಾಗಿದೆ. ಮುಂಬೈ ಇಂಡಿಯನ್ಸ್ ತಂಡ ತನ್ನ ಕೊನೆಯ ಪಂದ್ಯದಲ್ಲಿ ಲಕ್ನೋ ಸೂಪರ್‌ಜೈಂಟ್ಸ್ ವಿರುದ್ಧ 12 ರನ್‌ಗಳ ಸೋಲನ್ನು ಅನುಭವಿಸಿದರೆ, ಇತ್ತ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಗುಜರಾತ್ ಟೈಟಾನ್ಸ್ ವಿರುದ್ಧ ಈ ಸೀಸನ್ಸ್ ಮೊದಲ ಸೋಲನ್ನು ಅನುಭವಿಸಿತು.

ಮುಖಾಮುಖಿ ದಾಖಲೆ: ಮುಂಬೈ ಇಂಡಿಯನ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ನಡುವೆ ಇದುವರೆಗೆ ಒಟ್ಟು 33 ಪಂದ್ಯಗಳು ನಡೆದಿವೆ. ಇದರಲ್ಲಿ ಮುಂಬೈ ಇಂಡಿಯನ್ಸ್ 19 ಪಂದ್ಯಗಳಲ್ಲಿ ಜಯಗಳಿಸಿದ್ದರೆ, ಆರ್‌ಸಿಬಿ 14 ಪಂದ್ಯಗಳಲ್ಲಿ ಜಯಗಳಿಸಿದೆ. ಎರಡೂ ತಂಡಗಳ ನಡುವಿನ ಕಳೆದ ಐದು ಪಂದ್ಯಗಳನ್ನು ನೋಡಿದರೆ, ಆರ್‌ಸಿಬಿ ಇಲ್ಲಿ 3-2 ರಿಂದ ಮುನ್ನಡೆಯಲ್ಲಿದೆ. ಅಂತಹ ಪರಿಸ್ಥಿತಿಯಲ್ಲಿ, ಈ ಪಂದ್ಯವು ಆಸಕ್ತಿದಾಯಕವಾಗಿರಲಿದೆ. ಎರಡೂ ತಂಡಗಳ ಬ್ಯಾಟಿಂಗ್ ಬಲವನ್ನು ಗಮನಿಸಿದರೆ, ಈ ಪಂದ್ಯವು ಹೆಚ್ಚಿನ ಸ್ಕೋರಿಂಗ್ ಆಗುವ ನಿರೀಕ್ಷೆಯಿದೆ.

ಮುಂಬೈ vs ಆರ್‌ಸಿಬಿ ನಡುವಿನ ಪಂದ್ಯ ಯಾವಾಗ ಮತ್ತು ಎಲ್ಲಿ ನಡೆಯಲಿದೆ: ಮುಂಬೈ vs ಆರ್‌ಸಿಬಿ ನಡುವಿನ ಪಂದ್ಯ ಏಪ್ರಿಲ್ 7 ರಂದು ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆಯಲಿದೆ.

ಮುಂಬೈ vs ಆರ್‌ಸಿಬಿ ನಡುವಿನ ಪಂದ್ಯ ಯಾವ ಸಮಯಕ್ಕೆ ಆರಂಭವಾಗಲಿದೆ: ಮುಂಬೈ ಮತ್ತು ಆರ್‌ಸಿಬಿ ನಡುವಿನ ಪಂದ್ಯವು ಸಂಜೆ 7:30 ರಿಂದ ನಡೆಯಲಿದೆ. ಟಾಸ್ 7 ಗಂಟೆಗೆ ನಡೆಯಲಿದೆ.

ರಾಯಲ್ ಚಾಲೆಂಜರ್ಸ್ ಬೆಂಗಳೂರು

ಫಿಲಿಪ್ ಸಾಲ್ಟ್, ವಿರಾಟ್ ಕೊಹ್ಲಿ, ದೇವದತ್ ಪಡಿಕ್ಕಲ್, ರಜತ್ ಪಾಟಿದಾರ್ (ನಾಯಕ), ಲಿಯಾಮ್ ಲಿವಿಂಗ್‌ಸ್ಟೋನ್, ಜಿತೇಶ್ ಶರ್ಮಾ, ಟಿಮ್ ಡೇವಿಡ್, ಕೃನಾಲ್ ಪಾಂಡ್ಯ, ಭುವನೇಶ್ವರ್ ಕುಮಾರ್, ಜೋಶ್ ಹ್ಯಾಜಲ್‌ವುಡ್, ಯಶ್ ದಯಾಲ್, ಸುಯಶ್ ಶರ್ಮಾ, ರಸಿಖ್ ದಾರ್ ಸಲಾಮ್, ಮನೋಜ್ ಭಾಂಡಗೆ, ಜೇಕಬ್ ಬೆಥೆಲ್, ಸ್ವಪ್ನಿಲ್ ಸಿಂಗ್, ಅಭಿನಂದನ್ ಸಿಂಗ್, ರೊಮಾರಿಯೋ ಶೆಫರ್ಡ್, ಲುಂಗಿ ಎನ್‌ಗಿಡಿ, ನುವಾನ್ ತುಷಾರ, ಮೋಹಿತ್ ರಾಠಿ, ಸ್ವಸ್ತಿಕ್ ಚಿಕಾರಾ.

ಮುಂಬೈ ಇಂಡಿಯನ್ಸ್

ವಿಲ್ ಜಾಕ್ಸ್, ರಿಯಾನ್ ರಿಕೆಲ್ಟನ್, ಸೂರ್ಯಕುಮಾರ್ ಯಾದವ್, ಹಾರ್ದಿಕ್ ಪಾಂಡ್ಯ (ನಾಯಕ), ನಮನ್ ಧೀರ್, ರಾಜ್ ಬಾವಾ, ಮಿಚೆಲ್ ಸ್ಯಾಂಟ್ನರ್, ದೀಪಕ್ ಚಹಾರ್, ಅಶ್ವನಿ ಕುಮಾರ್, ವಿಘ್ನೇಶ್ ಪುತ್ತೂರು, ಟ್ರೆಂಟ್ ಬೌಲ್ಟ್, ತಿಲಕ್ ವರ್ಮಾ, ಕಾರ್ಬಿನ್ ಬಾಷ್, ರಾಬಿನ್ ಮಿಂಜ್, ಸತ್ಯನಾರಾಯಣ ರಾಜು, ಕರ್ಣ್ ಶರ್ಮಾ, ರೋಹಿತ್ ಶರ್ಮಾ, ಮುಜೀಬ್ ಉರ್ ರೆಹಮಾನ್, ರೀಸ್ ಟೋಪ್ಲಿ, ಬೆವನ್ ಜೇಕಬ್ಸ್, ಕೃಷ್ಣನ್ ಶ್ರೀಜಿತ್, ಅರ್ಜುನ್ ತೆಂಡೂಲ್ಕರ್, ಜಸ್ಪ್ರೀತ್ ಬುಮ್ರಾ

ಮುಂಬೈ vs ಆರ್‌ಸಿಬಿ ನಡುವಿನ ಪಂದ್ಯವನ್ನು ನೀವು ಯಾವ ಚಾನೆಲ್‌ನಲ್ಲಿ ನೇರಪ್ರಸಾರ ವೀಕ್ಷಿಸಬಹುದು: ಮುಂಬೈ vs ಆರ್‌ಸಿಬಿ ನಡುವಿನ ಪಂದ್ಯವನ್ನು ಅಭಿಮಾನಿಗಳು ಸ್ಟಾರ್ ಸ್ಪೋರ್ಟ್ಸ್ ನೆಟ್‌ವರ್ಕ್ ಚಾನೆಲ್‌ನಲ್ಲಿ ಟಿವಿಯಲ್ಲಿ ವೀಕ್ಷಿಸಬಹುದು. ಹಾಗೆಯೇ ಜಿಯೋ ಹಾಟ್‌ಸ್ಟಾರ್ ಅಪ್ಲಿಕೇಶನ್ನಲ್ಲಿ ಪಂದ್ಯದ ನೇರ ಪ್ರಸಾರವನ್ನು ವೀಕ್ಷಿಸಬಹುದು.

ನಾನು ಇಷ್ಟು ಗಟ್ಟಿಯಾರೋಕೆ ತಂದೆಯೇ ಕಾರಣ

ಬಿಗ್ ಬಾಸ್ ಖ್ಯಾತಿಯ ನಿವೇದಿತಾ ಗೌಡ ಶೋವೊಂದರಲ್ಲಿ ಜೀವನದಲ್ಲಿ ನಡೆದ ಸಂಕಷ್ಟದ ದಿನಗಳನ್ನು ನೆನೆದು ಕಣ್ಣೀರಿಟ್ಟಿದ್ದಾರೆ. ನನ್ನ ಲೈಫ್‌ನಲ್ಲಿ ಏನೇನೋ ಒಂದಷ್ಟು ಆದ್ಮೇಲೆ ನಾನು ಇಷ್ಟು ಗಟ್ಟಿ ಆಗಿರೋಕೆ ನನ್ನ ತಂದೆಯೇ ಕಾರಣ ಎಂದು ನಿವೇದಿತಾ ಭಾವುಕರಾಗಿದ್ದಾರೆ. ಚಂದನ್ ಶೆಟ್ಟಿ ಜೊತೆಗಿನ ಡಿವೋರ್ಸ್ ಬಳಿಕ 'ಬಾಯ್ಸ್ ವರ್ಸಸ್ ಗರ್ಲ್ಸ್' ಶೋನಲ್ಲಿ ಸ್ಪರ್ಧಿಯಾಗಿ ನಿವೇದಿತಾ ಆ್ಯಕ್ಟೀವ್ ಆಗಿದ್ದಾರೆ. ಡಿವೋರ್ಸ್ ಆದ್ಮೇಲೆ ಜೀವನದಲ್ಲಿ ಎದುರಿಸುತ್ತಿರುವ ಸವಾಲುಗಳ ಬಗ್ಗೆ ನಟಿ ಮಾತನಾಡಿದ್ದಾರೆ. ಈ ಶೋನಲ್ಲಿ ನಿವೇದಿತಾ ಹಾಗೂ ಧನರಾಜ್ ಆಚಾರ್ ಇಬ್ಬರೂ ತಂದೆ-ಮಗಳ ಬಾಂಧವ್ಯದ ಕುರಿತ ಹಾಡಿಗೆ ಹೆಜ್ಜೆ ಹಾಕಿದ್ದಾರೆ. ಆ ವೇಳೆ ನಿವೇದಿತಾ ಸಖತ್ ಎಮೋಷನಲ್ ಆಗಿ ಮಾತನಾಡಿದ್ದಾರೆ. ನನ್ನ ಲೈಫ್‌ನಲ್ಲಿ ಏನೇನೋ ಒಂದಷ್ಟು ಆದ್ಮೇಲೆ ನಾನು ಇಷ್ಟು ಗಟ್ಟಿ ಆಗಿರೋಕೆ ನನ್ನ ತಂದೆಯೇ ಕಾರಣ. ನಾನು ನಿನ್ನ ಜೊತೆಗೆ ಇದೀನಿ, ತಲೆ ಕೆಡಿಸಿಕೊಳ್ಳಬೇಡ ಅಂತ ಹೇಳುತ್ತಾರೆ. ಇದು ಅವರಿಗೆ ನಿಜಕ್ಕೂ ಕಷ್ಟ ಎಂದು ನಿವೇದಿತಾ ಅವರು ಹೇಳಿದ್ದಾರೆ. ನಿವೇದಿತಾ ಮಾತು ಕೇಳಿ ಐಶ್ವರ್ಯಾ, ಅನುಪಮಾ ಗೌಡ, ರಜತ್ ಕಣ್ಣೀರಿಟ್ಟಿದ್ದಾರೆ. ಆಗ ಕಾರ್ಯಕ್ರಮಕ್ಕೆ ಅತಿಥಿಯಾಗಿ ಬಂದಿದ್ದ ನೆನಪಿರಲಿ ಪ್ರೇಮ್ ಮಾತನಾಡಿ, ಪ್ರಪಂಚದಲ್ಲಿ ತಂದೆ ಅನ್ನೋ ಜೀವನೇ ಹಾಗೆ. ವಿಶೇಷವಾಗಿ ಹೆಣ್ಣು ಮಕ್ಕಳು ಏನಾದರೂ ಕೇಳಿದಾಗ ಜೀವ ಬಿಟ್ಟು, ಏನು ಬೇಕಿದ್ರೂ ತಂದುಕೊಡ್ತಾರೆ ಎಂದು ಹೇಳಿದ್ದಾರೆ. ಡಿವೋರ್ಸ್‌ಗೂ ಮುನ್ನ ಒಪ್ಪಿಕೊಂಡಿದ್ದ ಚಂದನ್ ಶೆಟ್ಟಿ ಜೊತೆಗಿನ 'ಮುದ್ದು ರಾಕ್ಷಸಿ' ಸಿನಿಮಾವನ್ನು ಇತ್ತೀಚೆಗೆ ನಿವೇದಿತಾ ಗೌಡ ಮುಗಿಸಿಕೊಟ್ಟರು.

ಬಾಯ್ಸ್‌ವರ್ಸಸ್ ಗರ್ಲ್ಸ್‌ಶೋಗೆ ವಿನಯ್ ಯಾಕೆ ಬರಲಿಲ್ಲ?



ಅನುಪಮಾ ಬಿಚ್ಚಿಟ್ಟ ಸತ್ಯ ಇದು

ಬಿಗ್ ಬಾಸ್ ಕನ್ನಡ 10' ಕಾರ್ಯಕ್ರಮದಲ್ಲಿ 3ನೇ ರನ್ನರ್ ಅಪ್ ಆಗಿದ್ದ ವಿನಯ್ ಗೌಡ ಇದೀಗ 'ಬಾಯ್ಸ್ ವರ್ಸಸ್ ಗರ್ಲ್ಸ್' ಶೋನಲ್ಲಿ ಸ್ಪರ್ಧಿಸುತ್ತಿದ್ದಾರೆ. ಬಾಯ್ಸ್ ತಂಡದ ಕ್ಯಾಪ್ಟನ್ ಆಗಿದ್ದಾರೆ ವಿನಯ್ ಗೌಡ. ಇದೇ 'ಬಾಯ್ಸ್ ವರ್ಸಸ್ ಗರ್ಲ್ಸ್' ಶೋನಲ್ಲಿ ವಿನಯ್ ಗೌಡ ಪುಷ್ಪರಾಜ್ ಅವತಾರ ಹಾಕಿದ್ದೇ ಹಾಕಿದ್ದು.. ಜೀವಮಾನದಲ್ಲಿ ಪೊಲೀಸ್ ಸ್ಟೇಷನ್ ನೋಡಿರದ ವಿನಯ್ ಗೌಡ, ಸೀದಾ ಜೈಲಿಗೆ ಹೋಗುವ ಹಾಗಾಯ್ತು. ರಜತ್ ಜೊತೆ ಮಚ